ಸಂಪುಟ: 21, ಸಂಚಿಕೆ: 257, ಪುಟಗಳು: 8, ಮಂಗಳವಾರ, 25 ಜೂನ್ 2024 RNI NO. KARKAN/2002/08054
epaper: www.sanjemugilu.com




ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3

**ಸುಭಾಷಿತ**

ಸಂಕಷ್ಟ ಇಲ್ಲದಿದ್ದರೆ ನಮ್ಮ ತಪ್ಪುಗಳಿಂದ ನಾವು ಪಾಠ ಕಲಿಯುವುದಿಲ್ಲ.
। ಏಂಜಲಿನಾ ಜೋಲಿ

**ಪಂಚಾಂಗ**

(ಮಂಗಳವಾರ 25, ಜೂನ್-2024)
- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ಗ್ರೀಷ್ಮ ಋತು,
- ಜೇಷ್ಠ ಮಾಸ, ಕೃಷ್ಣ ಪಕ್ಷ
- ನಕ್ಷತ್ರ: ಶ್ರವಣ
- ವಾರ: ಮಂಗಳವಾರ, ತಿಥಿ : ಚತುರ್ಥಿ
- ರಾಹುಕಾಲ: 3.37 ರಿಂದ 5.13
- ಗುಳಿಕಕಾಲ: 12.24 ರಿಂದ 2.01
- ಯಮಗಂಡಕಾಲ: 9.13 ರಿಂದ 10.49




## ಸಂಕ್ಷಿಪ್ತ ಸುದ್ದಿ

### ತುರ್ತು ಪರಿಸ್ಥಿತಿ ಹೇರಿ ಸಂವಿಧಾನವನ್ನು ತುಳಿದು ಮೂಲಭೂತ ಸ್ವಾತಂತ್ರ್ಯವನ್ನು ಬುಡಮೇಲು ಮಾಡಿತ್ತು ಕಾಂಗ್ರೆಸ್



**ನವದೆಹಲಿ:** ತುರ್ತು ಪರಿಸ್ಥಿತಿ ಸಂದರ್ಭದಲ್ಲಿ ಕಾಂಗ್ರೆಸ್ ಸಂವಿಧಾನವನ್ನು ತುಳಿದು, ಮೂಲಭೂತ ಸ್ವಾತಂತ್ರ್ಯವನ್ನು ಬುಡಮೇಲು ಮಾಡಿತ್ತು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಭಾರತ ಕಂಡ ತುರ್ತು ಪರಿಸ್ಥಿತಿಗೆ 49ನೇ ವರ್ಷ, ಪ್ರಧಾನಿ ಮೋದಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಈ ಕುರಿತು ಎಕ್ಸ್ ನಲ್ಲಿ ಬರೆದಿರುವ ಅವರು, ತುರ್ತು ಪರಿಸ್ಥಿತಿಯ ಕರಾಳ ದಿನಗಳಲ್ಲಿ ಕಾಂಗ್ರೆಸ್ ಪಕ್ಷವು ಮೂಲಭೂತ ಸ್ವಾತಂತ್ರ್ಯವನ್ನು ಹೇಗೆ ಕೊನೆಗೊಳಿಸಿತು, ಪ್ರತಿಯೊಬ್ಬ ಭಾರತೀಯನು ಆಳವಾಗಿ ಗೌರವಿಸುವ ಭಾರತದ ಸಂವಿಧಾನವನ್ನು ಹೇಗೆ ತುಳಿಯಿತು ಎಂಬುದನ್ನು ಪುಟ 2

### ಸಿಎಂ ಆಪ್ತ, ಸಚಿವ ಕೆ.ವೆಂಕಟೇಶ್‌ನಿಂದ ಮೈಮುಲ್ ಅಧ್ಯಕ್ಷನಿಗೆ ಕಿರುಕುಳ ಆರೋಪ

**ಮೈಸೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಆಪ್ತ ಸಚಿವ ಕೆ. ವೆಂಕಟೇಶ್ ಅವರು ಕಿರುಕುಳ ನೀತ್ತಿದ್ದಾರೆ ಎಂದು ಮಾಜಿ ಶಾಸಕ ಕೆ.ಮಹದೇವ್ ಅವರ ಪುತ್ರ, ಮೈಮುಲ್ ಅಧ್ಯಕ್ಷ ಪಿ.ಎಂ.ಪ್ರಸನ್ನ ಗಂಭೀರ ಆರೋಪ ಮಾಡಿದ್ದಾರೆ. ಸಚಿವರು ತಮ್ಮ ಮಗನ ರಾಜಕೀಯ ಭವಿಷ್ಯಕ್ಕಾಗಿ ದ್ವೇಷದ ರಾಜಕಾರಣ ಮಾಡುತ್ತಿದ್ದು, ಅಧಿಕಾರಿಗಳನ್ನು ಬಳಸಿಕೊಂಡು ಕಿರುಕುಳ ನೀಡುತ್ತಿದ್ದಾರೆ.



ಪಿ.ಎಂ.ಪ್ರಸನ್ನ ಅವರಿಗೆ ಕಳೆದ 6 ತಿಂಗಳ ಅಂತರದಲ್ಲಿ 24 ನೋಟಿಸ್ ಕೊಟ್ಟಿದ್ದಾರೆ. ಮೈಮುಲ್ ಅಧ್ಯಕ್ಷ ಸ್ಥಾನದಿಂದ ಇಳಿಸಲು ಸಚಿವ ಕೆ.ವೆಂಕಟೇಶ್ ಅವರು ಸತತ ಪ್ರಯತ್ನ ಮಾಡುತ್ತಿದ್ದಾರೆ ಎಂದು ಹೇಳಿದರು. ಪುಟ 2

### ಬಹುಕೋಟಿ ಹಗರಣ ಕೇಸ್; ಇಡಿ ತನಿಖೆ ಬೆನ್ನಲ್ಲೇ ಎಸ್‌ಐಟಿಯಿಂದ

# ಮತ್ತೊಬ್ಬ ಆರೋಪಿ ಬಂಧನ!

**ಬೆಂಗಳೂರು:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ ತನಿಖೆ ಆರಂಭಿಸಿದ ಬೆನ್ನಲ್ಲೇ ಎಸ್‌ಐಟಿ ಅಧಿಕಾರಿಗಳು ಮತ್ತೊಬ್ಬ ಆರೋಪಿಯನ್ನು ಬಂಧಿಸಿದ್ದಾರೆ.

ಸಾಯಿತೇಜ ಬಂಧಿತ ಆರೋಪಿ. ಚನ್ನಗಿರಿಯಲ್ಲಿ ಎಸ್‌ಐಟಿ ಅಧಿಕಾರಿಗಳು ಆರೋಪಿಯನ್ನ ಬಂಧಿಸಿದ್ದಾರೆ. ಮೃತ ಚಂದ್ರಶೇಖರನ್ ಡೆತ್ ನೋಟ್‌ನಲ್ಲಿ ಹೆಸರು ಉಲ್ಲೇಖಿಸಿದ್ದರಿಂದ ಸಾಯಿತೇಜ ಎಂಬಾತನನ್ನ ಬಂಧಿಸಿರುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ.

**ತನಿಖೆ ಆರಂಭಿಸಿದ್ದ ಇಡಿ:** ಅಕ್ರಮ ಹಣ ವರ್ಗಾವಣೆ ಆರೋಪದ ಹಿನ್ನೆಲೆಯಲ್ಲಿ ಸೋಮವಾರವಷ್ಟೇ ಜಾರಿ ನಿರ್ದೇಶನಾಲಯ ಪ್ರತ್ಯೇಕವಾಗಿ ತನಿಖೆ ಆರಂಭಿಸಿತ್ತು. ಹಗರಣ ಸಂಬಂಧ ಈಗಾಗಲೇ ಜೈಲಿನಲ್ಲಿರೋ ಆರೋಪಿಗಳ ವಿಚಾರಣೆ ನಡೆಸಿರುವ ಜಾರಿ ನಿರ್ದೇಶನಾಲಯವು ನಿಗಮದ ವ್ಯವಸ್ಥಾಪಕ ನಿರ್ದೇಶಕ ಜೆ.ಜೆ ಪದ್ಮನಾಭ್ ಮತ್ತು ಪರುಶರಾಮ್ ಇಬ್ಬರ ಹೇಳಿಕೆಯನ್ನು ದಾಖಲಿಸಿಕೊಂಡಿದ್ದರು. ಮತ್ತೊಂದೆಡೆ ಪ್ರಕರಣ



ದಾಖಲಿಸಿಕೊಂಡಿರುವ ಸಿಬಿಐ ಕೂಡ ತನ್ನದೇ ಆಯಾಮದಲ್ಲಿ ತನಿಖೆ ನಡೆಸುತ್ತಿದೆ.

**ಒಟ್ಟು 9 ಆರೋಪಿಗಳ ಬಂಧನ:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣ ಪ್ರಕರಣದಲ್ಲಿ ಈವರೆಗೆ ಎಸ್‌ಐಟಿಯಿಂದ ಒಟ್ಟು 9 ಜನ ಆರೋಪಿಗಳನ್ನ ಬಂಧಿಸಲಾಗಿದೆ. ಒಟ್ಟು 94 ಕೋಟಿ 73 ಲಕ್ಷ ಅವ್ಯವಹಾರ ನಡೆದಿದೆ ಎನ್ನಲಾಗಿದ್ದು, ಈ ಪೈಕಿ ಎಸ್‌ಐಟಿ ಅಧಿಕಾರಿಗಳು 14.5 ಕೋಟಿ ನಗದು ಹಣ ವಶಕ್ಕೆ ಪಡೆದುಕೊಂಡಿದ್ದಾರೆ. ಪುಟ 2

# ಮಂಡ್ಯದಲ್ಲಿ ಜೆಡಿಎಸ್ ಫ್ಲೆಕ್ಸ್‌ಗಳಿಂದ ಹೆಚ್.ಡಿ.ರೇವಣ್ಣ ಕಿಕ್ ಔಟ್!

**ಮಂಡ್ಯ:** ಜೆಡಿಎಸ್ ಫ್ಲೆಕ್ಸ್ ಗಳಿಂದ ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡರ ಹಿರಿಯ ಮಗ ಹೆಚ್.ಡಿ ರೇವಣ್ಣ ಅವರನ್ನು ಕಿಕ್ ಔಟ್ ಮಾಡಲಾಗಿದೆ.

ಹೌದು. ಕುಮಾರಸ್ವಾಮಿ ಕೇಂದ್ರ ಸಚಿವರಾದ ಬಳಿಕ ಮಂಡ್ಯ ನಗರ ಸೇರಿದಂತೆ ಜಿಲ್ಲೆಯ ಹಲವೆಡೆ ಜೆಡಿಎಸ್ ನಿಂದ ಬೃಹತ್ ಫ್ಲೆಕ್ಸ್ ಗಳನ್ನು ಅಳವಡಿಸಲಾಗಿದೆ. ಆದರೆ ಈ ಫ್ಲೆಕ್ಸ್ ಗಳಲ್ಲಿ ಮಾಜಿ ಸಚಿವ ಹೆಚ್.ಡಿ ರೇವಣ್ಣ ಫೋಟೋವೇ ಇಲ್ಲ. ಈ ಮೂಲಕ ಮುಜುಗರದಿಂದ ಪಾರಾಗಲು ದಳಪತಿಗಳು ಕ್ರಮ ಕೈಗೊಂಡ್ರಾ, ಎಂಬ ಪ್ರಶ್ನೆ ಎದ್ದಿದೆ. ಫ್ಲೆಕ್ಸ್‌ಗಳಲ್ಲಿ ಜೆಡಿಎಸ್ ಮುಖಂಡರ ಜೊತೆಗೆ ಯಡಿಯೂರಪ್ಪ, ವಿಜಯೇಂದ್ರ, ಆರ್.ಅಶೋಕ್ ಸೇರಿದಂತೆ ಹಲವು ಬಿಜೆಪಿ ನಾಯಕರ ಫೋಟೋಗಳನ್ನು



ಬಳಸಲಾಗಿದೆ. ಜೊತೆಗೆ ಮಾಜಿ ಸಂಸದೆ ಸುಮಲತಾ, ಮಾಜಿ ಸಚಿವ ಹೆಚ್.ವಿಶ್ವನಾಥ್ ಫೋಟೋಗೂ ಫ್ಲೆಕ್ಸ್ ನಲ್ಲಿ ಸ್ಥಾನ ಕಲ್ಪಿಸಲಾಗಿದೆ. ಪುಟ 2

### 'ಹೇಮಾವತಿ' ನೀರಿಗಾಗಿ ಹೋರಾಟ

# ಇಂದು ತುಮಕೂರು ಬಂದ್!

**ತುಮಕೂರು:** ಹೇಮಾವತಿ ಎಕ್ಸ್‌ಪ್ರೆಸ್ ಕೆನಲ್ ಮೂಲಕ ರಾಮನಗರ ಜಿಲ್ಲೆಯ ಮಾಗಡಿ ಶ್ರೀರಂಗ ಏತನೀರಾವರಿಗೆ ಹೇಮಾವತಿ ನೀರು ತೆಗೆದುಕೊಂಡು ಹೋಗಲು ತುಮಕೂರಲ್ಲಿ ವ್ಯಕ್ತವಾಗಿರುವ ವಿರೋಧ ತೀವ್ರಗೊಂಡಿದೆ. ಹೀಗಾಗಿ ನೀರಾವರಿ ಹೋರಾಟ ಸಮಿತಿ ಇಂದು ಜಿಲ್ಲಾ ಬಂದ್ ಕರೆ ನೀಡಿದ್ದು, ಹತ್ತಾರು ಸಂಘಟನೆಗಳು ಬಂದ್‌ಗೆ ಬೆಂಬಲ ಸೂಚಿಸಿವೆ.

ಮಠಾಧೀಶರು, ವರ್ತಕರು, ವಕೀಲರ ಸಂಘ, ಹೋಟೆಲ್ ಅಸೋಸಿಯೇಷನ್, ವಿವಿಧ ರೈತ, ಕನ್ನಡಪರ ಸಂಘಟನೆಗಳು ಸೇರಿ ಅನೇಕ ಸಂಘಟನೆಗಳು ತುಮಕೂರು ಬಂದ್‌ಗೆ ಬೆಂಬಲ ಸೂಚಿಸಿವೆ. ಬೆಳಗ್ಗೆ 10 ಗಂಟೆಗೆ ನಗರದ ಟೌನ್‌ಹಾಲ್ ನಿಂದ ಪ್ರತಿಭಟನಾ ಮೆರವಣಿಗೆ ಶುರುವಾಗಲಿದ್ದು, ಜಿಲ್ಲಾಧಿಕಾರಿ ಕಚೇರಿ ವರೆಗೆ ಮೆರವಣಿಗೆ ನಡೆಸಲಾಗುತ್ತದೆ. ಬಳಿಕ ಡಿಸಿಗೆ ಮನವಿ ಪತ್ರ ಸಲ್ಲಿಸಲಾಗುತ್ತದೆ.

ಇನ್ನೂ ಸರ್ಕಾರಿ ಸಾರಿಗೆ, ಶಾಲಾ-ಕಾಲೇಜು ಸೇರಿದಂತೆ ಇತರೇ ಸರ್ಕಾರಿ ಸೇವೆಗಳು ಎಂದಿನಂತೆ ಇರಲಿವೆ ಎಂದು ಆಡಳಿತ ಸ್ಪಷ್ಟಪಡಿಸಿದೆ. ಸಂಘಟನೆಗಳ ಬಲದಿಂದಾಗಿ ಸ್ವಯಂ ಪ್ರೇರಿತ ಬಂದ್ ಇರಲಿದೆ. ಆಟೋಗಳು ರಸ್ತೆಗಿಳಿಯುವುದು ಅನುಮಾನವಾಗಿದ್ದು, ಬಹುತೇಕ



ಅಂಗಡಿ-ಮುಂಗಟ್ಟುಗಳು, ಹೋಟೆಲ್‌ಗಳು ಬಾಗಿಲು ತೆರೆಯುವುದಿಲ್ಲ.

ತುಮಕೂರು ನಗರ ಸೇರಿದಂತೆ 10 ತಾಲ್ಲೂಕುಗಳಲ್ಲೂ ಬಂದ್‌ಗೆ ಸಿದ್ಧತೆ ನಡೆದಿದೆ. ಆಯಾ ತಾಲ್ಲೂಕು ಕೇಂದ್ರಗಳಲ್ಲಿ ಹೋರಾಟಗಾರರು ಪ್ರತಿಭಟನೆ ಮಾಡಲಿದ್ದಾರೆ. ಜಿಲ್ಲಾದ್ಯಂತ ಬಂದ್ ಹಿನ್ನೆಲೆ, ಪೊಲೀಸ್ ಇಲಾಖೆಯಿಂದಲೂ ಬಿಗಿಭದ್ರತೆ ನಿಯೋಜಿಸಲಾಗಿದೆ. ಹೇಮಾವತಿ ನಾಲಾ ವಲಯದ ಗುಬ್ಬಿ, ತುರುವೇಕೆರೆ, ತುಮಕೂರಿನಲ್ಲಿ ಬಂದ್ ತೀವ್ರ ಸ್ವರೂಪ ಪಡೆಯೋ ಸಾಧ್ಯತೆಯಿದೆ. ಮೂರು ತಾಲ್ಲೂಕುಗಳಲ್ಲಿ ಯಾವುದೇ ಅಹಿತರಕರ ಘಟನೆ ನಡೆಯದಂತೆ ಕಟ್ಟೆಚ್ಚರ ವಹಿಸಲಾಗಿದೆ. ಪುಟ 2

# ಜೈಲಿನಲ್ಲಿರುವ ನಟ ದರ್ಶನ್ ಭೇಟಿಗೆ ಯಾರಿಗೂ ಅವಕಾಶವಿಲ್ಲ!

**ಬೆಂಗಳೂರು:** ಚಿತ್ರದುರ್ಗದ ರೇಣುಕಾಸ್ವಾಮಿ ಕಿಡ್ನಾಪ್ ಹಾಗೂ ಕೊಲೆ ಪ್ರಕರಣ ಸಂಬಂಧ ಸೆಂಟ್ರಲ್ ಜೈಲು ಪರಪ್ಪನ ಅಗ್ರಹಾರದಲ್ಲಿರೋ ಸ್ಯಾಂಡಲ್‌ವುಡ್ ನಟ ದರ್ಶನ್‌ಗೆ ಬಿಗಿ ಭದ್ರತೆ ಒದಗಿಸಲಾಗಿದೆ.

ಬ್ಯಾರಕ್ ನಂ.3ರ ಭದ್ರತಾ ಕೊಠಡಿಯಲ್ಲಿರೋ ದರ್ಶನ್‌ಗೆ ಜೈಲಿನ ಇನ್ಸ್‌ಪೆಕ್ಟರ್ ಮತ್ತು ಮೂವರು ಸಿಬ್ಬಂದಿ ಭದ್ರತೆ ನೀಡುತ್ತಿದ್ದಾರೆ. ದರ್ಶನ್ ನೋಡಲು ಜೈಲಿನ ಕೈದಿಗಳು ಬರುವ ಸಾಧ್ಯತೆಗಳಿವೆ. ಹೀಗಾಗಿ ಬ್ಯಾರಕ್ 3 ಬಳಿ ಪೊಲೀಸರು ಬಂದೋಬಸ್ತ್ ಕೈಗೊಂಡಿದ್ದಾರೆ ಎನ್ನಲಾಗಿದೆ. ಸೋಮವಾರ ದರ್ಶನ್ ಭೇಟಿಗೆ ಬಂದಿದ್ದ ಪತ್ನಿ ಹಾಗೂ



ಮಗನ ಜೊತೆ 15 ನಿಮಿಷ ಭೇಟಿಗೆ ಅವಕಾಶ ನೀಡಲಾಗಿತ್ತು. ಇದೀಗ ದರ್ಶನ್ ಭೇಟಿಗೆ ಯಾರಿಗೂ ಅವಕಾಶವಿಲ್ಲ. ದರ್ಶನ್ ಯಾರ ಸಂಪರ್ಕಕ್ಕೂ ಸಿಗದಂತೆ ಜೈಲಾಧಿಕಾರಿಗಳು ಭದ್ರತೆ ವಹಿಸಿದ್ದಾರೆ. ಪುಟ 2

### ಆಪ್ ಸಚಿವೆ ಉಪವಾಸ ಸತ್ಯಾಗ್ರಹದ ವೇಳೆ ಹದಗೆಟ್ಟ ಆರೋಗ್ಯ

# ಅತಿಶಿ ಆಸ್ಪತ್ರೆಗೆ ದಾಖಲು

**ನವದೆಹಲಿ:** ಸಮರ್ಪಕ ನೀರಿನ ಪೂರೈಕೆಗೆ ಆಗ್ರಹಿಸಿ ಅನಿರ್ದಿಷ್ಟಾವಧಿಗೆ ಉಪವಾಸ ಸತ್ಯಾಗ್ರಹ ಆರಂಭಿಸಿರುವ ಸಚಿವೆ ಅತಿಶಿ ಅವರ ಆರೋಗ್ಯ ಸ್ಥಿತಿ ಹದಗೆಟ್ಟಿದ್ದು, ಮಂಗಳವಾರ ನಸುಕಿನ ಜಾವ ಅವರನ್ನ ಆಸ್ಪತ್ರೆಗೆ ದಾಖಲಿಸಲಾಗಿದೆ.

ಇಂದು (ಮಂಗಳವಾರ) ಮುಂಜಾನೆ ಅತಿಶಿ ಅವರನ್ನು ರಾಷ್ಟ್ರ ರಾಜಧಾನಿಯ ಲೋಕನಾಯಕ ಜೈ ಪ್ರಕಾಶ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಅತಿಶಿ ಅವರ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ಮಂಗಳವಾರ 5ನೇ ದಿನಕ್ಕೆ ಕಾಲಿಟ್ಟಿದೆ. ಹರಿಯಾಣ ದೆಹಲಿಯ ಪಾಲಿನ ನೀರನ್ನು ಬಿಡುಗಡೆ ಮಾಡುತ್ತಿಲ್ಲ ಎಂದು ಅವರು ಉಪವಾಸ ಸತ್ಯಾಗ್ರಹ ಆರಂಭಿಸಿದ್ದಾರೆ. ಪುಟ 2



### 'ಸನಾತನ ಧರ್ಮ ಡೆಂಗ್ಯೂ, ಮಲೇರಿಯಾ ಇದ್ದಂತೆ': ಉದಯನಿಧಿ

# ಕೋರ್ಟ್‌ಗೆ ಹಾಜರ್ ಸಾಧ್ಯತೆ

**ಬೆಂಗಳೂರು:** ಸನಾತನ ಧರ್ಮ ಡೆಂಗ್ಯೂ, ಮಲೇರಿಯಾ ಇದ್ದಂತೆ ಅಂತ ವಿವಾದಾತ್ಮಕ ಹೇಳಿಕೆ ನೀಡಿದ್ದ ತಮಿಳುನಾಡು ಸಚಿವ ಉದಯನಿಧಿ ಸ್ಟಾಲಿನ್ ಅವರಿಂದು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ಮುಂದೆ ಹಾಜರಾಗುವ ಸಾಧ್ಯತೆಗಳಿವೆ ಎಂದು ಮೂಲಗಳು ತಿಳಿಸಿವೆ.

ಸನಾತನ ಧರ್ಮದ ವಿರುದ್ಧ ಅವಹೇಳನಕಾರಿ ಹೇಳಿಕೆ ಹಿನ್ನೆಲೆಯಲ್ಲಿ 5 ತಿಂಗಳ ಹಿಂದೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ



ಸಮನ್ಸ್ ನೀಡಿತ್ತು. ಖುದ್ದಾಗಿ ವಿಚಾರಣೆಗೆ ಹಾಜರಾಗುವಂತೆ ಸೂಚಿಸಿತ್ತು. ಕಳೆದ ಮಾರ್ಚ್ 4 ರಂದು ವಿಚಾರಣೆಗೆ ಹಾಜರಾಗುವಂತೆ ಸಮನ್ಸ್ ನೀಡಿತ್ತು. ಆದ್ರೆ ಕಾರಣಾಂತರದಿಂದ ಗೈರಾಗಿದ್ದ ಉದಯನಿಧಿ ಸ್ಟಾಲಿನ್ ಅವರಿಂದು ಬೆಳಗ್ಗೆ 10:30ರ ವೇಳೆಗೆ ಬೆಂಗಳೂರಿನ 42ನೇ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ಎದುರು ಹಾಜರಾಗಲಿದ್ದಾರೆ ಮೂಲಗಳು ತಿಳಿಸಿವೆ. ಬೆಂಗಳೂರಿನ ಪರಮೇಶ್ ಎಂಬುವವರು ಉದಯನಿಧಿ ಹೇಳಿಕೆ ವಿರುದ್ಧ ಖಾಸಗಿ ದೂರು ಸಲ್ಲಿಸಿದ್ದರು. ಈ ಸಂಬಂಧ ವಿಚಾರಣೆ ನಡೆಸಿದ್ದ 42ನೇ ಎಸಿಎಂಎಂ ಕೋರ್ಟ್ ನ್ಯಾಯಾಧೀಶರಾದ ಜೆ. ಪ್ರೀತ್ ಅವರಿದ್ದ ಪೀಠ 5 ತಿಂಗಳ ಹಿಂದೆ ಸಮನ್ಸ್ ಜಾರಿಗೊಳಿಸಿತ್ತು. ಪುಟ 2

### ಜಿ.ಪಂ, ತಾ.ಪಂ ಚುನಾವಣೆ

# ಸರ್ಕಾರದ ವಿರುದ್ಧ ನ್ಯಾಯಾಂಗ ನಿಂದನೆ

**ಬೆಂಗಳೂರು:** ರಾಜ್ಯ ಚುನಾವಣಾ ಆಯೋಗವು ರಾಜ್ಯ ಸರ್ಕಾರಕ್ಕೆ ಶಾಕ್ ನೀಡಿದೆ. ನ್ಯಾಯಾಲಕ್ಕೆ ನೀಡಿದ್ದ ಭರಸವತೆಯಂತೆ ರಾಜ್ಯ ಸರ್ಕಾರ ನಿಗದಿತ ಅವಧಿಯಲ್ಲಿ ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಕ್ಷೇತ್ರಗಳಲ್ಲಿ ಮೀಸಲಾತಿ ಅಂತಿಮಗೊಳಿಸದ ಹಿನ್ನೆಲೆಯಲ್ಲಿ ರಾಜ್ಯ ಚುನಾವಣಾ ಆಯೋಗ ಹೈಕೋರ್ಟ್‌ಗೆ ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಸಿದೆ. ಚುನಾವಣಾ ಆಯೋಗ ಸಲ್ಲಿಸದ ಅರ್ಜಿ ವಿಚಾರಣೆಯನ್ನು ಮುಖ್ಯ ನ್ಯಾಯಮೂರ್ತಿ ಎನ್.ವಿ ಅಂಜಾರಿಯಾ ಅವರ ನೇತೃತ್ವದ ವಿಭಾಗೀಯ ಪೀಠ, ಜು.11ಕ್ಕೆ ಮುಂದೂಡಿದೆ.



ಇದಕ್ಕೂ ಮುನ್ನ ವಿಚಾರಣೆ ವೇಳೆ ರಾಜ್ಯ ಚುನಾವಣಾ ಆಯೋಗದ ಪರ ವಕೀಲರು ವಾದ ಮಂಡಿಸಿದರು. ಈ ಹಿಂದೆ ಸರ್ಕಾರ ನ್ಯಾಯಾಲಯಕ್ಕೆ ನೀಡಿದ್ದ ಭರವಸೆಯಂತೆ ನಿಗದಿತ ಅವಧಿಯಲ್ಲಿ ಜಿಲ್ಲಾ ಪಂಚಾಯತ್ ಮತ್ತು ತಾಲೂಕು ಪಂಚಾಯತ್ ಚುನಾವಣೆಗೆ ಮೀಸಲಾತಿ ಅಂತಿಮಗೊಳಿಸಿಲ್ಲ. ಪುಟ 2

### ಸಿಗದೇ ಹೋದ ರೇಣುಕಾ ಸ್ವಾಮಿ ಮೊಬೈಲ್

# ಸಿಮ್ ಖರೀದಿಸಿದ ಪೊಲೀಸರು

**ಬೆಂಗಳೂರು:** ಚಿತ್ರದುರ್ಗದ ರೇಣುಕ ಸ್ವಾಮಿ ಹತ್ಯೆ ಪ್ರಕರಣದಲ್ಲಿ ಜೈಲುಪಾಲಾಗಿರುವ ನಟ ದರ್ಶನ್ ಸೇರಿ 17 ಆರೋಪಿಗಳಿಂದ, ಎರಡು ಮೊಬೈಲ್‌ಗಳು ಇನ್ನೂ ಸೀಜ್ ಆಗಬೇಕಿದೆ. ಆದರೆ ಆರೋಪಿಗಳು ನೀಡಿದ ಮಾಹಿತಿಯಂತೆ ಅವರು ಇವುಗಳನ್ನು ರಾಜಕಾಲುವೆಯಲ್ಲಿ ಎಸೆದಿದ್ದು, ಇವುಗಳಿಗಾಗಿ ಎಷ್ಟೇ ಹುಡುಕಾಡಿದರೂ ಸಿಕ್ಕಿಲ್ಲ. ರೇಣುಕಾ ಸ್ವಾಮಿ ಮೊಬೈಲ್ ಕೇಸಿಗೆ ಸಂಬಂಧಿಸಿದಂತೆ ಮಹತ್ವದ ಮಾಹಿತಿಗಳನ್ನು ಹೊಂದಿದ್ದು, ಇವುಗಳನ್ನು ಪಡೆಯಲು ಪೊಲೀಸರು ಮತ್ತೊಂದು ದಾರಿ ಹಿಡಿದಿದ್ದಾರೆ.

ಬೆಂಗಳೂರು ಪೊಲೀಸರು, ಹೊಸ ಆಯಾಮದಲ್ಲಿ ಪ್ರಕರಣದ ತನಿಖೆಯನ್ನು ಮತ್ತಷ್ಟು ತೀವ್ರಗೊಳಿಸಿದ್ದಾರೆ. ಇದೀಗ ಮೃತ ರೇಣುಕ ಸ್ವಾಮಿ ಹೆಸರಿನಲ್ಲಿ ಹೊಸ ಸಿಮ್ ಕಾರ್ಡ್ ಖರೀದಿಸಿರುವ ಪೊಲೀಸರು, ಮೊಬೈಲ್ ಮಾಹಿತಿ ರೀ ಆಕ್ಸೆಸ್ ಮಾಡಿದ್ದಾರೆ ಎಂದು ತಿಳಿದುಬಂದಿದೆ.





ರೇಣುಕ ಸ್ವಾಮಿ ಮೊಬೈಲ್ ಫೋನ್ ಅನ್ನು ಆರೋಪಿಗಳು ಸಾಕ್ಷ್ಯ ನಾಶ ಮಾಡುವ ಉದ್ದೇಶದಿಂದ ಸುಮ್ಮನಹಳ್ಳಿ ಜಂಕ್ಷನ್ ಸಮೀಪವಿರುವ ರಾಜಕಾಲುವೆಗೆ ಎಸೆದಿದ್ದರು. ಹೀಗಾಗಿ ಅದರಲ್ಲಿದ್ದ ಡಾಟಾ ನಿಷ್ಕ್ರಿಯವಾಗಿತ್ತು. ಆದ್ದರಿಂದ ಕೋರ್ಟ್ ಅನುಮತಿ ಪಡೆದು ಹೊಸ ಸಿಮ್ ಕಾರ್ಡ್ ಖರೀದಿಸಿರುವ ಪೊಲೀಸರು, ರಿ-ಆಕ್ಸೆಸ್ ಮಾಡಿ ಅದರಲ್ಲಿರುವ ಮಾಹಿತಿ ಕಲೆ ಹಾಕುತ್ತಿದ್ದಾರೆ. ಇದೇ ವೇಳೆ ನಟ ದರ್ಶನ್ ಸೇರಿ ನಾಲ್ವರು ಆರೋಪಿಗಳ ಮೊಬೈಲ್‌ಗಳನ್ನು ನ್ಯಾಯಾಲಯದ ಅನುಮತಿ ಮೇರೆಗೆ ಅನ್‌ಸೀಲ್ ಮಾಡಿ, ಯಾರಿಗೆಲ್ಲಾ ಕರೆ ಮಾಡಲಾಗಿತ್ತು ಎಂದು ಪರಿಶೀಲಿಸುತ್ತಿದ್ದಾರೆ.

ಭದ್ರತಾ ದೃಷ್ಟಿಯಿಂದಾಗಿ ದರ್ಶನ್‌ಗೆ ಪ್ರತ್ಯೇಕ ಸೆಲ್ ವ್ಯವಸ್ಥೆ ಮಾಡಲಾಗಿದೆ. ಜೈಲಿನ ಸೆಕ್ಯೂರಿಟಿ ರೂಂ. ನಂ. 3ರಲ್ಲಿ ದರ್ಶನ್ ಹಾಗೂ ಮತ್ತೊಬ್ಬ ಆರೋಪಿ ವಿನಯ್ ಸಹಖೈದಿಗಳಾಗಿ ಜೈಲುವಾಸ ಅನುಭವಿಸುತ್ತಿದ್ದಾರೆ. ಪುಟ 2

# ಬಿಜೆಪಿ ಅಭ್ಯರ್ಥಿಗಳನ್ನ ಸೋಲಿಸಲು ನಮ್ಮ ಪಕ್ಷದವರಿಂದಲೇ ಹಣ

**ವಿಜಯಪುರ:** ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯವರ ಸೋಲಿಸಲು ಅಪಾರ ಪ್ರಮಾಣದ ಹಣ ಬಿಜೆಪಿ ಮೂಲದಿಂದಲೇ ಹೋಗಿದೆ ಎಂದು ವಿಜಯಪುರ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಗಂಭೀರ ಆರೋಪ ಮಾಡಿದ್ದಾರೆ. ಮಾಧ್ಯಮದವರೊಂದಿಗೆ ಪ್ರತಿಕ್ರಿಯಿಸಿದ ಅವರು, ಲೋಕಸಭೆಯಲ್ಲಿ ಸೋಲು ಕಂಡ ಅಭ್ಯರ್ಥಿಗಳು ಹಾಗೂ ವಿ ಸೋಮಣ್ಣ ಸೇರಿದಂತೆ ಗೆದ್ದ ಕೆಲವು ಅಭ್ಯರ್ಥಿಗಳು ಇದೇ ಆರೋಪ ಮಾಡಿದ್ದಾರೆ ಎಂದು ದೂರಿದ್ದಾರೆ. ಈ ಬಗ್ಗೆ ಯಾರ ಪರವಾಗಿಯೂ ಇರದ ಸತ್ಯ ಶೋಧನಾ ಸಮಿತಿ ಆಗಬೇಕೆಂದು ಯತ್ನಾಳ ಒತ್ತಾಯಿಸಿದ್ದಾರೆ.

ಹರಿಹರ ಬಿಜೆಪಿ ಶಾಸಕ ಬಿಪಿ ಹರೀಶ್ ದಾವಣಗೆರೆಯಲ್ಲಿ ಬಿಜೆಪಿ ಅಭ್ಯರ್ಥಿ ಸೋಲಿಗೆ ರಾಜ್ಯಾಧ್ಯಕ್ಷ ವಿಜಯೇಂದ್ರರೇ ಕಾರಣ. ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಆಂಡ್ ಟೀಮ್ ದಾವಣಗೆರೆಯಲ್ಲಿ ಸುದ್ದಿಗೋಷ್ಠಿ ನಡೆಸುತ್ತಿದ್ದರು, ಅದನ್ನು ರಾಜ್ಯಾಧ್ಯಕ್ಷರು ತಡೆದಿದ್ದರೆ ಇಂದು ದಾವಣಗೆರೆ ಕಾಂಗ್ರೆಸ್ ಬದಲು ಬಿಜೆಪಿ



ಪಾಲಾಗುತ್ತಿತ್ತು. ನಾನು ಮಾತನಾಡಿದ್ದಕ್ಕೆ ನಾಲ್ಕು ಗೋಡೆಗಳ ಮಧ್ಯೆ ಮಾತಾಡಬೇಕು ಎಂದು ಹೇಳುತ್ತಿದ್ದಾರೆ, ಆದರೆ ಅವರು ಮಾತನಾಡಿದಾಗ ಏನು ಕೇಳಲಿಲ್ಲ, ಈ ಟೀಮ್ ರಚನೆ ಮಾಡಿರೋದೆ ಅವರು ಎಂದು ಆರೋಪಿಸಿದ್ದರು.

**ಸೋತ ಅಭ್ಯರ್ಥಿಗಳಿಂದಲೇ ಆರೋಪ:** ಈ ಬಗ್ಗೆ ಪ್ರತಿಕ್ರಿಯಿಸಿದ ಬಸನಗೌಡ ಪಾಟೀಲ್ ಯತ್ನಾಳ್, ಚುನಾವಣೆ ವೇಳೆ ಯಾರಿಗೆ ತೊಂದರೆಯಾಗಿದೆ ಎಂಬುದರ ಕುರಿತು ಆಯಾ ಅಭ್ಯರ್ಥಿಗಳೇ ಮಾಹಿತಿ ನೀಡಿದ್ದಾರೆ. ಪುಟ 2

# ಮೈಮೇಲೆ ಸಗಣಿ ಬಳಿದುಕೊಂಡು ಸರ್ಕಾರದ ವಿರುದ್ಧ ಆಕ್ರೋಶ

**ಬೆಂಗಳೂರು:** ಗುಡಿಸಲು ನಿವಾಸಿಗಳಿಗೆ ಮನೆ ಭಾಗ್ಯ ಕಲ್ಪಿಸಬೇಕು, ಹಾಲು ಉತ್ಪಾದಕ ರೈತರ ಪ್ರೋತ್ಸಾಹಧನವನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಆಗ್ರಹಿಸಿ ರೈತರಿಂದು ಬೃಹತ್ ಪ್ರತಿಭಟನೆ ನಡೆಸಿದರು.

ನಗರದ ಕನಕಪುರ ರಸ್ತೆಯಿಂದ ಪಾದಯಾತ್ರೆ ಆರಂಭಿಸಿ ಡಿಸಿ ಕಚೇರಿಗೆ ಮುತ್ತಿಗೆ ಹಾಕಲು ರೈತರು ಯತ್ನಿಸಿದ್ದರು. ಪಾದಯಾತ್ರೆಗೆ ನಿವೃತ್ತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ಚಾಲನೆ ನೀಡಿದರು. ಕೆಲ ರೈತರು ಮೈಮೇಲೆ ಸಗಣಿ ಬಳಿದುಕೊಂಡು ಆಕ್ರೋಶ ಹೊರಹಾಕಿದರು. ಆದ್ರೆ ಮಾರ್ಗಮಧ್ಯೆ ರೈತರನ್ನು ತಡೆದ ಪೊಲೀಸರು ಸ್ಥಳಕ್ಕೆ ಜಿಲ್ಲಾಧಿಕಾರಿಗಳು ಬರುವವರೆಗೂ ಸ್ಥಳದಲ್ಲೇ ಇರುವಂತೆ ತಡೆದರು. ಬ್ಯಾರಿಕೇಡ್ ಹಾಕಿ ಸೋಮನಹಳ್ಳಿ ಗೇಟ್ ಬಳಿಯೇ ರೈತರನ್ನು ತಡೆದರು. ಪ್ರತಿಭಟನಾ ಮಾರ್ಗವನ್ನು ಬಂದ್ ಮಾಡಿದರು. ಈ ವೇಳೆ ಪೊಲೀಸರು ? ರೈತರ ನಡುವೆ ತಳ್ಳಾಟ, ನೂಕಾಟಗಳು ನಡೆಯಿತು. ಇದರಿಂದ ತೃಪ್ತರಾಗದ ರೈತರು ನಮ್ಮ ಸಮಸ್ಯೆಗಳನ್ನು ಬಗೆಹರಿಸಲು ಅಧಿಕಾರಿಗಳಿಂದ ಸಾಧ್ಯವಿಲ್ಲ. ಕೃಷಿ ಸಚಿವರು ಸ್ಥಳಕ್ಕೆ ಬರಬೇಕೆಂದು ಪಟ್ಟು ಹಿಡಿದರು.



## ರೈತರ ಬೇಡಿಕೆಗಳೇನು?

1) ಬೆಂಗಳೂರು ದಕ್ಷಿಣ ತಾಲ್ಲೂಕಿನ 30 ಗ್ರಾಮಗಳಲ್ಲಿ ದಶಕಗಳಿಂದ ಉಳುಮೆ ಬಂದಿರುವ ಸಾಗುವಳಿ ಜಮೀನುಗಳನ್ನು ಪೋಡಿ, ದುರಸ್ತಿ ಮಾಡಿಕೊಟ್ಟು ರೈತರಿಗೆ ತಮ್ಮ ಜಮೀನುಗಳ ಮೇಲೆ ಸಂಪೂರ್ಣ ಹಕ್ಕನ್ನು ಕೊಡಬೇಕು.
2) ಸೋಮನಹಳ್ಳಿ ಬಳಿ ನಿರ್ಮಿಸುತ್ತಿರುವ ಟೋಲ್ ನಲ್ಲಿ ಸ್ಥಳೀಯ ವಾಹನ ಸವಾರರಿಗೆ ಸರ್ವಿಸ್ ರಸ್ತೆ ನೀಡಬೇಕು ಅಥವಾ ಟೋಲನ್ನು ಕಗ್ಗಲೀಪುರ ಬೈಪಾಸ್ ಗೆ ಸ್ಥಳಾಂತರಿಸಬೇಕು
3) ಕಗ್ಗಲಿಪುರ, ಸಾಲುಹುಣಸೆ ಉದಿಪಾಳ್ಯ ಬೈಪಾಸ್ ರಸ್ತೆ ನಿರ್ಮಿಸಿ ಸ್ಥಳೀಯರಿಗೆ ಉಂಟಾಗುತ್ತಿರುವ ವಾಹನ ದಟ್ಟಣೆ ಸಮಸ್ಯೆಯನ್ನು ತಪ್ಪಿಸುವುದು
4) ಅರಣ್ಯ ಇಲಾಖೆ ರೈತರನ್ನು ಒಕ್ಕಲೆಸಬೇಕೆಂದು ನೀಡುತ್ತಿರುವ ಕಿರುಕುಳದಿಂದ ಮುಕ್ತಿ ಕೊಡಿಸಬೇಕು
5) 45 ವರ್ಷಗಳಿಂದ ಸಾಕಮ್ಮ ಬಡಾವಣೆಯಲ್ಲಿ ವಾಸಿಸುತ್ತಿರುವ ಗುಡಿಸಲು ನಿವಾಸಿಗಳಿಗೆ ಮನೆ ಭಾಗ್ಯ ಕಲ್ಪಿಸಬೇಕು.
6) ಪಟ್ಟರೆಡ್ಡಿ ಪಾಳ್ಯ ಗ್ರಾಮಕ್ಕೆ ಪರ್ಯಾಯ ರಸ್ತೆ ನಿರ್ಮಿಸಬೇಕು.
7) 7 ತಿಂಗಳಿನಿಂದ ತಡೆ ಹಿಡಿದಿರುವ ಹಾಲು ಉತ್ಪಾದಕ ರೈತರ ಪ್ರೋತ್ಸಾಹಧನವನ್ನು ಕೂಡಲೇ ಬಿಡುಗಡೆ ಮಾಡಬೇಕು.
8) ಅಗತ್ಯವಿರುವ ಕಡೆಗಳಲ್ಲಿ ಸೇತುವೆ ರಸ್ತೆಗಳನ್ನು ನಿರ್ಮಿಸಿ ಕೊಡಬೇಕು.
9) ಹೆಚ್ಚಿನ ಮಳೆಯಾದಾಗ ನದಿಗಳಿಗೆ ಹರಿದು ಹೋಗುತ್ತಿರುವ ಅಪಾರ ಪ್ರಮಾಣದ ನೀರನ್ನು ಕೆರೆಗಳಿಗೆ ತುಂಬಿಸಿ ಅಂತರ್ಜಲ ಹೆಚ್ಚಿಸಬೇಕು.

## ಪವಿತ್ರಾ ಗೌಡಗೆ ಕೋಟಿ ಕೋಟಿ ಹಣ ಕೊಟ್ಟಿದ್ರಾ ಸೌಂದರ್ಯ ಜಗದೀಶ್?

**ಬೆಂಗಳೂರು:** ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಬಂಧನಕ್ಕೊಳಗಾದ ಪವಿತ್ರಾ ಗೌಡ ಅವರ ಮನೆ ಖರೀದಿ ವಿಚಾರದಲ್ಲಿ ದಿ. ನಿರ್ಮಾಪಕ ಸೌಂದರ್ಯ ಜಗದೀಶ್ ಅವರ ಹೆಸರು ಕೇಳಿಬರುತ್ತಿದೆ. ಮನೆ ಖರೀದಿ ಪತ್ರಕ್ಕೆ ಸೌಂದರ್ಯ ಜಗದೀಶ್ ಸಾಕ್ಷಿಯಾಗಿ ಸಹಿ ಮಾಡಿದ್ದಾರೆ ಎನ್ನಲಾಗುತ್ತಿದೆ. ಆದ್ರೆ, ಈ ಬಗ್ಗೆ ಯಾವುದೇ ಅಧಿಕೃತ ದಾಖಲೆಗಳು ಬಹಿರಂಗವಾಗಿಲ್ಲ. ದರ್ಶನ್ ಅವರ ಆಪ್ತ ವಲಯದಲ್ಲಿ ಸೌಂದರ್ಯ ಜಗದೀಶ್ ಅವರು ಸಹ ಗುರುತಿಸಿಕೊಂಡಿದ್ದರು. ಅಲ್ಲದೇ ಪವಿತ್ರ ಗೌಡ ಅವರ ಖಾತೆಗೆ ಜಗದೀಶ್ ಸುಮಾರು 2 ಕೋಟಿ ರೂ. ಹಣ ಕಳುಹಿಸಿದ್ದರು ಎಂದು ಹೇಳಲಾಗುತ್ತಿದೆ. ಜಗದೀಶ್ ಅಕೌಂಟ್‌ನಿಂದ ಟ್ರಾನ್ಸ್‌ಫರ್ ಆಗಿರೋ 2 ಕೋಟಿ ರೂ. ಹಣ ಯಾಕಾಗಿ ಕಳುಹಿಸಲಾಗಿದೆ? ಜಗದೀಶ್ ಆತ್ಮಹತ್ಯೆಗೂ ಇದಕ್ಕೂ ಸಂಬಂಧ ಇದೆಯೇ? ಯಾವ ವಿಚಾರಕ್ಕಾಗಿ ಪವಿತ್ರಾಗೆ ಹಣ ಕೊಟ್ಟಿದ್ದರು? ಎಂಬುದು ತನಿಖೆಯಿಂದಷ್ಟೇ ತಿಳಿಯಬೇಕಿದೆ.



2017 ನವೆಂಬರ್ 13 ರಂದು ಪವಿತ್ರಾಗೌಡಗೆ 1 ಕೋಟಿ ರೂ. ವರ್ಗಾವಣೆಯಾಗಿದೆ. 2018, ಜನವರಿ 23 ರಂದು ಪವಿತ್ರಾಗೌಡಗೆ ಮತ್ತೆ 1 ಕೋಟಿ ರೂ. ವರ್ಗಾವಣೆ ಮಾಡಲಾಗಿತ್ತು. 2018, ಜನವರಿ 24 ರಂದು ಪವಿತ್ರಾಗೌಡ ಮನೆ ಖರೀದಿಸಿದ್ದರು. ಟಿಜಿಎಂಸಿ ಬ್ಯಾಂಕ್ ಲಿಮಿಟೆಡ್ ರಾಜಾಜಿನಗರ ಬ್ರಾಂಚ್‌ನಲ್ಲಿ ವ್ಯವಹಾರ ಮಾಡಲಾಗಿದೆ. ಪವಿತ್ರಾಗೌಡಗೆ ಸೌಂದರ್ಯ ಜಗದೀಶ್ ಹಣ ಕೊಟ್ಟ ದಾಖಲೆ ಮಾತ್ರ ಲಭ್ಯವಾಗಿದೆ. ಈವರೆಗೂ ಸೌಂದರ್ಯ ಜಗದೀಶ್ ಗೆ ಹಣ ವಾಪಸ್ ನೀಡಿರುವ ಬಗ್ಗೆ ಯಾವುದೇ ಮಾಹಿತಿ ಸಿಕ್ಕಿಲ್ಲ ಎಂದು ಉನ್ನತ ಮೂಲಗಳು ತಿಳಿಸಿವೆ.

ಸೌಂದರ್ಯ ಜಗದೀಶ್ ಅವರು ಇತ್ತೀಚೆಗೆ ಆತ್ಮಹತ್ಯೆ ಮಾಡಿಕೊಂಡಿದ್ದರು. ಅವರಿಗೆ ಉದ್ಯಮದಲ್ಲಿ ನಷ್ಟವಾಗಿತ್ತು ಎಂಬ ಸುದ್ದಿ ಹರಿದಾಡಿತ್ತು. ಅದಕ್ಕೆ ಸಂಬಂಧಿಸಿ ಡೆತ್‌ನೋಟ್ ಸಹ ಸಿಕ್ಕಿತ್ತು. ಸೌಂದರ್ಯ ಜಗದೀಶ್ ಆತ್ಮಹತ್ಯೆ ಬಳಿಕ ಪಾಲುದಾರರ ಮೇಲೆ ಅವರ ಪತ್ನಿ ವಂಚನೆಯ ಆರೋಪ ಮಾಡಿದ್ದರು.

## ಡಿಸಿಎಂ ಮಾಡೋದು ಹೈಕಮಾಂಡ್‌ಗೆ ಬಿಟ್ಟ ವಿಚಾರ

**ಬೀದರ್:** ನಮ್ಮ ಅಭಿಪ್ರಾಯ ನಾವು ಹೇಳಿದ್ದೇವೆ ಎಂದು ಡಿಸಿಎಂ ಸ್ಥಾನದ ಪ್ರಬಲ ಆಕಾಂಕ್ಷಿ ವಸತಿ ಹಾಗೂ ವಕ್ಫ್ ಸಚಿವ ಜಮೀರ್ ಅಹ್ಮದ್ ಖಾನ್ ಪರೋಕ್ಷವಾಗಿ ಡಿಸಿಎಂ ಸ್ಥಾನದ ಇಂಗಿತ ವ್ಯಕ್ತಪಡಿಸಿದ್ದಾರೆ. ಬೀದರ್‌ನಲ್ಲಿ ಈ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ನಮ್ಮ ಪಕ್ಷ ಹೈಕಮಾಂಡ್ ಪಕ್ಷವಾಗಿದ್ದು ಈಗಾಗಲೇ ನಾನು ಮತ್ತು ರಹೀಂಖಾನ್ ನಮ್ಮ ಅಭಿಪ್ರಾಯ ಹೇಳಿದ್ದೇವೆ. ಇನ್ನೂ ಡಾ.ಜಿ ಪರಮೇಶ್ವರ್, ರಾಜಣ್ಣ, ಸತೀಶ್ ಜಾರಕಿಹೊಳಿ ಹಾಗೂ ಎಂ.ಬಿ ಪಾಟೀಲ್ ಕೂಡ ಅವರ ಅಭಿಪ್ರಾಯಗಳನ್ನು ಹೇಳಿದ್ದು, ಅಂತಿಮವಾಗಿ ಡಿಸಿಎಂ ಮಾಡೋದು ಹೈಕಮಾಂಡ್‌ಗೆ ಬಿಟ್ಟ ವಿಚಾರ ಎಂದರು. ಈಗಾಗಲೇ ದರ್ಶನ್‌ಗೆ ಶಿಕ್ಷೆಯಾಗಿದ್ದು ಈಗ ಜೈಲಿನಲ್ಲಿ ಇದ್ದಾರೆ. ಹೀಗಾಗಿ ಈ ಬಗ್ಗೆ ನಾನು ಹೆಚ್ಚು ಕಾಮೆಂಟ್ ಮಾಡುವುದಿಲ್ಲ ಎಂದು ತಿಳಿಸಿದರು. ಈ ದೇಶಕ್ಕೆ ಸ್ವಾತಂತ್ರ್ಯ ತಂದಿದ್ದು ನಾವು. ಸ್ವಾತಂತ್ರ್ಯ ತರಲು ಬಿಜೆಪಿ ಏನು ಮಾಡಿದೆ? ಬಿಜೆಪಿ ಹಾಗೂ ಆರ್‌ಎಸ್‌ಎಸ್ ಯಾರ ಜೊತೆ ಇದ್ದರೂ ಇತಿಹಾಸಕ್ಕೆ ಗೊತ್ತಿದೆ. ಈ ದೇಶ ನಮ್ಮದು ರೀ ಎಂದು ಬಿಜೆಪಿ ನಾಯಕರ ವಿರುದ್ಧ ಕಿಡಿಕಾರಿದರು.



## ವಾಲ್ಮೀಕಿ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣ ಕೇಸ್
# ಪ್ರತ್ಯೇಕ ತನಿಖೆ ಆರಂಭಿಸಿದ ಇಡಿ

**ಬೆಂಗಳೂರು:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ ತನಿಖೆ ಆರಂಭಿಸಿದೆ.

ಅಕ್ರಮ ಹಣ ವರ್ಗಾವಣೆ ಆರೋಪದ ಹಿನ್ನೆಲೆಯಲ್ಲಿ ಪ್ರತ್ಯೇಕವಾಗಿ ತನಿಖೆ ಆರಂಭಿಸಿದೆ. ಹಗರಣ ಸಂಬಂಧ ಈಗಾಗಲೇ ಜೈಲಿನಲ್ಲಿರೋ ಆರೋಪಿಗಳ ವಿಚಾರಣೆ ನಡೆಸಿರುವ ಜಾರಿ ನಿರ್ದೇಶನಾಲಯವು ನಿಗಮದ ವ್ಯವಸ್ಥಾಪಕ ನಿರ್ದೇಶಕ ಜೆ.ಜೆ ಪದ್ಮನಾಭ್ ಮತ್ತು ಪರುಶರಾಮ್ ಇಬ್ಬರ ಹೇಳಿಕೆಯನ್ನು ದಾಖಲಿಸಿಕೊಂಡಿದೆ. ಮತ್ತೊಂದೆಡೆ ಪ್ರಕರಣ ದಾಖಲಿಸಿಕೊಂಡಿರುವ ಸಿಬಿಐ ಕೂಡ ತನ್ನದೇ ಆಯಾಮದಲ್ಲಿ ತನಿಖೆ ನಡೆಸುತ್ತಿದೆ.



**ಒಟ್ಟು 9 ಆರೋಪಿಗಳ ಬಂಧನ:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣ ಪ್ರಕರಣದಲ್ಲಿ ಈವರೆಗೆ ಎಸ್‌ಐಟಿಯಿಂದ ಒಟ್ಟು 9 ಜನ ಆರೋಪಿಗಳನ್ನ ಬಂಧಿಸಲಾಗಿದೆ. ಒಟ್ಟು 94 ಕೋಟಿ 73 ಲಕ್ಷ ಅವ್ಯವಹಾರ ನಡೆದಿದೆ ಎನ್ನಲಾಗಿದ್ದು, ಈ ಪೈಕಿ ಎಸ್‌ಐಟಿ ಅಧಿಕಾರಿಗಳು 14.5 ಕೋಟಿ ನಗದು ಹಣ ವಶಕ್ಕೆ ಪಡೆದುಕೊಂಡಿದ್ದಾರೆ.

**ಏನಿದು ಪ್ರಕರಣ?:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧೀಕ್ಷಕ ಚಂದ್ರಶೇಖರನ್ ಕೆಲದಿನಗಳ ಹಿಂದೆಯಷ್ಟೇ ಶಿವಮೊಗ್ಗದಲ್ಲಿರುವ ತಮ್ಮ ನಿವಾಸದಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದರು. ಆತ್ಮಹತ್ಯೆಗೂ ಮುನ್ನ ಬರೆದಿದ್ದ ಡೆತ್‌ನೋಟ್‌ನಲ್ಲಿ ಮೂವರು ಹೆಸರು ಹಾಗೂ ಬಹುಕೋಟಿ ಹಗರಣ ನಡೆದಿರುವ ಬಗ್ಗೆ ಉಲ್ಲೇಖಿಸಿದ್ದರು. ಈ ಬೆನ್ನಲ್ಲೇ ಬ್ಯಾಂಕ್‌ನಿಂದ 94 ಕೋಟಿ ರೂ. ಅಕ್ರಮವಾಗಿ ವರ್ಗಾವಣೆಯಾಗಿದೆ. ಹಣ ವರ್ಗಾವಣೆಯಾದ ಬಗ್ಗೆ ಯಾವುದೇ ಮೇಲ್, ಮೆಸೇಜ್ ಬಂದಿಲ್ಲ. ಬ್ಯಾಂಕ್ ಸಿಬ್ಬಂದಿಯಿಂದಲೇ ನಕಲಿ ದಾಖಲೆ ಸೃಷ್ಟಿಸಿ ವಂಚನೆ ಎಸಗಿದ್ದಾರೆ ಎಂದು ಆರೋಪಿಸಿ ನಿಗಮದ ಪ್ರಧಾನ ವ್ಯವಸ್ಥಾಪಕ ರಾಜಶೇಖರ್ ಅವರು ದೂರು ನೀಡಿದ್ದರು. ದೂರಿನ ಆಧಾರದ ಮೇಲೆ ಬ್ಯಾಕ್‌ನ 6 ಮಂದಿ ಸಿಬ್ಬಂದಿ ವಿರುದ್ಧ ಹೈಗ್ರೌಂಡ್ಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ನಂತರ ಬಹುಕೋಟಿ ಹಗರಣದ ಹಿನ್ನೆಲೆಯಲ್ಲಿ ಸಿಬಿಐ, ಇಡಿ ಸಹ ತನಿಖೆಗೆ ಎಂಟ್ರಿ ಆಗಿದೆ.

## 2 ಕೋಟಿ ಹಣ, ಕೆಲಸದ ಆಮಿಷ– ಸೂರಜ್ ಆಪ್ತ ಶಿವಕುಮಾರ್ ವಿರುದ್ಧವೇ ಸಂತ್ರಸ್ತ ದೂರು

**ಬೆಂಗಳೂರು:** ಡಾ. ಸೂರಜ್ ರೇವಣ್ಣ ಅವರ ಸಲಿಂಗಕಾಮ ಪ್ರಕರಣಕ್ಕೆ ಟ್ವಿಸ್ಟ್ ಮೇಲೆ ಟ್ವಿಸ್ಟ್ ದೊರೆಯುತ್ತಿದೆ. ಸಂತ್ರಸ್ತನ ವಿರುದ್ಧ ದೂರು ನೀಡಿದ್ದ ಸೂರಜ್ ಆಪ್ತ ಶಿವಕುಮಾರ್ ನಾಪತ್ತೆಯಾದರೆ ಇತ್ತ ಶಿವಕುಮಾರ್ ವಿರುದ್ಧವೇ ಸಂತ್ರಸ್ತ ಇದೀಗ ದೂರು ನೀಡಿದ್ದಾನೆ.

ಶಿವಕುಮಾರ್ ಬಳಿ ಎಲ್ಲವನ್ನೂ ನಾನು ಹೇಳಿದ್ದೆ. ಆತ ಆಸ್ಪತ್ರೆಗೆ ಹೋಗಲು ಬಿಡದೆ ಕೂಡಿ ಹಾಕಿದ್ದ. 2 ಕೋಟಿ ಹಣ, ಕೆಲಸ ಕೊಡಿಸುವುದಾಗಿ ಹೇಳಿದ್ದ. ಯಾರಿಗಾದರೂ ಹೇಳಿದರೆ ಕೊಲೆ ಮಾಡ್ತೇನೆ ಅಂತ ಬೆದರಿಕೆಯೂ ಹಾಕಿದ್ದ ಎಂದು ಸಂತ್ರಸ್ತ ಪೊಲೀಸರ ಮುಂದೆ ದೂರಿದ್ದಾನೆ.

**ದೂರಿನಲ್ಲಿ ಏನಿದೆ..?:** ನನ್ನ ಮೇಲೆ ಆಗಿರುವ ಅನ್ಯಾಯದ ಬಗ್ಗೆ ಶಿವಕುಮಾರ್ ಬಳಿ ಹೇಳಿದ್ದೆ. ನನಗೆ ದೈಹಿಕ ಹಿಂಸೆ ಆಗಿದ್ದರೂ ಶಿವಕುಮಾರ್ ಆಸ್ಪತ್ರೆಗೆ ಹೋಗಲು ಬಿಟ್ಟಿರಲಿಲ್ಲ. ಶಿವಕುಮಾರ್ ತನ್ನ ಫೋನ್ ಮೂಲಕ ಸೂರಜ್ ಜೊತೆ ಮಾತನಾಡಿಸಿದರು. ಅಲ್ಲದೇ 2 ಕೋಟಿ ರೂ. ಹಣ, ಕೆಲಸ ಕೊಡಿಸುವುದಾಗಿ ಹೇಳಿದ್ದರು. ನಾನು ಒಪ್ಪದಿದ್ದಾಗ ಬಾಯಿಬಿಟ್ಟರೆ ನಿನ್ನ ಮುಗಿಸ್ತೇನೆ ಎಂದು ಶಿವಕುಮಾರ್ ಕೊಲೆ ಬೆದರಿಕೆ ಹಾಕಿದ್ದರು ಎಂದು ತಿಳಿಸಿದ್ದಾನೆ.



ಶಿವಕುಮಾರ್ ನನ್ನನ್ನು ಮನೆಗೆ ಹೋಗಲು ಬಿಡದೆ ಲಾಡ್ಜ್‌ನಲ್ಲಿ ಕೂಡಿ ಹಾಕಿದ್ದ. ನನ್ನಿಂದಲೇ 1,000 ರೂ ಹಣ ಪಡೆದು ಊಟದ ವ್ಯವಸ್ಥೆ ಮಾಡಿದ್ದ. ನಂತರ ಅಲ್ಲಿಂದ ತಪ್ಪಿಸಿಕೊಂಡು ಸಂಬಂಧಿಕರ ಮನೆಗೆ ಹೋದೆ. ಶಿವಕುಮಾರ್ ಮೇಲೂ ಕ್ರಮ ಕೈಗೊಳ್ಳಬೇಕು ಎಂದು ಸಂತ್ರಸ್ತ ಪೊಲೀಸರಿಗೆ ನೀಡಿದ ದೂರಿನಲ್ಲಿ ತಿಳಿಸಿದ್ದಾನೆ.

# ಪರಿಷತ್ ನೂತನ ಸದಸ್ಯರಾಗಿ 17 ಜನ ಪ್ರಮಾಣ ವಚನ ಸ್ವೀಕಾರ

**ಬೆಂಗಳೂರು:** ವಿಧಾನಸಭೆಯಿಂದ ವಿಧಾನ ಪರಿಷತ್‌ಗೆ ನೂತನವಾಗಿ ಆಯ್ಕೆಯಾದ 17 ಮಂದಿ ವಿಧಾನ ಪರಿಷತ್ ಸದಸ್ಯರು ಸೋಮವಾರ ಪ್ರಮಾಣ ವಚನ ಸ್ವೀಕರಿಸಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ನೂತನ ಶಾಸಕರ ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ಶಿಕ್ಷಕ ಮತ್ತು ಪದವೀಧರ ಕ್ಷೇತ್ರದಿಂದ ಆಯ್ಕೆಯಾದ 17 ಜನ ಪರಿಷತ್ ಸದಸ್ಯರು ಪ್ರಮಾಣ ವಚನ ಸ್ವೀಕರಿಸಿದರು.

ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಸಿಎಂ ಸಿದ್ದರಾಮಯ್ಯ ಅವರು, ನೂತನ ಪರಿಷತ್ ಸದಸ್ಯರನ್ನ ಮಾತನಾಡಿಸಿ ಕುಶಲೋಪರಿ ವಿಚಾರಿಸಿದರು. ನಂತರ ನಡೆದ ಕಾರ್ಯಕ್ರಮದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ, ಕಾನೂನು ಸಚಿವ ಹೆಚ್.ಕೆ ಪಾಟೀಲ್ ವೇದಿಕೆಯಲ್ಲಿದ್ದರು.



**ಅಲ್ಲಾ ಹೆಸರಿನಲ್ಲಿ ಬಲ್ಕಿಸ್ ಬಾನು ಪ್ರಮಾಣ ವಚನ ಸ್ವೀಕಾರ:** ನೂತನ ಪರಿಷತ್ ಸದಸ್ಯರಾದ ಬೋಸರಾಜು, ಗೋವಿಂದರಾಜ್ (ಕಾಂಗ್ರೆಸ್), ಐವಾನ್ ಡಿಸೋಜ (ಕಾಂಗ್ರೆಸ್), ಜವರಾಯಿಗೌಡ (ಜೆಡಿಎಸ್), ಎಂ.ಜಿ. ಮೂಳೆ (ಬಿಜೆಪಿ), ಯತೀಂದ್ರ ಸಿದ್ದರಾಮಯ್ಯ (ಕಾಂಗ್ರೆಸ್), ಸಿ.ಟಿ ರವಿ (ಬಿಜೆಪಿ), ರವಿಕುಮಾರ್ (ಬಿಜೆಪಿ), ವಸಂತ್ ಕುಮಾರ್ (ಕಾಂಗ್ರೆಸ್), ಡಾ.ಚಂದ್ರಶೇಖರ ಪಾಟೀಲ್ (ಕಾಂಗ್ರೆಸ್ ಪದವೀಧರ ಕ್ಷೇತ್ರ) ದೇವರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ಇನ್ನೂ ಜಯದೇವ್ ಗುತ್ತೇದಾರ್ (ಕಾಂಗ್ರೆಸ್) ಬುದ್ಧ, ಬಸವ, ಅಂಬೇಡ್ಕರ್ ಹೆಸರಿನಲ್ಲಿ ಪ್ರಮಾಣ ಸ್ವೀಕರಿಸಿದರೆ, ಬಲ್ಕಿಸ್ ಬಾನು (ಕಾಂಗ್ರೆಸ್) ಅಲ್ಲಾ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

**ಸಿಎಂ ಕಾಲಿಗೆ ಬಿದ್ದ ಸಿ.ಟಿ ರವಿ:** ಇನ್ನೂ ಸಮಾರಂಭದಲ್ಲಿ, ಪರಿಷತ್ ನೂತನ ಸದಸ್ಯನಾಗಿ ಪ್ರಮಾಣ ವಚನ ಸ್ವೀಕರಿಸಿದ ಸಿ.ಟಿ ರವಿ ಬಳಿಕ ಸಿಎಂ ಕಾಲಿಗೆ ನಮಸ್ಕರಿಸಿದರು. ಇದೇ ವೇಳೆ ನಗುಮೊಗದಿಂದಲೇ ಸಿ.ಟಿ ರವಿ ಬೆನ್ನು ತಟ್ಟಿ, ಕಿವಿ ಹಿಂಡಿ ಬೀಳ್ಕೊಟ್ಟರು. ಸಿ.ಟಿ ರವಿ ಪ್ರತಿಜ್ಞಾವಿಧಿ ಸ್ವೀಕಾರದ ವೇಳೆ ಅಭಿಮಾನಿಗಳು ಶಿಳ್ಳೆ ಚಪ್ಪಾಳೆ ಮಳೆಗರೆದರು. 'ಜೈ ಶ್ರೀರಾಮ್' ಘೋಷಣೆ ಕೂಗಿದರು.

## ಮತ್ತೊಬ್ಬ ಆರೋಪಿ ಬಂಧನ!

**ಏನಿದು ಪ್ರಕರಣ?:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧೀಕ್ಷಕ ಚಂದ್ರಶೇಖರನ್ ಕೆಲದಿನಗಳ ಹಿಂದೆಯಷ್ಟೇ ಶಿವಮೊಗ್ಗದಲ್ಲಿರುವ ತಮ್ಮ ನಿವಾಸದಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದರು. ಆತ್ಮಹತ್ಯೆಗೂ ಮುನ್ನ ಬರೆದಿದ್ದ ಡೆತ್‌ನೋಟ್‌ನಲ್ಲಿ ಮೂವರು ಹೆಸರು ಹಾಗೂ ಬಹುಕೋಟಿ ಹಗರಣ ನಡೆದಿರುವ ಬಗ್ಗೆ ಉಲ್ಲೇಖಿಸಿದ್ದರು. ಈ ಬೆನ್ನಲ್ಲೇ ಬ್ಯಾಂಕ್‌ನಿಂದ 94 ಕೋಟಿ ರೂ. ಅಕ್ರಮವಾಗಿ ವರ್ಗಾವಣೆಯಾಗಿದೆ. ಹಣ ವರ್ಗಾವಣೆಯಾದ ಬಗ್ಗೆ ಯಾವುದೇ ಮೇಲ್, ಮೆಸೇಜ್ ಬಂದಿಲ್ಲ, ಬ್ಯಾಂಕ್ ಸಿಬ್ಬಂದಿಯಿಂದಲೇ ನಕಲಿ ದಾಖಲೆ ಸೃಷ್ಟಿಸಿ ವಂಚನೆ ಎಸಗಿದ್ದಾರೆ ಎಂದು ಆರೋಪಿಸಿ ನಿಗಮದ ಪ್ರಧಾನ ವ್ಯವಸ್ಥಾಪಕ ರಾಜಶೇಖರ್ ಅವರು ದೂರು ನೀಡಿದ್ದರು. ದೂರಿನ ಆಧಾರದ ಮೇಲೆ ಬ್ಯಾಕ್‌ನ 6 ಮಂದಿ ಸಿಬ್ಬಂದಿ ವಿರುದ್ಧ ಹೈಗ್ರೌಂಡ್ಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ನಂತರ ಬಹುಕೋಟಿ ಹಗರಣದ ಹಿನ್ನೆಲೆಯಲ್ಲಿ ಸಿಬಿಐ, ಇಡಿ ಸಹ ತನಿಖೆಗೆ ಎಂಟ್ರಿ ಆಗಿದೆ.

## ರೇವಣ್ಣ ಕಿಕ್ ಔಟ್!

ಆದರೆ ರೇವಣ್ಣ ಫೋಟೋವನ್ನು ಮಾತ್ರ ಮಂಡ್ಯ ಜೆಡಿಎಸ್ ನಾಯಕರು ಕೈಬಿಟ್ಟಿರುವುದು ಅನುಮಾನಕ್ಕೆ ಎಡೆ ಮಾಡಿಕೊಟ್ಟಿದೆ.

ಪಕ್ಷದಿಂದ ಉಚ್ಚಾಟನೆ ಮಾಡದಿದ್ರೂ, ನಾಯಕರು ಅಂತರ ಕಾಯ್ದುಕೊಂಡಿರುವುದನ್ನು ಇಲ್ಲಿ ಗಮನಿಸಬಹುದಾಗಿದೆ. ರೇವಣ್ಣ ಫ್ಯಾಮಿಲಿ ಸಾಲು ಸಾಲು ಆರೋಪಗಳನ್ನು ಎದುರಿಸುತ್ತಿದೆ. ಕಿಡ್ನಾಪ್ ಕೇಸ್ ನಲ್ಲಿ ರೇವಣ್ಣ ಜೈಲಿಗೆ ಹೋಗಿ ಬಂದರೆ, ಪತ್ನಿ ಭವಾನಿ ರೇವಣ್ಣ ಜಾಮೀನು ಪಡೆದಿದ್ದಾರೆ. ಇನ್ನೊಂದೆಡೆ ಅತ್ಯಾಚಾರ ಪ್ರಕರಣದಲ್ಲಿ ಪ್ರಜ್ವಲ್ ರೇವಣ್ಣ ಜೈಲು ಸೇರಿದ್ದಾರೆ, ಮತ್ತೊಂದೆಡೆ ಅಸಹಜ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಡಾ. ಸೂರಜ್ ರೇವಣ್ಣ ಸಿಐಡಿ ಕಸ್ಟಡಿಯಲ್ಲಿದ್ದಾರೆ. ಇದರಿಂದ ದೇವೇಗೌಡರ ಕುಟುಂಬದ ಜೊತೆಗೆ ಪಕ್ಷಕ್ಕೂ ಡ್ಯಾಮೇಜ್ ಆಗಿದೆ.

ಈ ಡ್ಯಾಮೆಜ್ ಕಂಟ್ರೋಲ್ ಗೆ ರೇವಣ್ಣರಿಂದ ದಳಪತಿಗಳು ಅಂತರ ಕಾಯ್ದುಕೊಂಡಿದ್ದಾರೆ. ಈ ಹಿಂದೆ ಪಕ್ಷದ ಪ್ರತೀ ಫ್ಲೆಕ್ಸ್ ಗಳಲ್ಲೂ ರೇವಣ್ಣ ಫೋಟೋ ಕಡ್ಡಾಯವಾಗಿ ಇರುತ್ತಿತ್ತು. ರೇವಣ್ಣ ಜೊತೆಗೆ ಪ್ರಜ್ವಲ್, ಸೂರಜ್ ಫೋಟೋ ಕೂಡ ಬಳಸಲಾಗುತ್ತಿತ್ತು. ಒಟ್ಟಿನಲ್ಲಿ ಮಂಡ್ಯದಲ್ಲಿ ತಮ್ಮದೇ ಪ್ರಭಾವ ಹೊಂದಿದ್ದ ರೇವಣ್ಣ ಕುಟುಂಬವನ್ನು ಇದೀಗ ದಳಪತಿಗಳು ದೂರ ಇಟ್ಟಿರುವುದು ಫ್ಲೆಕ್ಸ್ ವಿಚಾರದಲ್ಲಿ ಎದ್ದು ಕಾಣುತ್ತಿದೆ.

## ಇಂದು ತುಮಕೂರು ಬಂದ್!

**ಮಿಶ್ರ ಪ್ರತಿಕ್ರಿಯೆ:** ಅಲ್ಲದೇ ಪ್ರತಿಭಟನಾ ನಿರತರು ಬಲವಂತವಾಗಿ ಯಾವುದೇ ಅಂಗಡಿ-ಮುಂಗಟ್ಟುಗಳನ್ನು ಮುಚ್ಚಿಸದಂತೆ ಪೊಲೀಸರು ಸೂಚನೆ ನೀಡಿದ್ದಾರೆ. ಹೀಗಿದ್ದೂ ಕೆಲವರು, ಬೈಕ್ ರ್‍ಯಾಲಿ ಮೂಲಕ ಅಂಗಡಿ-ಮುಂಗಟ್ಟುಗಳನ್ನು ಬಂದ್ ಮಾಡಿಸುವ ಪ್ರಯತ್ನ ನಡೆದಿದೆ. ಇನ್ನೂ ತುಮಕೂರು ನಗರದ ಸೇರಿದಂತೆ ಜಿಲ್ಲೆಯಾದ್ಯಂತ ವಾಹನ ಸಂಚಾರ ಎಂದಿನಂತೆ ಸಾಗಿದೆ, ಪ್ರತಿಭಟನೆ ಶುರುವಾದ ಬಳಿಕ ಬೆಂಬಲ ಹೇಗಿರಲಿದೆ ಎಂಬುದನ್ನು ಕಾದು ನೋಡಬೇಕಿದೆ.

## ಯಾರಿಗೂ ಅವಕಾಶವಿಲ್ಲ!

ಊಟ, ತಿಂಡಿ ಅಂತಾ ಯಾವುದೇ ಸಮಯದಲ್ಲೂ ಜೈಲಿನ ಕೈದಿಗಳು ದರ್ಶನ್ ಬ್ಯಾರಕ್ ಬಳಿ ಬರದಂತೆ ತಡೆ ನೀಡಲಾಗುತ್ತಿದೆ.

ಇನ್ನು ಬ್ಯಾರಕ್ ನಲ್ಲಿ ತನ್ನ ಜೊತೆಗಿದ್ದವರ ಜೊತೆಯೇ ದರ್ಶನ್ ಸರಿಯಾಗಿ ಮಾತನಾಡುತ್ತಿಲ್ಲ. ಮಾನಸಿಕವಾಗಿ ಕುಗ್ಗಿರೋ ನಟ ಭದ್ರತಾ ಕೊಠಡಿಯಲ್ಲಿ ಮೌನಕ್ಕೆ ಜಾರಿದ್ದಾರೆ ಎಂಬ ಮಾಹಿತಿ ಕೂಡ ಲಭ್ಯವಾಗಿದೆ.

## ಕೋರ್ಟ್‌ಗೆ ಹಾಜರ್ ಸಾಧ್ಯತೆ

**ಏನಿದು ಪ್ರಕರಣ?:** 2023ರ ಸೆಪ್ಟೆಂಬರ್ 3 ರಂದು ಕಾರ್ಯಕ್ರಮವೊಂದರಲ್ಲಿ ಮಾತನಾಡುತ್ತಾ, ಸನಾತನದ ಧರ್ಮವು ಡೆಂಗ್ಯೂ, ಮಲೇರಿಯಾ ಇದ್ದಂತೆ. ಅದನ್ನು ನಿರ್ಮೂಲನೆ ಮಾಡಬೇಕೇ ಹೊರತು, ವಿರೋಧಿಸಬಾರದು ಎಂದು ಉದಯನಿಧಿ ಸ್ಟಾಲಿನ್

**ಮೊದಲನೇ ಪುಟದಿಂದ...**

ವಿವಾದಾತ್ಮಕ ಹೇಳಿಕೆ ನೀಡಿದ್ದರು.

ಸನಾತನ ಧರ್ಮದ ನಿರ್ಮೂಲನೆ ಆಗಬೇಕು. ಅದು ಸಾಮಾಜಿಕ ನ್ಯಾಯ ಮತ್ತು ಸಮಾನತೆಗೆ ವಿರುದ್ಧವಾಗಿದೆ ಎಂದು ಕರೆ ನೀಡಿದ್ದರು. ''ಕೆಲವು ವಿಷಯಗಳನ್ನು ವಿರೋಧಿಸಲು ಸಾಧ್ಯವಿಲ್ಲ. ಅದನ್ನು ನಿರ್ಮೂಲನೆ ಮಾಡಬೇಕು. ನಾವು ಡೆಂಗ್ಯೂ, ಸೊಳ್ಳೆಗಳು, ಮಲೇರಿಯಾ ಅಥವಾ ಕೊರೊನಾ ವೈರಸ್ ಅನ್ನು ವಿರೋಧಿಸಲು ಸಾಧ್ಯವಿಲ್ಲ. ಇದನ್ನು ನಿರ್ಮೂಲನೆ ಮಾಡಬೇಕು. ಅದೇ ರೀತಿ ಸನಾತನವನ್ನು ನಿರ್ಮೂಲನೆ ಮಾಡಬೇಕು ಎಂದು ಕರೆ ಕೊಟ್ಟಿದ್ದರು. ಈ ಸಂಬಂಧ ದೇಶಾದ್ಯಂತ ಪ್ರತಿಪಕ್ಷ ನಾಯಕರಿಂದ ವಿರೋಧ ವ್ಯಕ್ತವಾಗಿತ್ತು. ಇದರ ಹೊರತಾಗಿಯೂ ಉದಯನಿಧಿ ಸ್ಟಾಲಿನ್ ತಮ್ಮ ಹೇಳಿಕೆಯನ್ನು ಸಮರ್ಥಿಸಿಕೊಂಡಿದ್ದರು.

## ಅತಿಶಿ ಆಸ್ಪತ್ರೆಗೆ ದಾಖಲು

**ವೈದರ ಸಲಹೆ ತಿರಸ್ಕಾರ:** ಉಪವಾಸ ಸತ್ಯಾಗ್ರಹ ಹಿನ್ನೆಲೆಯಲ್ಲಿ ಆರೋಗ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ವೈದ್ಯರು ಸಲಹೆ ನೀಡಿದ್ದರು. ಆದರೂ ವೈದ್ಯರ ಸಲಹೆ ತಿರಸ್ಕರಿಸಿದ ಸಚಿವೆ ಅತಿಶಿ ಆರೋಗ್ಯ ಹದಗೆಟ್ಟಿದ್ದರೂ, ಹರಿಯಾಣವು ದೆಹಲಿಯ ನ್ಯಾಯಯುತವಾದ ನೀರನ್ನು ಬಿಡುಗಡೆ ಮಾಡುವವರೆಗೆ ಅನಿರ್ದಿಷ್ಟ ಉಪವಾಸ ಮುಂದುವರೆಸುವುದಾಗಿ ಪ್ರತಿಜ್ಞೆ ಮಾಡಿದ್ದರು. ನನ್ನ ದೇಹವು ಎಷ್ಟೇ ನರಳಿದರೂ ಹರಿಯಾಣ ನೀರು ಬಿಡುವವರೆಗೆ ನಾನು ಉಪವಾಸ ಮುಂದುವರಿಸುತ್ತೇನೆ ಎಂದು ಅತಿಶಿ ಕಳೆದ ಒಂದು ದಿನದ ಹಿಂದೆಯಷ್ಟೇ ಕೂಗಿ ಹೇಳಿದ್ದರು. ಈ ನಡುವೆ ದೆಹಲಿ ಕ್ಯಾಬಿನೆಟ್ ಮಂತ್ರಿಗಳು ಜಂಗ್ಪುರದ ಉಪವಾಸ ಸತ್ಯಾಗ್ರಹ ಸ್ಥಳದಲ್ಲಿ ಸಭೆ ನಡೆಸಿದ್ದರು ಮತ್ತು ಪರಿಹಾರ ಕೋರಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆಯಲು ನಿರ್ಧರಿಸಿದ್ದರು. ಎಎಪಿ ಅತಿಶಿ ಅವರ ಉಪವಾಸ ಬೆಂಬಲಿಸಿ ಕ್ಯಾಂಡಲ್ ಲೈಟ್ ಮೆರವಣಿಗೆ ಮಾಡಲು ಘೋಷಿಸಲಾಗಿದೆ.

## ನಮ್ಮ ಪಕ್ಷದವರಿಂದಲೇ ಹಣ

ಹೈಕಮಾಂಡ್ ನಾಯಕರಿಗೆ ವರದಿ ನೀಡಿದ್ದಾರೆ. ಸಂಪನ್ಮೂಲದ ವ್ಯವಸ್ಥೆ ಹಾಗೂ ಇತರ ಸಮಸ್ಯೆಗಳ ಬಗ್ಗೆ ದೂರಿನಲ್ಲಿ ಉಲ್ಲೇಖಿಸಿದ್ದಾರೆ. ದೊಡ್ಡ ದೊಡ್ಡ ಜವಾಬ್ದಾರಿ ಇದ್ದವರೆ ಪಕ್ಷ ವಿರೋಧಿ ಚಟುವಟಿಕೆ ಮಾಡಿದ್ದಾರೆ ಎಂಬುದು ಹೈಕಮಾಂಡ್ ಗಮನಕ್ಕೆ ಬಂದಿದೆ. ಅದಕ್ಕೆ ಏನು ಕ್ರಮ ತೆಗೆದುಕೊಳ್ಳಬೇಕೆಂಬುದನ್ನ ಹೈಕಮಾಂಡ್ ನಿರ್ಧಾರ ಮಾಡುತ್ತದೆ ಎಂದರು.

**ಹಿರಿಯ ನಾಯಕರಿಂದಲೂ ದೂರು:** ಪಕ್ಷ ವಿರೋಧ ಚಟುವಟಿಕೆ ಕುರಿತು ಹರಿಹರ ವಿಧಾನಸಭಾ ಕ್ಷೇತ್ರದ ಶಾಸಕರೇ ಹೇಳುತ್ತಾರೆಂದರೆ ಅದು ಗಂಭೀರ ಆರೋಪ. ಅದು ಸಾಮಾನ್ಯವಲ್ಲ. ಇದನ್ನ ಗಂಭೀರವಾಗಿ ಪರಿಗಣಿಸಬೇಕು. ಲೋಕಸಭಾ ಚುನಾವಣೆಯಲ್ಲಿ ಸೋಲುಕಂಡ ಅಭ್ಯರ್ಥಿಗಳು ಹಾಗೂ ಗೆದ್ದ ಕೆಲವು ಅಭ್ಯರ್ಥಿಗಳಿಂದಲೂ ದೂರುಗಳು ಕೇಳಿಬಂದಿವೆ. ತುಮಕೂರಿನಲ್ಲಿ ಸೋಮಣ್ಣ ಅವರನ್ನ ಸೋಲಿಸಲು ಅಪಾರ ಪ್ರಮಾಣದ ಹಣ ಬಿಜೆಪಿ ಮೂಲದಿಂದಲೇ ಹೋಗಿದೆ ಎಂದು ಆರೋಪ ಮಾಡಿದ್ದಾರೆ. ಕಲಬುರಗಿಯ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಉಮೇಶ ಯಾದವ್ ಅವರದ್ದು ಇದೆ ಆರೋಪವಾಗಿದೆ. ಬೀದರ್ ಕ್ಷೇತ್ರದಿಂದ ಸ್ಪರ್ಧಿಸಿದ್ದ ಭಗವಂತ ಖೂಬಾ, ಚಿಕ್ಕೋಡಿ ಕ್ಷೇತ್ರದ ಅಣ್ಣಾ ಸಾಹೇಬ್ ಜೊಲ್ಲೆ ಅವರದ್ದು ಹೀಗೆ ಆಗಿದೆ ಎಂದ ಯತ್ನಾಳ್ ಆರೋಪಿಸಿದ್ದಾರೆ.

## ಸಿಮ್ ಖರೀದಿಸಿದ ಪೊಲೀಸರು

ಶನಿವಾರ ರಾತ್ರಿ ದರ್ಶನ್‌ಗೆ ಜೈಲಿನ ಮೆನುವಿನಂತೆ ಮುದ್ದೆ, ಚಪಾತಿ, ಅನ್ನ ಸಾಂಬಾರ್, ಮಜ್ಜಿಗೆ ನೀಡಲಾಗಿದೆ. ದಿನದ ಮೂರು ಹೊತ್ತು ಮಾಂಸಾಹಾರ ಸೇವನೆ ಮಾಡುತ್ತಿದ್ದ ದರ್ಶನ್‌ಗೆ ಇದೀಗ ಜೈಲೂಟ ಸರಿಯಾಗಿ ಸೇರುತ್ತಿಲ್ಲ. ಹೀಗಾಗಿ ಚಪಾತಿ ಮಾತ್ರ ತಿಂದು ಮಜ್ಜಿಗೆ ಕುಡಿದಿರುವ ದರ್ಶನ್, ಜೈಲು ಸಿಬ್ಬಂದಿ ಕೊಟ್ಟ ಅನ್ನ ಬೇಡ ಎಂದಿದ್ದರು ಎನ್ನಲಾಗಿದೆ.

ಕೊಲೆ ಆರೋಪಿಗಳು ಈಗಾಗಲೇ ಒಳಸಂಚಿನಲ್ಲಿ ಭಾಗಿಯಾಗಿದ್ದಾರೆ. ಎಲ್ಲರನ್ನೂ ಒಂದೇ ಜೈಲಿನಲ್ಲಿ ಇರಿಸಿದರೆ ಸಾಕ್ಷಿ ನಾಶಕ್ಕೆ ಸಂಚು ರೂಪಿಸುವ ಸಾಧ್ಯತೆಗಳಿರುವ ಹಿನ್ನೆಲೆಯಲ್ಲಿ ಆರೋಪಿಗಳನ್ನು ಪ್ರತ್ಯೇಕವಾಗಿ ರಾಜ್ಯದ ವಿವಿಧ ಜೈಲುಗಳಲ್ಲಿ ಇರಿಸಲು ನಿರ್ದೇಶಿಸುವಂತೆ ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್ ನ್ಯಾಯಾಲಯಕ್ಕೆ ಮನವಿ ಮಾಡಿದ್ದರು. ಅದರಂತೆ ನ್ಯಾಯಾಲಯ ಸೋಮವಾರ ವಿಚಾರಣೆ ನಡೆಸಿ ನಾಲ್ಕು ಕೈದಿಗಳನ್ನು ತುಮಕೂರು ಜೈಲಿಗೆ ಸ್ಥಳಾಂತರಿಸುವ ಬಗ್ಗೆ ಸೂಚನೆ ನೀಡಿದೆ.

## ನ್ಯಾಯಾಂಗ ನಿಂದನೆ

ಇದರಿಂದ ಸರ್ಕಾರದ ವಿರುದ್ಧ ನ್ಯಾಯಂಗ ನಿಂದನೆ ಅರ್ಜಿ ಸಲ್ಲಿಸಲಾಗಿದೆ ಎಂದು ಹೇಳಿದರು.

ಬಳಿಕ ಸರ್ಕಾರದ ಪರ ಹಾಜರಿದ್ದ ವಕೀಲರು ಅರ್ಜಿಗೆ ಆಕ್ಷೇಪಣೆ ಸಲ್ಲಿಸಿ ವಾದ ಮಂಡಿಸಲು ಸ್ವಲ್ಪ ಕಾಲಾವಕಾಶ ನೀಡುವಂತೆ ಮನವಿ ಮಾಡಿದರು. ಅಲ್ಲದೆ ಈ ಬಗ್ಗೆ ಅಡ್ವೋಕೇಟ್ ಜನರಲ್ ಕೆ. ಶಶಿಕಿರಣ್ ಶೆಟ್ಟಿ ವಾದ ಮಂಡಿಸಲು ಕಾಲಾವಕಾಶ ನೀಡಬೇಕೆಂದು ಕೋರಿದರು.

ಅವಧಿ ಮುಗಿದ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಗೆ ಚುನಾವಣೆ ನಡೆಸಲು ಕೋರಿ ಚುನಾವಣಾ ಆಯೋಗ ಈ ಹಿಂದೆ ನ್ಯಾಯಾಲಯದಲ್ಲಿ ಪಿಐಎಲ್ ಸಲ್ಲಿಸಿತ್ತು. ಅರ್ಜಿಯಲ್ಲಿ ಕ್ಷೇತ್ರ ಮರುವಿಂಗಡಣೆಗೆ ಸರ್ಕಾರ ಆಯೋಗ ರಚಿಸಿರುವುದನ್ನೂ ಪ್ರಶ್ನಿಸಿತ್ತು.

ಈ ಅರ್ಜಿ ವಿಚಾರಣೆ ವೇಳೆ ರಾಜ್ಯ ಸರ್ಕಾರ 2023ರ ಡಿಸೆಂಬರ್ 19ರಂದು ಪುನರ್‌ವಿಂಗಡೆ ಅಧಿಸೂಚನೆ ಹೊರಡಿಸುವುದಾಗಿ ಹೇಳಿತ್ತು. ಸರ್ಕಾರದ ಹೇಳಿಕೆ ಪರಿಗಣಿಸಿ ಹೈಕೋರ್ಟ್ ಅರ್ಜಿ ಇತ್ಯರ್ಥಪಡಿಸಿತ್ತು. ಆದರೆ, ಸರ್ಕಾರ ತಾನು ಹೇಳಿದಂತೆ ನಡೆದುಕೊಂಡಿಲ್ಲ ಎಂದು ಚುನಾವಣಾ ಆಯೋಗ ಇದೀಗ ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಸಿದೆ.

## ಕಾಂಗ್ರೆಸ್

ನಮಗೆ ನೆನಪಿಸುತ್ತದೆ. ಅಧಿಕಾರದಲ್ಲಿ ಉಳಿಯಲು ಆಗಿನ ಕಾಂಗ್ರೆಸ್ ಸರ್ಕಾರವು ಪ್ರತಿಯೊಂದು ಪ್ರಜಾಪ್ರಭುತ್ವದ ತತ್ವಗಳನ್ನು ಕಡೆಗಣಿಸಿ ದೇಶವನ್ನು ಜೈಲಿನಂತೆ ಮಾಡಿತ್ತು ಎಂದು ಮೋದಿ ಬರೆದಿದ್ದಾರೆ.

ಕಾಂಗ್ರೆಸ್ ಪಕ್ಷವನ್ನು ಒಪ್ಪದ ಜನರಿಗೆ ಚಿತ್ರಹಿಂಸೆ ನೀಡಲಾಯಿತು, ದುರ್ಬಲ ವರ್ಗಗಳನ್ನು ಗುರಿಯಾಗಿಸಲು ಸಾಮಾಜಿಕವಾಗಿ ಪ್ರತಿಗಾಮಿ ನೀತಿಗಳನ್ನು ಜಾರಿಗೆ ತರಲಾಯಿತು.

ತುರ್ತು ಪರಿಸ್ಥಿತಿ ಹೇರಿದವರಿಗೆ ನಮ್ಮ ಸಂವಿಧಾನದ ಮೇಲಿನ ಪ್ರೀತಿಯನ್ನು ವ್ಯಕ್ತಪಡಿಸುವ ಹಕ್ಕು ಇಲ್ಲ ಎಂದರು. ಪತ್ರಿಕಾ ಸ್ವಾತಂತ್ರ್ಯಕ್ಕೆ ಕಡಿವಾಣ ಹಾಕಲು ಮಸೂದೆ ತರಲಾಗಿತ್ತು, ಹಲವು ಸಂದರ್ಭಗಳಲ್ಲಿ 356ನೇ ವಿಧಿಯನ್ನು ವಿಧಿಸಿದವರು ಕೂಡ ಇವರೇ.

ಯಾವ ಪಕ್ಷದ ಕಾಲದಲ್ಲಿ ತುರ್ತು ಪರಿಸ್ಥಿತಿ ಹೇರಿತ್ತೋ ಆ ಪಕ್ಷ ಇನ್ನೂ ಜೀವಂತವಾಗಿದೆ. ತಮ್ಮ ಸಾಂಕೇತಿಕತೆಯ ಮೂಲಕ ಸಂವಿಧಾನದ ಬಗೆಗಿನ ತಿರಸ್ಕಾರವನ್ನು ಮರೆಮಾಡುತ್ತಾರೆ. ಆದರೆ ಭಾರತದ ಜನರು ಅವರ ಕಾರ್ಯಗಳ ಮೂಲಕ ನೋಡಿದ್ದಾರೆ. ಜನರು ಮತ್ತೆ ಅವರನ್ನು ತಿರಸ್ಕರಿಸಿದ್ದಾರೆ ಎಂದಿದ್ದಾರೆ.

**ನರೇಂದ್ರ, ಮೋದಿ ಟ್ವೀಟ್:** ಕೇಂದ್ರ ಗೃಹ ಸಚಿವ ಅಮಿತ್ ಶಾ ಮಾತನಾಡಿ, ದೇಶದಲ್ಲಿ ಪ್ರಜಾಪ್ರಭುತ್ವವನ್ನು ಕೊಂದು ಅದರ ಮೇಲೆ ಪದೇ ಪದೇ ದಾಳಿ ಮಾಡುವ ಸುದೀರ್ಘ ಇತಿಹಾಸವನ್ನು ಕಾಂಗ್ರೆಸ್ ಹೊಂದಿದೆ. 1975ರಲ್ಲಿ ಈ ದಿನ ಕಾಂಗ್ರೆಸ್ ಹೇರಿದ್ದ ತುರ್ತು ಪರಿಸ್ಥಿತಿಯೇ ಇದಕ್ಕೆ ಉದಾಹರಣೆ. ನಿರಂಕುಶ ಪ್ರಭುತ್ವದ ಕಾಂಗ್ರೆಸ್ ಸರ್ಕಾರ ಒಂದೇ ಕುಟುಂಬದ ಅಧಿಕಾರದ ಸುಖಕ್ಕಾಗಿ ದೇಶದ ಎಲ್ಲಾ ನಾಗರಿಕ ಹಕ್ಕುಗಳನ್ನು 21 ತಿಂಗಳುಗಳ ಕಾಲ ಅಮಾನತುಗೊಳಿಸಿತ್ತು ಎಂದು ಹೇಳಿದ್ದಾರೆ.

## ಆರೋಪ

ಮುಂದಿನ ವಿಧಾನಸಭೆ ಚುನಾವಣೆಗೆ ತಮ್ಮ ಮಗನ ಭವಿಷ್ಯಕ್ಕಾಗಿ ನನ್ನನ್ನು ಅಧಿಕಾರದಿಂದ ಇಳಿಸಲು ಯತ್ನಿಸುತ್ತಿದ್ದಾರೆ. ನನ್ನನ್ನು ಅಧ್ಯಕ್ಷ ಸ್ಥಾನದಿಂದ ಇಳಿಸಲು ಮೈಮುಲ್ ನ ಇತರ ಸದಸ್ಯರ ಮೇಲೆ ಒತ್ತಡ ಹೇರುತ್ತಿದ್ದಾರೆ. ವಾಸಸ್ಥಳ ದೃಡೀಕರಣ ಪತ್ರ, 65 ಎನ್‌ಕ್ವೈರಿ, 64 ಎನ್ ಕ್ವೈರಿ ಹೆಸರಿನ್ನಲ್ಲಿ ಪದೇ ಪದೇ ಕಿರುಕುಳ ನೀಡಲಾಗುತ್ತಿದೆ ಎಂದರು.

ಅಲ್ಲದೆ ಅಧಿಕಾರಿಗಳನ್ನು ನಸುಕಿನ 5 ಗಂಟೆಗೇನೇ ಹಾಲು ಉತ್ಪಾದಕ ಕೇಂದ್ರಗಳಿಗೆ ಕಳುಹಿಸಿ ತೊಂದರೆ ಕೊಡುತ್ತಿದ್ದಾರೆ. ಮೈಮುಲ್ ನ ಇತರ ನಿರ್ದೇಶಕರ ಮೇಲೂ ಒತ್ತಡ ಹಾಕುತ್ತಿದ್ದಾರೆ. ಕೆ.ವೆಂಕಟೇಶ್ ಸಚಿವರಾದ ದಿನದಿಂದಲೇ ತೊಂದರೆ ನೀಡುತ್ತಿದ್ದಾರೆ ಎಂದು ಪಿ.ಎಂ.ಪ್ರಸನ್ನ ತಿಳಿಸಿದರು.

## ಸಲಿಂಗಕಾಮ ಪ್ರಕರಣ: ಸೂರಜ್ ರೇವಣ್ಣ 8 ದಿನ ಸಿಐಡಿ ಕಸ್ಟಡಿಗೆ

**ಬೆಂಗಳೂರು:** ಅಸ್ವಾಭಾವಿಕ ಲೈಂಗಿಕ ದೌರ್ಜನ್ಯ ಕೇಸ್‌ನಲ್ಲಿ ಬಂಧನಕ್ಕೆ ಒಳಗಾದ ರೇವಣ್ಣ ಅವರ ಹಿರಿಯ ಪುತ್ರ ವಿಧಾನಪರಿಷತ್ ಸದಸ್ಯ ಸೂರಜ್ ರೇವಣ್ಣ ಅವರನ್ನು ಕೋರ್ಟ್ 8 ದಿನ ಸಿಐಡಿ ಕಸ್ಟಡಿಗೆ ನೀಡಿದೆ.

ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದ ಸರ್ಕಾರ ಸಿಐಡಿಗೆ ವಹಿಸಿ ಭಾನುವಾರ ಆದೇಶಿಸಿತ್ತು. ಆದರೆ ಅಧಿಕೃತವಾಗಿ ಸಿಐಡಿಗೆ ವರ್ಗಾವಣೆ ಆಗಿರಲಿಲ್ಲ. ಭಾನುವಾರ 42ನೇ ಎಸಿಎಂಎಂ ಕೋರ್ಟ್ ನ್ಯಾಯಾಧೀಶರು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿತ್ತು.

ಇಂದು ಸೂರಜ್ ರೇವಣ್ಣ ಅವರನ್ನು ಪೊಲೀಸರು ಕೋರ್ಟ್‌ಗೆ ಹಾಜರು ಪಡಿಸಿದರು. ವಿಚಾರಣೆ ವೇಳೆ ಸರ್ಕಾರಿ ವಕೀಲರು 14 ದಿನ ಪೊಲೀಸ್ ಕಸ್ಟಡಿಗೆ ನೀಡುವಂತೆ ಮನವಿ ಮಾಡಿದರು. ಆದರೆ ನ್ಯಾಯಾಧೀಶರು 8 ದಿನ ಪೊಲೀಸ್ ಕಸ್ಟಡಿಗೆ ನೀಡಿದರು. ಜುಲೈ 1 ಸಂಜೆ 4 ಗಂಟೆಗೆ ಸೂರಜ್ ರೇವಣ್ಣ ಅವರನ್ನು ಕೋರ್ಟ್‌ಗೆ ಹಾಜರುಪಡಿಸುವಂತೆ ನ್ಯಾಯಾಧೀಶರು ಸಿಐಡಿ ಪೊಲೀಸರಿಗೆ ಸೂಚಿಸಿದ್ದಾರೆ.




ಸಂತ್ರಸ್ತನ ವಿರುದ್ಧ ನೀಡಿದ್ದ ದೂರಿಗೆ ಸಾಕ್ಷಿ ನೀಡಲು ಸೂರಜ್ ರೇವಣ್ಣ ಶನಿವಾರ ಸಂಜೆ ಹಾಸನದ ಸೆನ್ ಠಾಣೆಗೆ ತೆರಳಿದ್ದರು. ಈ ವೇಳೆ ಸೂರಜ್ ರೇವಣ್ಣರನ್ನು ವಶಕ್ಕೆ ಪಡೆದ ಹಾಸನ ಪೊಲೀಸರು ಮುಂಜಾನೆಯವರೆಗೂ ಸುದೀರ್ಘ ವಿಚಾರಣೆಗೆ ಒಳಪಡಿಸಿದರು. ಭಾನುವಾರ ಬೆಳಗ್ಗೆ ಸೂರಜ್‌ರನ್ನು ಅಧಿಕೃತವಾಗಿ ಬಂಧಿಸಿದರು.

ಲೈಂಗಿಕ ದೌರ್ಜನ್ಯಕ್ಕೆಒಳಪಟ್ಟಿದ್ದಾರೆ ಎನ್ನಲಾದ ಸಂತ್ರಸ್ತನಿಗೆ ಬೌರಿಂಗ್ ಆಸ್ಪತ್ರೆಯಲ್ಲಿ ಭಾನುವಾರ ವೈದ್ಯಕೀಯ ಪರೀಕ್ಷೆ ನಡೆಸಲಾಗಿದೆ.

## ನೀಟ್ ಪ್ರಶ್ನೆಪತ್ರಿಕೆ ಸೋರಿಕೆ: ಸೈಬರ್ ಗ್ಯಾಂಗ್ ಜತೆಗೂಡಿ ನಡೆಸಿತು ಎಕ್ಸಾಂ ಮಾಫಿಯಾ ದಂಧೆ, 6 ಮಂದಿ ಬಂಧನ

**ನವದೆಹಲಿ:** ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮತ್ತೊಂದು ವಿಚಾರ ಬೆಳಕಿಗೆ ಬಂದಿದೆ. ಪರೀಕ್ಷಾ ಮಾಫಿಯಾ ಹಾಗೂ ಸೈಬರ್ ಕ್ರಿಮಿನಲ್ ಗಳು ಒಟ್ಟಾಗಿ ನೀಟ್ ಪೇಪರ್ ಸೋರಿಕೆ ಹಗರಣವನ್ನು ನಡೆಸಿದ್ದರು ಎಂಬುದು ತಿಳಿದುಬಂದಿದೆ.

ನೀಟ್ ಪೇಪರ್ ಸೋರಿಕೆ ಪ್ರಕರಣದ ತನಿಖೆ ನಡೆಸುತ್ತಿರುವ ಬಿಹಾರದ ಆರ್ಥಿಕ ಅಪರಾಧಗಳ ಘಟಕದ ತಂಡವು ಈ ವಿಷಯದಲ್ಲಿ ಸೈಬರ್ ಅಪರಾಧದ ಹೊಸ ಪ್ರಕರಣವನ್ನು ದಾಖಲಿಸಿದೆ. ಈ ಪ್ರಕರಣದಲ್ಲಿ ಜಾರ್ಖಂಡ್‌ನ ದಿಯೋಘರ್‌ನಲ್ಲಿ ಬಂಧಿತರಾದ ರಾಜೀವ್ ಕುಮಾರ್, ಪರಮ್‌ಜೀತ್ ಸಿಂಗ್ ಮತ್ತು ಪಂಕು ಕುಮಾರ್ ಮತ್ತು ಶೇಖಪುರದ ರಂಜನ್ ಕುಮಾರ್ ವಿರುದ್ಧ ಇಒಯುನಲ್ಲಿ ಪ್ರಕರಣ ದಾಖಲಾಗಿದೆ.

ಎಫ್ ಐಆರ್ ಪ್ರತಿಯಲ್ಲಿ ಈ ಸೈಬರ್ ಗ್ಯಾಂಗ್ ನೀಟ್ ಪೇಪರ್ ಸೋರಿಕೆ ಪ್ರಕರಣದಲ್ಲಿ ಹೇಗೆ ಸಕ್ರಿಯವಾಗಿತ್ತು ಮತ್ತು ನೀಟ್ ಪೇಪರ್ ಸೋರಿಕೆ ಹಗರಣದಲ್ಲಿ ಹೇಗೆ ಸಹಾಯ ಮಾಡುತ್ತಿದೆ ಎಂದು ಉಲ್ಲೇಖಿಸಲಾಗಿದೆ. ನೀಟ್ ಪೇಪರ್ ಸೋರಿಕೆ ಹಗರಣದ ಮಾಸ್ಟರ್ ಮೈಂಡ್ ಸಂಜೀವ್ ಮುಖಿಯಾ ಅವರ ಶಿಷ್ಯರಿಗೆ ಮೊಬೈಲ್ ಮತ್ತು ಸಿಮ್ ಕಾರ್ಡ್ ಗಳನ್ನು ಒದಗಿಸಿದ್ದರು. ಆತ ಕೊಟ್ಟ ಮೊಬೈಲ್ ಮತ್ತು ಸಿಮ್ ಕಾರ್ಡ್ ನಲ್ಲಿ ಪ್ರಶ್ನೆ ಉತ್ತರ ಪತ್ರಿಕೆ ಬಂದಿತ್ತು.

ಗ್ಯಾಂಗ್ ಲೀಡರ್ ರಂಜನ್ ಅವರನ್ನು ಬಂಧಿಸಲು ಐಒಯು ನಿರಂತರವಾಗಿ ಕಾರ್ಯಾಚರಣೆ ನಡೆಸುತ್ತಿದೆ. ಹಾಗೂ ಶೇಖಪುರ ಪೊಲೀಸರ ಸಹಕಾರವನ್ನೂ ಪಡೆಯಲಾಗುತ್ತಿದೆ. ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಹಾರ ಪೊಲೀಸರು ಜಾರ್ಖಂಡ್‌ನ ದಿಯೋಗಢದಲ್ಲಿ 6 ಮಂದಿ ಶಂಕಿತರನ್ನು ಬಂಧಿಸಿದ್ದಾರೆ.

ಏಮ್ಸ್ ಆಸ್ಪತ್ರೆಯ ಹತ್ತಿರದಲ್ಲಿ ಬಂಧಿತ ಆರೋಪಿಗಳು ಗೆಳೆಯನ ಮನೆಯಲ್ಲಿ ವಾಸವಿದ್ದರು. ಇವರನ್ನು ಪಾಟ್ನಾಗೆ ಕರೆತಂದು ವಿಚಾರಣೆ ನಡೆಸಲಾಗುವುದು ಎಂದು ಪೊಲೀಸ್ ಅಧಿಕಾರಿ ರಿತ್ವಿಕ್ ಶ್ರೀವಾಸ್ತವ ಹೇಳಿದ್ದಾರೆ.

ಬಂಧಿತರನ್ನು ಬಿಹಾರದ ನಳಂದ ಜಿಲ್ಲೆಯ ನಿವಾಸಿಗಳಾದ ಪರಮ್ ಜಿತ್ ಸಿಂಗ್ ಅಲಿಯಾಸ್ ಬಿಟ್ಟು, ಚಿಂಟು ಅಲಿಯಾಸ್ ಬುಲ್ದೇವ್ ಕುಮಾರ್, ಪ್ರಶಾಂತ್ ಕುಮಾರ್, ಅಜಿತ್ ಕುಮಾರ್, ರಾಜೀವ್ ಕುಮಾರ್ ಮತ್ತು ಪಾಕು ಕುಮಾರ್ ಎಂದು ಪೊಲೀಸರು ಹೇಳಿದ್ದಾರೆ. ಈ ಹಗರಣದ ಬಗ್ಗೆ ವಿರೋಧ ಪಕ್ಷಗಳು ಆಕ್ರೋಶ ವ್ಯಕ್ತಪಡಿಸಿದ್ದು, ತನಿಖೆಗೆ ಆಗ್ರಹ ಮಾಡಿವೆ, ಹಾಗೂ ಕೇಂದ್ರ ಬಿಜೆಪಿ ಸರ್ಕಾರದ ವಿರುದ್ಧ ಕಿಡಿ ಕಾರಿವೆ.

# ಸೆಂಟ್ ಮೇರಿಸ್ ಆಂಗ್ಲ ಮಾಧ್ಯಮ ಶಾಲೆ,ಮಾರ್ಟಳ್ಳಿಯಲ್ಲಿ ಶಾಲಾ ಸಂಸತ್

**ಚಾಮರಾಜನಗರ :** ಹನೂರು ತಾಲ್ಲೂಕಿನ ಮಾರ್ಟಳ್ಳಿ ಸೆಂಟ್ ಮೇರಿಸ್ ಆಂಗ್ಲ ಮಾಧ್ಯಮ ಶಾಲೆ ಮಾರ್ಟಳ್ಳಿಯಲ್ಲಿ ಶಾಲಾ ಸಂಸತ್ ಆಚರಣೆಯನ್ನು ಚುನಾವಣೆಯ ಎಲ್ಲಾ ಪ್ರಕ್ರಿಯೆಗಳನ್ನು ಅನುಸರಿಸುವ ಮೂಲಕ ಮತದಾನ ಏರ್ಪಡಿಸಲಾಯಿತು.

ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಮಾರ್ಟಳ್ಳಿ ಗ್ರಾಮದಲ್ಲಿರುವ ಸೆಂಟ್ ಮೇರಿಸ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಪೂರ್ವ ತಯಾರಿಯಂತೆ ಶಾಲಾ ವಿದ್ಯಾರ್ಥಿಗಳಿಗೆ ಮತದಾನಕ್ಕೂ ಒಂದು ವಾರ ಮುಂಚಿತವಾಗಿ ಅದಿಸೂಚನೆ ಹೊರಡಿಸಿ ಮರುದಿನ ನಾಮಪತ್ರ ಸಲ್ಲಿಸಲು ಹಾಗೂ ಹಿಂಪಡೆಯಲು ಅವಕಾಶ ಕಲ್ಪಿಸಲಾಯಿತು. ಶಾಲೆಯ 13 ವಿದ್ಯಾರ್ಥಿಗಳು ಮುಖ್ಯೋಪಾಧ್ಯಾಯರಿಗೆ ನಾಮಪತ್ರ ಸಲ್ಲಿಸುವ ಮೂಲಕ ಸ್ಪರ್ದಿಸಿದರು.

ಯಾರೊಬ್ಬರೂ ಚುನಾವಣಾ ಕಣದಿಂದ ನಾಮಪತ್ರ ಹಿಂಪಡೆಯಲಿಲ್ಲ ಸ್ಪರ್ಧಾರ್ಥಿಗಳಿಗೆ ಚಿಹ್ನೆ ಹಾಗೂ ಕ್ರಮ ಸಂಖ್ಯೆಯನ್ನು ಪ್ರಕಟಿಸಿ ಮಾದರಿ ಮತಪತ್ರದೊಂದಿಗೆ ಪ್ರಚಾರಕ್ಕೆ ಅವಕಾಶ ಕಲ್ಪಿಸಲಾಯಿತು. ನಿಗದಿಯಂತೆ ಮತಗಟ್ಟೆಯ ಅಧಿಕಾರಿಗಳ ಸಮ್ಮುಖದಲ್ಲಿ ಮತದಾನ ನಡೆಯಿತು ಒಟ್ಟು 231 ಮತದಾರರ ಪೈಕಿ 120 ವಿದ್ಯಾರ್ಥಿಗಳು 94 ವಿದ್ಯಾರ್ಥಿನಿಯರು ಮತ ಚಲಾಯಿಸುವ ಮೂಲಕ ಶೇ. 92.64 ರಷ್ಟು ಮತದಾನ ನಡೆಯಿತು. ಗಂಡು ಮಕ್ಕಳ ಪೈಕಿ ಪ್ರಿಸ್ಟ್ನ್ 59 ಮತಗಳನ್ನು ಹೆಣ್ಣು ಮಕ್ಕಳ ಪೈಕಿ ಐನ್ ಸ್ಲಿ 75 ಮತಗಳಿಸುವುದರೊಂದಿಗೆ ಆಯ್ಕೆಯಾಗಿರುತಾರೆ. ಈ ಎಲ್ಲ ಪ್ರಕ್ರಿಯೆಗಳು ವಿದ್ಯಾರ್ಥಿಗಳ ಸಮ್ಮುಖದಲ್ಲಿಯೇ ನಡೆದಿರುವುದು ವಿಶೇಷವಾಗಿರುತ್ತದೆ.

# ಮಂಗಲದಲ್ಲಿ ಭಗೀರಥ ಜಯಂತಿ



**ಚಾಮರಾಜನಗರ:** ತಾಲ್ಲೂಕಿನ ಮಂಗಲ ಗ್ರಾಮದಲ್ಲಿ ಮಹರ್ಷಿ ಭಗೀರಥ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲಾಯಿತು.

ಭಗೀರಥ ಅವರ ಭಾವಚಿತ್ರಕ್ಕೆ ಪುಷ್ಪರ್ಚನೆ ಸಲ್ಲಿಸಿ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರು ಮಹರ್ಷಿ ಭಗೀರಥರು ಆದರ್ಶ ಪುರು?ರಾಗಿದ್ದು ಲೋಕಕಲ್ಯಾಣಕ್ಕಾಗಿ ಶಿವನನ್ನು ಪ್ರಾರ್ಥಿಸಿ ಗಂಗೆಯನ್ನು ಭೂಮಿಗೆ ತಂದ ಮಹಾನ್ ಋಷಿಗಳು ಭಗೀರಥರು ಎಂದು ತಿಳಿಸಿದರು. ಮಹರ್ಷಿಗಳ ಋಷಿ ಸದೃಶ ಜೀವನವನ್ನು ಪ್ರತಿಯೊಬ್ಬರು ಅನುಸರಿಸಿ ಪಾಲಿಸಿದಾಗ ಆಚರಣೆಗಳಿಗೆ ಅರ್ಥ ಬರುತ್ತದೆ ಎಂದು ಸಲಹೆ ನೀಡಿದರು. ಉಪ್ಪಾರ ಸಮುದಾಯ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಿ ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣ ಕೊಡಿಸಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ತಂದು ಸುಶಿಕ್ಷಿತ ಸಮಾಜ ನಿರ್ಮಾಣ ಮಾಡುವತ್ತ ಗಮನಹರಿಸಬೇಕೆಂದು ಕಿವಿಮಾತು ಹೇಳಿದರು. ಭಗೀರಥ ಮಹರ್ಷಿಗಳ ಭಾವಚಿತ್ರವನ್ನು ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತು. ಮಾರ್ಗದುದ್ದಕ್ಕೂ ತಳಿರು-ತೋರಣದೊಂದಿಗೆ ಶೃಂಗರಿಸಿ,ರಂಗೋಲಿ ಚಿತ್ತಾರದೊಂದಿಗೆ ಅದ್ದೂರಿಯಾದ ಮೆರವಣಿಗೆ ಸಾಗಿತು. ಅಯ್ಯನ ಸರಗೂರುಮಠದ ಮಹದೇವ ಶ್ರೀಗಳು, ಮಂಜುನಾಥಸ್ವಾಮಿ, ಗ್ರಾ.ಪಂ ಅಧ್ಯಕ್ಷ ಅಣ್ಣಪ್ಪಸ್ವಾಮಿ, ಗ್ರಾ.ಪಂ.ಮಾಜಿ ಅಧ್ಯಕ್ಷ ಶಿವಣ್ಣ,ಜಿ.ಪಂ ಮಾಜಿ ಅಧ್ಯಕ್ಷ ಸಿ.ಎ.ಮಹದೇವಶೆಟ್ಟಿ,ಮಂಗಲ ಶಿವಕುಮಾರ್ ,ಯ,ಕ್ಯಾತಶೆಟ್ಟಿ, ಮಹದೇವಶೆಟ್ಟಿ,ಚೌಡಶೆಟ್ಟಿ,ನಾರಾಯಣಸ್ವಾಮಿ,ಗೋಪಾಲಕೃಷ್ಣ, ದೊರೆರಾಜು, ಮಂಗಲ ಶಿವಣ್ಣ, ಬಾಗಳ್ಳಿ ರೇವಣ್ಣ, ಮಹೇಶ ಸೇರಿದಂತೆ ಗ್ರಾ.ಪಂ ಸದಸ್ಯರು ಹಾಜರಿದ್ದರು.

# ಪೌರಕಾರ್ಮಿಕರು ಪಟ್ಟಣದ ಜೀವನಾಡಿಗಳು;ಸಿ.ಆರ್.ಅಶೋಕ್



**ಕೋಲಾರ:** ಪೌರಕಾರ್ಮಿಕರು ಪಟ್ಟಣದ ಜೀವನಾಡಿಗಳಾಗಿದ್ದಾರೆ. ಅಂತಹ ಸೇವಾ ನಿರತ ಪೌರಕಾರ್ಮಿಕರನ್ನು ನಾವು ಗೌರವಿಸಬೇಕಾಗಿದೆ. ಹಾಗಾಗಿ ಅವರಿಗೆ ಇಂದು ಸನ್ಮಾನ ಮಾಡುತ್ತಿರುವುದು ಸ್ವಾಗತಾರ್ಹ ಕಾರ್ಯವಾಗಿದೆ ಎಂದು ಜಿಲ್ಲಾ ಪಂಚಾಯಿತಿ ವಯಸ್ಕರ ಶಿಕ್ಷಣಾಧಿಕಾರಿಗಳಾದ ಸಿ.ಆರ್.ಅಶೋಕ್ ತಿಳಿಸಿದರು.

ತಿಂಗಳ ಸಾಹಿತ್ಯ ಹುಣ್ಣಿಮೆ ಪ್ರಯುಕ್ತ ಕೋಲಾರ ನಗರದ ಬಾಬಾ ವಿದ್ಯಾ ಸಂಸ್ಥೆಯಲ್ಲಿ ಸ್ವರ್ಣಭೂಮಿ ಪೌಂಡೇಶನ್ ಹಾಗೂ ಕೋಲಾರ ಜಿಲ್ಲಾ ಸಾಹಿತ್ಯ ಸಾಂಸ್ಕೃತಿಕ ಬಳಗದ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ಸಂಗೀತ ದಿನ ಹಾಗೂ ಪೌರಕಾರ್ಮಿಕರ ಸನ್ಮಾನ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು. ಪೌರಕಾರ್ಮಿಕರು ತಮ್ಮ ಆರೋಗ್ಯವನ್ನು ಲೆಕ್ಕಿಸದೆ ಪಟ್ಟಣಗಳಲ್ಲಿ ರೋಗರುಜಿನಗಳನ್ನು ಹರಡುದಂತೆ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ತಮ್ಮ ಉದ್ಘಾಟನಾ ಭಾಷಣದಲ್ಲಿ ತಿಳಿಸಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಗೌರವಾಧ್ಯಕ್ಷರಾದ ಟಿ. ಸುಬ್ಬರಾಮಯ್ಯ ಮಾತನಾಡಿ ಪೌರಕಾರ್ಮಿಕರನ್ನು ನಾವು ಆರೋಗ್ಯ ಚಿಕಿತ್ಸಕರು ಎಂದು ಬಣ್ಣಿಸಬೇಕು. ನಮ್ಮ ಮನೆ ನಗರ ಸ್ವಚ್ಛವಾಗಿ ಇರಬೇಕಾದರೆ ಪೌರಕಾರ್ಮಿಕರ ಪಾತ್ರ ಬಹಳ ದೊಡ್ಡದು. ಪ್ರಾಣಿ ಪಕ್ಷಿ ಮನುಷ್ಯರ ತ್ಯಾಜ್ಯಗಳ ನಿರ್ವಹಣೆಯಲ್ಲಿ ಕೆಲಸ ಮಾಡುತ್ತಿರುವುದರಿಂದ ಪ್ರತಿಯೊಬ್ಬ ಕಾರ್ಮಿಕರು ತಮ್ಮದೆ ಆದ ಆರೋಗ್ಯ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಹಾಗಾಗಿ ಸಮಾಜ ಅವರನ್ನು ಕೀಳಾಗಿ ನೋಡದೆ ಗೌರವಯುತವಾಗಿ ನೋಡಿಕೊಳ್ಳಬೇಕು. ಅವರಿಗೆ ಆರೋಗ್ಯಕರ ಬೆಳವಣಿಗೆಗೆ ಬೇಕಾದ ಸಲಕರಣೆಗಳನ್ನು ಸರ್ಕಾರ ನೀಡಬೇಕು ಎಂದು ರವರು ತಿಳಿಸಿದರು. ದಾಸ ಸಾಹಿತ್ಯ ಪರಿಷತ್ತಿನ ಪೋಸ್ಟ್ ನಾರಾಯಣಸ್ವಾಮಿ ಮಾತನಾಡಿ ಪೌರಕಾರ್ಮಿಕರು ಗುತ್ತಿಗೆ ಆಧಾರದಲ್ಲಿ ದುಡಿಯುತ್ತಿರುವುದರಿಂದ ಅವರ ಕುಟುಂಬಗಳು ತುಂಬಾ ಸಂಕಷ್ಟದಲ್ಲಿರುತ್ತದೆ. ಅವರಿಗೆ ನೀಡುವ ಸಂಬಳವೂ ಸಹ ಕುಟುಂಬವನ್ನು ಭರಿಸಲು ಸಾಧ್ಯವಾಗುವುದಿಲ್ಲ ಅವರಿಗೂ ಎಲ್ಲರಂತೆ ಬದುಕಲು ಒಳ್ಳೆಯ ಅವಕಾಶಗಳನ್ನು ಒದಗಿಸಬೇಕೆಂದು ತಿಳಿಸಿದರು.

ಬಾಬಾ ವಿದ್ಯಾ ಸಂಸ್ಥೆಯ ಆಡಳಿತ ಅಧಿಕಾರಿಗಳಾದ ಎಂ.ಆರ್. ವೇಣುಸುಂದರಗೌಡ ಅಧ್ಯಕ್ಷತೆಯನ್ನು ವಹಿಸಿದ್ದು ಇಂತಹ ಕಾರ್ಯಕ್ರಮಗಳು ನಮ್ಮ ಶಾಲೆಯಲ್ಲಿ ನಡೆಯುವುದಕ್ಕೆ ನಾನು ಯಾವಾಗಲೂ ಸಹಕಾರವನ್ನು ನೀಡುತ್ತೇನೆ ಎಂದು ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ತಿಳಿಸಿದರು.

ಅರಳು ಸಾಹಿತ್ಯ ಪ್ರಶಸ್ತಿ ಪುರಸ್ಕೃತ ವಿ.ಲಕ್ಷ್ಮಯ್ಯ, ನಿವೃತ್ತ ಕೆ.ಎನ್. ರವೀಂದ್ರನಾಥ್, ಹಾಗೂ ಪರ್ವತ್ ಸ್ಟೋರ್ಸ್ ಮಾಲೀಕರಾದ ಆನಂದ್ ರೆಡ್ಡಿ ಮಾತನಾಡಿದರು. ಚಂದನ ವಾಹಿನಿಯ ಗಾನ ಚಂದನ ಗಾಯಕರಾದ ಹರ್ಷಿತ್. ವೈ ಹಾಗೂ ಪೌರಕಾರ್ಮಿಕರಾದ ಶ್ರೀನಿವಾಸ್, ಲಕ್ಷ್ಮಮ್ಮ ಮತ್ತು ವೆಂಕಟಾಚಲಪತಿ ಅವರನ್ನು ಸನ್ಮಾನಿಸಲಾಯಿತು. ಈ ನೆಲ ಈ ಜಲ ವೆಂಕಟಾಚಲಪತಿರವರು ಜಾನಪದ ಹಾಡನ್ನು ಅತ್ಯಂತ ಸೊಗಸಾಗಿ ಮಕ್ಕಳಿಗೂ ಹೇಳಿಕೊಡುತ್ತಾ ಸುಶ್ರಾವ್ಯವಾಗಿ ಹಾಡಿದರು. ವಕೀಲರಾದ ವೀಣಾರವಿಕುಮಾರ್, ಸುಪ್ರೀಂ ಸೇವಾ ಸಂಸ್ಥೆಯ ಸುಪ್ರೀಂ, ಶ್ರೀಧರ್ ಹಾಗೂ ಶಾಲಾ ಸಿಬ್ಬಂದಿ ವರ್ಗ ಉಪಸ್ಥಿತರಿದ್ದು, ಸ್ವರ್ಣಭೂಮಿ ಫೌಂಡೇಶನ್ ಸಂಸ್ಥಾಪಕರಾದ ಬಿ.ಶಿವಕುಮಾರ್ ಪ್ರಾಸ್ತಾವಿಕ ನುಡಿಗಳೊಂದಿಗೆ ಗಣ್ಯರನ್ನು ಸ್ವಾಗತಿಸಿ ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.

### ರಾಜ್ಯ ಕಬ್ಬು ಬೆಳೆಗಾರರ ಸಂಘದಿಂದ ಸಚಿವರಿಗೆ ಮನವಿ

# ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹ



**ಚಾಮರಾಜನಗರ:** ರೈತರ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ವತಿಯಿಂದ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಹಾಗೂ ಸಚಿವ ಡಾ.ಎಚ್.ಸಿ. ಮಹದೇವಪ್ಪ ಅವರಿಗೆ ಮನವಿ ಸಲ್ಲಿಸಲಾಯಿತು.

ಚಾಮರಾಜನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಪಂ ಕೆಡಿಪಿ ಸಭಾಂಗಣಕ್ಕೆ ಆಗಮಿಸಿದ ಸಚಿವರಿಗೆ ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಅವರು ಮನವಿ ಸಲ್ಲಿಸಿದರು.

ಸಂಘದ ಪದಾಧಿಕಾರಿಗಳ ಸಮಸ್ಯೆ ಆಲಿಸಿದ ಸಚಿವರು ಈ ಸಂಬಂಧ ಮುಂದಿನ ದಿನಗಳಲ್ಲಿ ಕ್ರಮವಹಿಸ ಲಾಗುವುದು ಎಂದು ಭರವಸೆ ನೀಡಿದರು.

ಮೈಸೂರು ಜಿಲ್ಲೆ ವ್ಯಾಪ್ತಿಯಲ್ಲಿ ಸಕ್ಕರೆ ಕಾರ್ಖಾನೆ ಆರಂಭ ಮಾಡುತ್ತಿದ್ದು ಕಳೆದ ಸಾಲಿನ ಬಾಕಿ ಯನ್ನು ಕೊಟ್ಟಿಲ್ಲ. ದ್ವಿಪಕ್ಷೀಯ ಒಪ್ಪಂದ ಪತ್ರವನ್ನು ಕೂಡ ಜಾರಿ ಮಾಡುತ್ತಿಲ್ಲ. ಕಳೆದ ಸಾಲಿನ ಲಾಭಾಂಶವನ್ನು ಹಂಚಿಕೆ ಮಾಡುತ್ತಿಲ್ಲ.ಸಕ್ಕರೆ ಕಾರ್ಖಾನೆ ಮುಂಭಾಗ ತೂಕದ ಯಂತ್ರವನ್ನು ಅಳವಡಿಸಿಲ್ಲ. ಕಟಾವು ಮತ್ತು

ಸಾಗಾಣಿಕೆ ಕೂಲಿ ಉತ್ತರ ದಕ್ಷಿಣ ಎಂಬ ತಾರತಮ್ಯವಿದೆ. ಇದನ್ನು ನಿವಾರಣೆ ಮಾಡಬೇಕು. ಬಾಳೆ ಬೆಳೆಗಾರರಿಗೆ ವಿಶೇಷ ಪ್ಯಾಕೇಜ್ ಘೋಷಣೆ ಮಾಡಬೇಕು ಎಂದು ಆಗ್ರಹಿಸಿದರು.

> **ಹಾಡಿಗಳಲ್ಲಿ ವಿದ್ಯುತ್ ಸಂಪರ್ಕ ಕಡಿತ ಮಾಡಬೇಡಿ**
>
> **ಚಾಮರಾಜನಗರ ಜಿಲ್ಲೆಯಲ್ಲಿರುವ ಹಾಡಿಗಳಲ್ಲಿ ವಿದ್ಯುತ್ ಸಂಪರ್ಕ ಕಡಿತ ಮಾಡಬಾರದು ಎಂದು ಚೆಸ್ಕಾಂ ಅಧಿಕಾರಿಗಳಿಗೆ ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ಸೂಚಿಸಿದರು. ಈಗಾಗಲೇ ಕ್ಯಾಬಿನೆಟ್ ಸಭೆಯಲ್ಲಿ ಮುಖ್ಯಮಂತ್ರಿಗಳು ಸೂಚನೆ ನೀಡಿದ್ದು ಹಾಡಿಗಳಿಗೂ 58 ಯೂನಿಟ್ ವಿದ್ಯುತ್ ನೀಡಲು ಚಿಂತಿಸಲಾಗಿದೆ. ಪ್ರಸ್ತುತ ಹಾಡಿಗಳಿಗೆ ನೀಡುತ್ತಿರುವ ವಿದ್ಯುತ್ಗೆ ಬಿಲ್ ನೀಡುವಂತೆ ಒತ್ತಾಯ ಮಾಡಬಾರದು. ಜೊತೆಗೆ ಸಂಪರ್ಕ ಕಡಿತ ಮಾಡಬಾರದು. ಎಲ್ಲ ಹಣವನ್ನು ಸರ್ಕಾರ ಸ್ವಲ್ಪ ದಿನದಲ್ಲಿಯೇ ಭರಿಸಲಿದೆ ಎಂದರು.**

ಬರ ಪರಿಹಾರವನ್ನು ಪ್ರತಿಯೊಬ್ಬ ರೈತರಿಗೂ ನೀಡಬೇಕು. ಅಕ್ರಮ ಸಕ್ರಮ ಯೋಜನೆಯನ್ನು ಮರು ಜಾರಿ ಮಾಡಬೇಕು. ಹಾಲು ಉತ್ಪಾದಕರ ಪ್ರೋತ್ಸಾಹಧನವನ್ನು ತಕ್ಷಣ ನೀಡಬೇಕು. ಕರ್ನಾಟಕ ಕಾವೇರಿ ಗ್ರಾಮೀಣ ಬ್ಯಾಂಕ್ ರೈತರಿಗೆ ನೀಡುತ್ತಿರುವ ಕಿರುಕುಳವನ್ನು ತಪ್ಪಿಸಬೇಕು. ಕಬ್ಬು ಖರೀದಿ ನಿಯಂತ್ರಣ ಮಂಡಳಿಗೆ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಅವರನ್ನು ನೇಮಕ ಮಾಡಿಕೊಳ್ಳಬೇಕು. ಮೈಸೂರು ಮತ್ತು ಚಾಮರಾಜನಗರ ಎರಡು ಜಿಲ್ಲೆಯ ಸಮಸ್ಯೆಗಳ ಬಗ್ಗೆ ಚರ್ಚಿಸಲು ಮುಖ್ಯಮಂತ್ರಿಗಳ ಜೊತೆ ಮಾತನಾಡಿ ಸಮಯ ನಿಗದಿ ಮಾಡಿ ನಮ್ಮ ಸಂಘಟನೆಗೆ ಚರ್ಚೆ ಮಾಡಲು ಅವಕಾಶ ಕಲ್ಪಿಸಬೇಕು. ಇಲ್ಲವಾದಲ್ಲಿ 10 ದಿನಗಳ ನಂತರ ಮೈಸೂರಿನ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ನಿರಂತರ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಸಂಘದ ರಾಜ್ಯ ಉಪಾಧ್ಯಕ್ಷ ಕೆರೆಹುಂಡಿ ರಾಜಣ್ಣ, ಚಾಮರಾಜನಗರ ಜಿಲ್ಲಾಧ್ಯಕ್ಷ ಹಾಲಿನ ನಾಗರಾಜ್, ರಾಜ್ಯ ಪ್ರಧಾನ ಕಾರ್ಯದರ್ಶಿ ಮಲೆಯೂರು ಹರ್ಷ, ಮೈಸೂರು ಜಿಲ್ಲಾಧ್ಯಕ್ಷ ಹಾಡ್ಯ ರವಿ, ಅಂಬಳೆ ಮಹದೇವಸ್ವಾಮಿ, ಗಣೇಶ್, ಮಲೆಯೂರು ಮಹೇಂದ್ರ, ಸತೀಶ್, ಪ್ರವೀಣ್, ಉಡಿಗಾಲ ಗ್ರಾಮ ಘಟಕ ಅಧ್ಯಕ್ಷ ಮಂಜುನಾಥ್, ಮಹದೇಸ್ವಾಮಿ, ಗುರುಮಲ್ಲಪ್ಪ, ಛೇರ್ಮನ್ ಗುರು, ಶಿವಕುಮಾರ್, ಕೂಸಪ್ಪ, ಅರಳೀಕಟ್ಟೆ ಸಿದ್ದಪ್ಪ, ಮಹದೇವಸ್ವಾಮಿ, ಕಿಳಲೀಪುರ ಗೂಳಿ ಮಹಾದೇವ, ಶ್ರೀಕಂಠ, ಗುರುವಿನಪುರ ಮೋಹನ್, ಮಂಜು, ಬಸವಣ್ಣ, ಚಂದ್ರಪ್ಪ, ಮಹೇಶ್ ಸೇರಿದಂತೆ ಇತರರಿದ್ದರು.

**ಮೈಸೂರು ನಗರದ ಬೋಗಾದಿ ಮುಖ್ಯ ರಸ್ತೆಯಲ್ಲಿರುವ ಗಂಗೋತ್ರಿ, ಪಬ್ಲಿಕ್ ಶಾಲೆಯಲ್ಲಿ ಇತ್ತೀಚೆಗೆ ಜ್ಯೋತಿ ಬೆಳಗಿಸುವ ಮೂಲಕ ನೂತನ ವಿದ್ಯಾರ್ಥಿಗಳಿಗೆ (ಫ್ರೆಶರ್ಸ್ ಡೇ) ಸ್ವಾಗತ ಸಮಾರಂಭ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಶಾಲಾ ಆಡಳಿತಾಧಿಕಾರಿ ಶ್ರೀಮತಿ ಕಾಂತಿ ನಾಯಕ್, ಮುಖ್ಯೋಪಾಧ್ಯಾಯ ಫಾರೂಕ್ ಮೊಹಮ್ಮದ್, ನೂತನ ವಿದ್ಯಾರ್ಥಿಗಳು, ಶಿಕ್ಷಕ, ಶಿಕ್ಷಕಿಯರು ಹಾಗೂ ಪೋಷಕರು ಭಾಗವಹಿಸಿದ್ದರು.**







**ಮೈಸೂರಿನ ಬೋಗಾದಿ ಮುಖ್ಯರಸ್ತೆಯಲ್ಲಿರುವ ಗಂಗೋತ್ರಿ, ಪಬ್ಲಿಕ್ ಶಾಲೆಯಲ್ಲಿ ಅಂತರರಾಷ್ಟ್ರೀಯ ಯೋಗ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಶಾಲಾ ಆಡಳಿತಾಧಿಕಾರಿ ಶ್ರೀಮತಿ ಕಾಂತಿ ನಾಯಕ್, ಶಾಲಾ ಮುಖ್ಯೋಪಾಧ್ಯಾಯ ಮೊಹಮ್ಮದ್ ಫಾರೂಕ್, ಶಿಕ್ಷಕರು, ಮಕ್ಕಳು ಮತ್ತು ಪೋಷಕರು ಉತ್ಸಾಹದಿಂದ ಭಾಗವಹಿಸಿದ್ದರು.**

# ಬೇಲೂರಿಗೆ ಸಂಚಾರಿ ಪೊಲೀಸ್ ಠಾಣೆ



**ಬೇಲೂರು:** ಪ್ರವಾಸಿ ಕೇಂದ್ರ ಬೇಲೂರು ಪಟ್ಟಣದ ಟ್ರಾಫಿಕ್ ಸಮಸ್ಯೆ ನಿವಾರಣೆಗೆ ಟ್ರಾಫಿಕ್ ಪೊಲೀಸ್ ಸ್ಟೇಷನ್ ಮಂಜೂರು ಜೊತೆಗೆ ಹಳೇಬೀಡು ವೃತ್ತ ನಿರೀಕ್ಷಕರ ಸ್ವಂತ ಕಟ್ಟಡಕ್ಕೆ ಅನುದಾನ ಬಿಡುಗಡೆಗೆ ಗೃಹ ಸಚಿವ ಜಿ.ಪರಮೇಶ್ವರ್ ಒಪ್ಪಿಗೆ ಸೂಚಿಸಿದ್ದಾರೆ.

ಸಚಿವರಿಗೆ ಮನವಿ ಪತ್ರ ಸಲ್ಲಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ಹೆಚ್.ಕೆ.ಸುರೇಶ್, ಪಟ್ಟಣದಲ್ಲಿ ವಾಹನಗಳ ಸಂಖ್ಯೆ ಹೆಚ್ಚಾಗಿದ್ದು, ಇರುವ ಒಂದೇ ಮುಖ್ಯರಸ್ತೆಯಿಂದ ಸಂಚಾರಕ್ಕೆ ಅಡ್ಡಿಯಾಗಿದೆ. ವಾಹನ ಸವಾರರು ಪ್ರಯಾಸದಿಂದ ವಾಹನ ಚಾಲನೆ ಮಾಡಬೇಕಿದೆ. ಅದಕ್ಕಾಗಿ ಸಂಚಾರಿ ಠಾಣೆ ಅವಶ್ಯವಾಗಿದೆ. ಜೊತೆಗೆ ಬಸವೇಶ್ವರ ವೃತ್ತದ ಸಮೀಪ ಹಳೆ ತಹಸೀಲ್ದಾರ್ ಕಚೇರಿ ಕಟ್ಟಡದಲ್ಲಿರುವ ಹಳೇಬೀಡು ವ್ಯಾಪ್ತಿಯ ಆರಕ್ಷಕ ವೃತ್ತ ನಿರೀಕ್ಷಕರ ಕಚೇರಿಗೆ ಹೊಸ ಕಟ್ಟಡ ನಿರ್ಮಿಸುವ ಅಗತ್ಯವಿದೆ. ಅದಕ್ಕಾಗಿ 2 ಕೋಟಿ ರೂ. ಅನುದಾನ ನೀಡುವಂತೆ ಗೃಹ ಸಚಿವರಲ್ಲಿ ನಿವೇದಿಸಿಕೊಂಡರು. ಬೇಲೂರು ಯುನೆಸ್ಕೋ ಪಟ್ಟಿಗೆ ಸೇರಿದ್ದು ದೇಶ ವಿದೇಶದಿಂದ ಹೆಚ್ಚಿನ ಪ್ರವಾಸಿಗರು ಆಗಮಿಸುತ್ತಿದ್ದಾರೆ. ಬೇಲೂರು ಪೊಲೀಸ್ ಠಾಣೆ ಸೇರಿದಂತೆ ಅರೇಹಳ್ಳಿ, ಹಳೇಬೀಡು ಪೊಲೀಸ್ ಠಾಣೆಯಲ್ಲಿ ಸಿಬ್ಬಂದಿ ಕೊರತೆಯಿರುವುದರಿಂದ ಸಮರ್ಪಕ ಕಾರ್ಯ ನಿರ್ವಹಣೆಗೆ ತೊಂದರೆಯಾಗುತ್ತಿದೆ. ಇರುವ ಸಿಬ್ಬಂದಿ ಮೇಲೆ ಕಾರ್ಯಭಾರವೂ ಹೆಚ್ಚುತ್ತಿದೆ. ಒತ್ತಡದಲ್ಲಿ ಕೆಲಸ ಮಾಡಬೇಕಾದ ಅನಿವಾರ್ಯತೆ ಇದೆ. ಆ ಕಾರಣದಿಂದ ಕಾಲಿ ಇರುವ ಹುದ್ದೆಗಳನ್ನು ಪೂರ್ಣ ಪ್ರಮಾಣದಲ್ಲಿ ಸಿಬ್ಬಂದಿ ನಿಯೋಜನೆ ಮಾಡಬೇಕೆಂದು ನಿವೇದಿಸಿಕೊಂಡರು. ಸಕಾರಾತ್ಮಕವಾಗಿ ಸ್ಪಂಧಿಸಿದ ಗೃಹ ಸಚಿವರು, ತಕ್ಷಣಕ್ಕೆ ಸಂಚಾರಿ ಠಾಣೆ ಆರಂಭಕ್ಕೆ ಕ್ರಮ ಕೈಗೊಳ್ಳಲಾಗುವುದು. ನಂತರ ಸಿಪಿಐ ನೂತನ ಕಟ್ಟಡ, ಪೂರ್ಣ ಪ್ರಮಾಣದ ಸಿಬ್ಬಂದಿ ನಿಯೋಜನೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

# ಸಲಕರಣೆ ವಿತರಣೆಗೆ ಅರ್ಜಿ

**ಮಡಿಕೇರಿ:** ಕೇಂದ್ರ, ಸರ್ಕಾರದ ಆಲಿಮ್ಕೋ ಸಂಸ್ಥೆಯಿಂದ ಅಡಿಪ್ ಯೋಜನೆಯಡಿ ವಿಕಲಚೇತನರಿಗೆ ಹಾಗೂ ರಾಷ್ಟ್ರೀಯ ವಯೋಶ್ರೀ ಯೋಜನೆಯಡಿ ಹಿರಿಯ ನಾಗರಿಕರಿಗೆ ವಿವಿಧ ಸಾಧನ ಸಲಕರಣೆಗಳನ್ನು ವಿತರಿಸಲು ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲೆಯ ವಿಶೇಷಚೇತನರು ಹಾಗೂ ಹಿರಿಯ ನಾಗರಿಕರು ಮೌಲ್ಯಮಾಪನ ತಪಾಸಣಾ ಶಿಬಿರಕ್ಕೆ ಹಾಜರಾಗಲು ತಾಲ್ಲೂಕುವಾರು ದಿನಾಂಕಗಳನ್ನು ನಿಗದಿಪಡಿಸಲಾಗಿದೆ. ಜುಲೈ, 26 ರಂದು ಕುಶಾಲನಗರ ತಾಲ್ಲೂಕು ಕಲಾಮಂದಿರ ಅಥವಾ ಗಾಯತ್ರಿ ಕಲ್ಯಾಣ ಮಂಟಪ, ಜುಲೈ, 27 ರಂದು ಸೋಮವಾರಪೇಟೆ ಚನ್ನಬಸಪ್ಪ ಸಭಾಂಗಣ, ಜುಲೈ, 28 ರಂದು ವಿರಾಜಪೇಟೆ ಮತ್ತು ಪೊನ್ನಂಪೇಟೆ ತಾಲ್ಲೂಕಿಗೆ ಗೋಣಿಕೊಪ್ಪಲು ಕೃಷಿ ವಿಜ್ಞಾನ ಕೇಂದ್ರ, ಹಾಗೂ ಜುಲೈ, 29 ಮತ್ತು 30 ರಂದು ಮಡಿಕೇರಿ ತಾಲ್ಲೂಕಿನ ಇಂಡಿಯನ್ ರೆಡ್ ಕ್ರಾಸ್ ಸೊಸೈಟಿ ಸಭಾಂಗಣ. ಈ ದಿನಾಂಕಗಳಂದು ಶಿಬಿರಗಳಲ್ಲಿ ಭಾಗವಹಿಸುವ ವಿಶೇಷಚೇತನರು ಯುಡಿಐಡಿ ಕಾರ್ಡ್, ಆಧಾರ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣಪತ್ರ, ಅಥವಾ ಬಿಪಿಎಲ್ ಕಾರ್ಡ್, ಪಾಸ್ ಪೋರ್ಟ್ ಅಳತೆಯ ಭಾವಚಿತ್ರ ಹಾಗೂ ಹಿರಿಯ ನಾಗರಿಕರು ಆಧಾರ್ ಕಾರ್ಡ್, ಹಿರಿಯ ನಾಗರಿಕರ ಗುರುತಿನ ಚೀಟಿ, ಆದಾಯ ಪ್ರಮಾಣಪತ್ರ, ಅಥವಾ ಬಿಪಿಎಲ್ ಕಾರ್ಡ್, ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ತರಬೇಕು. ಹೆಸರು ನೋಂದಾಯಿಸಿಕೊಳ್ಳಲು ಎಂಆರ್ ಡಬ್ಲ್ಯುಗಳಾದ ಸೋಮವಾರಪೇಟೆ ಹಾಗೂ ಕುಶಾಲನಗರ ತಾಲ್ಲೂಕಿನ ಹರೀಶ್ ಟಿ.ಆರ್. ಮೊ.ಸಂ.8861428931, ವಿರಾಜಪೇಟೆ ತಾಲ್ಲೂಕಿನವರು ಪ್ರಥನ್‌ಕುಮಾರ್ ಸಿ.ಬಿ. ಮೊ.ಸಂ.9900883654 ಹಾಗೂ ಮಡಿಕೇರಿ ತಾಲ್ಲೂಕಿನವರು ರಾಜೇಶ್ ಮೊ.ಸಂ. 807392914 ಹಾಗೂ ಹೆಚ್ಚಿನ ಮಾಹಿತಿಗೆ ಕಚೇರಿ ದೂ.ಸಂ. 08272-295829 ನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ವಿಮಲಾ ಅವರು ತಿಳಿಸಿದ್ದಾರೆ.

# ಜೂ.27ಕ್ಕೆ ಉದ್ಯೋಗ ಮೇಳ

**ಮಡಿಕೇರಿ :** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಉದ್ಯೋಗಮೇಳವು ಜೂನ್, 27 ರಂದು ಬೆಳಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 3 ಗಂಟೆವರೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನಡೆಯಲಿದೆ. ಉದ್ಯೋಗ ಮೇಳದಲ್ಲಿ ಪ್ಯಾಲೇಸ್ ಟೊಯಾಟೋ, ಕುಶಾಲನಗರ, ಅಟೋಲೈವ್ ಮಲ್ಟಿನ್ಯಾಷನಲ್ ಕಂಪನಿ, ಮೈಸೂರು, ಕ್ಲಬ್ ಮಹೀಂದ್ರ, ಮಡಿಕೇರಿ, ಕಲ್ಯಾಣಿ ಮೋಟಾರ್ಸ್, ಮಡಿಕೇರಿ, ಪೆಂಟಟೆಕ್, ಮಡಿಕೇರಿ, ಕಾವೇರಿ ಹೋಂಡಾ, ಕುಶಾಲನಗರ ತಮ್ಮ ಸಂಸ್ಥೆಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಮೇಳದಲ್ಲಿ ಖಾಸಗಿ ಕಂಪೆನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿಯಿರುವ ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೋಮ, ಪದವಿ ಹಾಗೂ ಸ್ನಾತಕೋತ್ತರ ವಿದ್ಯಾರ್ಹತೆ ಹೊಂದಿರುವ ಉದ್ಯೋಗಾಕಾಂಕ್ಷಿಗಳು ಭಾಗವಹಿಸಿ ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ. ಅಭ್ಯರ್ಥಿಗಳು ಸ್ವಯಂ-ವಿವರ (ಬಯೋಡೇಟಾ)ಗಳ ಪ್ರತಿಗಳೊಂದಿಗೆ ಉದ್ಯೋಗಮೇಳಕ್ಕೆ ಹಾಜರಾಗುವಂತೆ ಜಿಲ್ಲಾ ಉದ್ಯೋಗಾಧಿಕಾರಿ ರೇಖಾ ಗಣಪತಿ ಅವರು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಮಡಿಕೇರಿ, ಈ ಕಚೇರಿಯನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 8296020826 /8123312319 ಮೂಲಕ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ರೇಖಾ ತಿಳಿಸಿದ್ದಾರೆ.

# ಲೇಖನಗಳ ಆಹ್ವಾನ

**ಮಡಿಕೇರಿ :** ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ವತಿಯಿಂದ ಪ್ರಕಟವಾಗುವ ತ್ರೈಮಾಸಿಕ ಹಿಂಗಾರ ಪುಸ್ತಕ 6 ಸಂಚಿಕೆಗಳ ಒಟ್ಟು ಸಂಯುಕ್ತ ಸಂಚಿಕೆಯನ್ನು ಹೊರತರಲು ಉದ್ದೇಶಿಸಲಾಗಿದೆ. ಈ ಸಂಬಂಧ ಅರೆಭಾಷೆಯಲ್ಲಿ ಕಥೆ, ಕವನ, ಲೇಖನ, ಹನಿಗವನ, ಜನಪದ, ಸಂಸ್ಕೃತಿ, ಕಲೆ, ಸಾಹಿತ್ಯ, ವ್ಯಕ್ತಿಚಿತ್ರ ಮತ್ತಿತರ ವಿಚಾರಗಳ ಕುರಿತು ಬರಹಗಳನ್ನು ಆಹ್ವಾನಿಸಲಾಗಿದೆ. ಆಸಕ್ತರು ಅರೆಭಾಷೆ ಬರಹ ಗಳನ್ನು ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಕಚೇರಿ, ಕಾಫಿ ಕೃಪಾ ಕಟ್ಟಡ, 1ನೇ ಮಹಡಿ, ರಾಜಾಸೀಟು ರಸ್ತೆ, ಮಡಿಕೇರಿ 571 201 ಇಲ್ಲಿಗೆ ಅಂಚೆ ತುರ್ತಾಗಿ ಕಳುಹಿಸಲು ಕೋರಿದೆ. ಹೆಚ್ಚಿನ ಮಾಹಿತಿಗೆ ರಿಜಿಸ್ಟ್ರಾರ್ ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ, ಕಾಫಿ ಕೃಪಾ ಕಟ್ಟಡ, ಮಡಿಕೇರಿ, ಕೊಡಗು ಜಿಲ್ಲೆ, ಮೊ ನಂ 6362588677 ಇಲ್ಲಿಂದ ಪಡೆಯಬಹುದಾಗಿದೆ.

# ಗುರುತಿನ ಚೀಟಿಗೆ ಕಲಾವಿದರಿಂದ ಅರ್ಜಿ

**ಮಡಿಕೇರಿ:** ಜಿಲ್ಲೆಯ ಕಲಾವಿದರು ಅಥವಾ ಕಲಾ ತಂಡಗಳಿಗೆ ಗುರುತಿನ ಚೀಟಿಯನ್ನು ನೀಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ವತಿಯಿಂದ ಅರ್ಜಿ ಆಹ್ವಾನಿಸಲಾಗಿದೆ. ಅದರಂತೆ, ಕೊಡಗು ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾವಾರು ಕಲಾವಿದರ ವಿವರಗಳನ್ನು ಕ್ರೋಢೀಕರಿಸುವ ದೃಷ್ಟಿಯಿಂದ ಕಲಾವಿದರು ಅಥವಾ ಕಲಾ ತಂಡಗಳ ಪಟ್ಟಿಯನ್ನು ತಯಾರಿಸಿ ಗುರುತಿನ ಚೀಟಿ ನೀಡಲು ಕೇಂದ್ರ ಕಚೇರಿಗೆ ಸಲ್ಲಿಸಲು ಕ್ರಮಕೈಗೊಳ್ಳಲಾಗುತ್ತಿದೆ. ಜಿಲ್ಲೆಯ ಆಸಕ್ತ ಕಲಾವಿದರು ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಡಿಕೇರಿ ಈ ಕಚೇರಿಯಿಂದ ನಿಗಧಿತ ನಮೂನೆ ಪಡೆದು ಭರ್ತಿ ಮಾಡಿ ಸೂಕ್ತ ದಾಖಲಾತಿಗಳೊಂದಿಗೆ ಜೂನ್, 30 ರೊಳಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಕಚೇರಿ ಸಂಪರ್ಕಿಸಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ಪಿಂಚಣಿ ದಿನ

**ಮಡಿಕೇರಿ:** ಮಡಿಕೇರಿ ಹೋಬಳಿಗೆ ಸಂಬಂಧಿಸಿದಂತೆ ಮಡಿಕೇರಿ ತಾಲ್ಲೂಕು ತಹಶೀಲ್ದಾರ್ ಅವರ ಕಚೇರಿ ಸಭಾಂಗಣದಲ್ಲಿ ಪಿಂಚಣಿ ದಿನವು ಜೂನ್, 26 ರಂದು ಬೆಳಗ್ಗೆ 11 ಗಂಟೆಗೆ ನಡೆಯಲಿದೆ. ಜೂನ್, 26 ರಂದು ಸಾಮಾಜಿಕ ಭದ್ರತಾ ಯೋಜನೆಯಡಿ ವಿವಿಧ ಮಾಸಾಶನಗಳ ಫಲಾನುಭವಿಗಳು ಕುಂದುಕೊರತೆಗಳನ್ನು ನೋಂದಾಯಿಸುವಂತೆ ಮಡಿಕೇರಿ ತಾಲ್ಲೂಕು ತಹಶೀಲ್ದಾರ್ ಪ್ರವೀಣ್ ಕುಮಾರ್ ಕೋರಿದ್ದಾರೆ.

### ನರಸೀಪುರ ಮೃತ ಮಕ್ಕಳ ಪೋಷಕರಿಗೆ ಗೃಹಸಚಿವರಿಂದ ಪರಿಹಾರ ವಿತರಣೆ

# ಪೋಷಕರಿಂದ ಕೊಲೆ ಶಂಕೆ: ತನಿಖೆಗೆ ಗೃಹ ಸಚಿವರ ಆದೇಶ

**ಬೇಲೂರು:** ಹಳೇಬೀಡು ಸಮೀಪದ ನರಸೀಪುರ ಗ್ರಾಮದಲ್ಲಿ ಕೆರೆಯಲ್ಲಿ ಮುಳುಗಿ ಸಾವನ್ನಪ್ಪಿದ ಮೂವರು ಮಕ್ಕಳ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಹೆಚ್ಚಿನ ತನಿಖೆಗೆ ಸೂಚಿಸಲಾಗುವುದು ಎಂದು ಗೃಹ ಸಚಿವ ಜಿ.ಪರಮೇಶ್ವರ್ ಹೇಳಿದರು.

ನರಸೀಪುರ ಗ್ರಾಮಕ್ಕೆ ಆಗಮಿಸಿದ್ದ ಸಚಿವರು ಮೃತ ಬಾಲಕರ ಪೋಷಕರಿಗೆ ತಲಾ 2 ಲಕ್ಷರೂ.ಗಳ ಚೆಕ್ ಅನ್ನು ವಿತರಿಸಿ ಮಾತನಾಡಿ, ಮೃತ ಬಾಲಕರ ಪೋಷಕರಿಗೆ ಪರಿಹಾರವಾಗಿ ತಲಾ 2 ಲಕ್ಷರೂ. ಚೆಕ್ ವಿತರಿಸಲಿಸಲಾಗಿದೆ. ಪೋಷಕರು ಮಕ್ಕಳ ಸಾವು ಸ್ವಾಭಾವಿಕವಲ್ಲ ಇದು ಕೊಲೆಯ ಅನುಮಾನವಿದ್ದು ತನಿಖೆ ನಡೆಸುವಂತೆ ಕೋರಿದ್ದಾರೆ ಹಾಗೂ ಜೀವ ಬೆದರಿಕೆ ಸಹ ಇದೆ ಎಂದು ತಿಳಿಸಿದ್ದಾರೆ. ಮಕ್ಕಳ ಸಾವಿನ ಬಗ್ಗೆ ವಿಧಿ ವಿಜ್ಞಾನ ಪ್ರಯೋಗಾಲಯದ ವರದಿ ಇನ್ನೂ ಬಂದಿಲ್ಲ, ಬಂದನಂತರ ವಾಸ್ತವಿಕತೆ ತಿಳಿಯಲಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮಕ್ಕಳ ಕುಟುಂಬಸ್ಥರಿಗೆ ಸೂಕ್ತ ರಕ್ಷಣೆ ನೀಡುವುದರ ಜೊತೆಗೆ ಸಾವು ಕುರಿತು ಹೆಚ್ಚಿನ ತನಿಖೆಗೆ ಆದೇಶಿಸಲಾಗುವುದು, ಮುಂದಿನ ಬೆಳವಣಿಗೆ ಏನೆ ಇದ್ದರೂ ಕಷ್ಟದ ಸಮಯದಲ್ಲಿ ನೆರವಾಗುವುದು ಸರಕಾರದ ಕರ್ತವ್ಯ ಆಗಿರುವುದರಿಂದ ನೆರವು ನೀಡಲಾಗಿದೆ ಎಂದು ಹೇಳಿದರು.

ಸಹಕಾರ ಸಚಿವ ಕೆ.ಎನ್.ರಾಜಣ್ಣ ಮಾತನಾಡಿ, ಹಾಸನ ಜಿಲ್ಲಾ ಉಸ್ತವಾರಿ ಸಚಿವನಾಗಿ ನರಸೀಪುರ ಘಟನೆಯನ್ನು ಗಂಭಿರವಾಗಿ ಪರಿಗಣಿಸಿದ್ದೇನೆ.



ಮಕ್ಕಳ ಸಾವಿನ ಅನುಮಾನದ ಜೊತೆಗೆ ಪೋಷಕರು ಜೀವ ಬೇದರಿಕೆ ಆತಂಕ ವ್ಯಕ್ತಪಡಿಸಿರುವುದರಿಂದ ತನಿಖೆ ಮಾಡಿಸಿ ನ್ಯಾಯ ದೊರಕಿಸುತ್ತೇವೆ. ಅಧಿಕಾರಿಗಳ ಸಭೆಯಲ್ಲಿಯೂ ವಿಚಾರ ಪ್ರಸ್ತಾಪಿಸುತ್ತೇವೆ, ಯಾರಿಗೂ ಅನುಮಾನ ಬೇಡ ಎಂದರು. ಶಾಸಕ ಎಚ್.ಕೆ.ಸುರೇಶ್ ಮಾತನಾಡಿ, ಘಟನೆ ನಡೆದ ಸಂದರ್ಭದಲ್ಲಿಯೇ ಕುಟುಂಬಕ್ಕೆ ಪರಿಹಾರ ಕೊಡಬೇಕು ಸೂಕ್ತ ತನಿಖೆ ನಡೆಸುವಂತೆ ಸರ್ಕಾರದ ಗಮನಕ್ಕೆ ತಂದಿದ್ದೇವೆ. ಗೃಹ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಸ್ಥಳಕ್ಕೆ ಬಂದು ಮೃತ ಮಕ್ಕಳ ಕುಟುಂಬದ ನೋವನ್ನು ಆಲಿಸಿದ್ದು ಸೂಕ್ತ ಕ್ರಮ ಕೈಗೊಳ್ಳಲಿದ್ದಾರೆಂದರು.

ಸಚಿವರುಗಳು ಆಗಮಿಸಿದ ಆರಂಭದಲ್ಲಿಯೇ ಮೃತ ಮಕ್ಕಳಾದ ನಿತ್ಯಾ, ದೀಕ್ಷಾ ಅವರ ತಂದೆ ಜಯಣ್ಣ ಅವರು, ಪುತ್ರಿ ನಿತ್ಯಾ ಅಂತ್ಯ ಸಂಸ್ಕಾರ ಮಾಡಿದ 3 ದಿನದ ನಂತರ ಸಮಾದಿಯನ್ನು ಅಗೆದು ಮಣ್ಣು ತೆಗೆಯಲಾಗಿತ್ತು. ಈ ಸಾವಿನ ಹಿಂದೆ ಏನೋ ಸಂಶಯವಿದೆ ತನಿಖೆಯಾಗಬೇಕು ಜೊತೆಗೆ ನಮಗೆ ಜೀವ ಬೆದರಿಕೆಯೂ ಇದೆ ಎಂದು ಆತಂಕ ವ್ಯಕ್ತಪಡಿಸಿದರು. ಅವರ ಗ್ರಾಮದ ಜಯಣ್ಣ ಅವರ ಮಕ್ಕಳಾದ ನಿತ್ಯಾ, ದಿಕ್ಷಾ, ಹಾಲಪ್ಪ ಸ್ವಾಮಿ ಪುತ್ರಿ ಕುಸುಮಾ ಅವರ ಅಂತ್ಯ ಸಂಸ್ಕಾರ ಮಾಡಿದ ಮೂರು ದಿನದಲ್ಲಿ ನಿತ್ಯಾಳ ಸಮಾದಿಯನ್ನು ಅಗೆದು ಮಣ್ಣು ತೆಗೆಯಲಾಗಿತ್ತು. ವಿಚಾರವನ್ನು ಪ್ರಸ್ತಾಪಿಸಿದ ನಿತ್ಯಾಳ ತಂದೆ ಜಯಣ್ಣ ಹಾಗೂ ತಾಯಿ ಲಕ್ಷ್ಮಿ ಸಾವಿನ ಬಗ್ಗೆ ಇರುವ ಅನುಮಾನವನ್ನು ವ್ಯಕ್ತಪಡಿಸಿದರು. ಗ್ರಾಮದ ಪ್ರಮುಖರು ಸೂಕ್ತ ತನಿಖೆಗೆ ಒತ್ತಾಯಿಸಿದರು.

ಶಾಸಕ ಹೆಚ್.ಕೆ.ಸುರೇಶ್, ಅರಸೀಕೆರೆ ಶಾಸಕ ಗೃಹ ಮಂಡಳಿ ಅಧ್ಯಕ್ಷ ಕೆ.ಎಂ. ಶಿವಲಿಂಗೇಗೌಡ, ಮಾಜಿ ಸಚಿವ ಬಿ.ಶಿವರಾಂ, ಜಿಲ್ಲಾಧಿಕಾರಿ ಸತ್ಯಭಾಮ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮಸುಜೀತಾ, ಎ.ಎಸ್ಪಿ ವೆಂಕಟೇಶ್ ನಾಯ್ಡು, ಎ.ಸಿ ಶ್ರುತಿ, ತಹಸೀಲ್ದಾರ್ ಎಂ.ಮಮತಾ, ಪ್ರಮುಖರಾದ ಜಿ.ಪಂ.ಮಾಜಿ ಸದಸ್ಯ ವೈ.ಎನ್.ಕೃಷ್ಣೇಗೌಡ, ಕಾಂಗ್ರೆಸ್ ಪ್ರಮುಖ ರಾಜಶೇಖರ್, ಸಿಪಿಐ ಜಯರಾಂ, ಪಿಎಸ್‌ಐ ಸಿದ್ದಲಿಂಗ ಬಾನ್ಸೆ ಇದ್ದರು ಇತರರು ಇದ್ದರು.

**ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ**
ರಾಮನಗರ ಜಿಲ್ಲಾ ಪಂಚಾಯತ್, ಕಾರ್ಯಪಾಲಕ ಅಭಿಯಂತರವರ ಕಛೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಮನಗರ.

ಇ-ಪ್ರೊಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ ಸಂಖ್ಯೆ : 04/ಕಾ.ಅ./ಪಂ.ರಾ.ಇಂ.ವಿ./ರಾ./ಟೆಂಡರ್/ಕಿ.ಇಂ.-1/208-212/2024-25 ದಿನಾಂಕ : 20-06-2024

**ಟೆಂಡರ್ ಪ್ರಕಟಣೆ**
(ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಮಾತ್ರ)

ಕರ್ನಾಟಕ ರಾಜ್ಯದ ರಾಜ್ಯಪಾಲರ ಪರವಾಗಿ, ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಾಮನಗರ ವಿಭಾಗ, ರಾಮನಗರ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ರಾಮನಗರ ಉಪ ವಿಭಾಗಕ್ಕೆ (ಹವಾ ನಿಯಂತ್ರಣ ರಹಿತ Non - AC) ಅಧಿಕೃತ ಸರ್ಕಾರಿ ಕೆಲಸಕ್ಕಾಗಿ ಒಂದು ವರ್ಷದ ಅವಧಿಗೆ ಹೊರಗುತ್ತಿಗೆ ಆಧಾರದ ಮೇಲೆ ಚಾಲಕ ಸಹಿತ ವಾಹನವನ್ನು ಒದಗಿಸಲು ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಏಕ ಲಕೋಟೆ ಪದ್ಧತಿಯಲ್ಲಿ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಸ್ವಂತ ವಾಹನವನ್ನು ಹೊಂದಿರುವ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ನೊಂದಾಯಿಸಲ್ಪಟ್ಟ ಸರಬರಾಜುದಾರರು / ಟ್ರಾವೆಲ್ಸ್ ಏಜೆನ್ಸಿಗಳು ಇಲಾಖಾ ವೆಬ್‌ಸೈಟ್ : https://kppp.karnataka.gov.in ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು.

1) ಗುತ್ತಿಗೆ ಅಂದಾಜು ಮೊತ್ತ ರೂ. 4.20 ಲಕ್ಷ ಆಗಿರುತ್ತದೆ, 2) ಟೆಂಡರ್ ಸಲ್ಲಿಸುವ ಕಡೆಯ ದಿನಾಂಕ : 28-06-2024 ರ ಸಂಜೆ 4.00 ಗಂಟೆಯವರೆಗೆ, 3) ಟೆಂಡರ್ ಬಿಡ್‌ನ್ನು ತೆರೆಯುವ ದಿನಾಂಕ : 29-06-2024 ರ ಸಂಜೆ 4.30 ಗಂಟೆ ನಂತರ. (ಸಾಧ್ಯವಾದಲ್ಲಿ).

ಹೆಚ್ಚಿನ ವಿವರಳನ್ನು ಕಛೇರಿ ವೇಳೆಯಲ್ಲಿ ಈ ಕಛೇರಿಯಿಂದ ಅಥವಾ ಮೇಲ್ಕಂಡ ವೆಬ್‌ಸೈಟ್ ಮೂಲಕ ಪಡೆಯಬಹುದು.

ಸಹಿ/- ಕಾರ್ಯಪಾಲಕ ಅಭಿಯಂತರರು,
ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ,
ರಾಮನಗರ.

ಡಿಐಪಿಆರ್/ರಾಮನಗರ/95/ಮಣಿಪಾಲ್/2024-25

## ಅಂತಾರಾಷ್ಟ್ರೀಯ ಯೋಗ ದಿನಾಚರಣೆ | ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅಭಿಪ್ರಾಯ

# ಯೋಗ ಧರ್ಮಾತೀತ: ದಿನೇಶ್ ಗುಂಡೂರಾವ್

**ಮೈಸೂರು:** ಯೋಗಕ್ಕೆ ಯಾವುದೇ ಧರ್ಮ ಇಲ್ಲ. ಅದು ಧರ್ಮವನ್ನು ಮೀರಿದ್ದಾಗಿದ್ದು, ಎಲ್ಲರೂ ಯೋಗವನ್ನು ಅಭ್ಯಾಸ ಮಾಡಬಹುದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅಭಿಪ್ರಾಯಪಟ್ಟರು.

ನಗರದ ಕಲಾಮಂದಿರದಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಕರ್ನಾಟಕ ಯೋಗ ಶಿಕ್ಷಕರ ಒಕ್ಕೂಟದಿಂದ ಆಯೋಜಿಸಿರುವ ರಾಜ್ಯಮಟ್ಟದ ಪ್ರಥಮ ಯೋಗ ಸಮ್ಮೇಳನ-2024 ಅನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಯೋಗವನ್ನು ಇಂತಿಷ್ಟೇ ವಯಸ್ಸಿನವರೇ ಮಾಡಬೇಕು ಎನ್ನುವ ನಿಯಮವೂ ಇಲ್ಲ. ಕಿರಿಯರಿಂದ ಹಿಡಿದು ವೃದ್ಧರ ತನಕವೂ ಅಭ್ಯಾಸ ಮಾಡಬಹುದು. ಆದರೆ ಆ ವಯೋಮಾನಕ್ಕೆ ತಕ್ಕಂತೆ ಇರುವ ಆಸನಗಳನ್ನು ಮಾಡಬೇಕು. ಇದರಿಂದ ಆರೋಗ್ಯವೂ ವೃದ್ಧಿಯಾಗುತ್ತದೆ ಹಾಗೂ ಮನಸ್ಸಿನ ಏಕಾಗ್ರತೆ ಶಕ್ತಿ ಹೆಚ್ಚುತ್ತದೆ ಎಂದರು.

ಭಾರತ ದೇಶದ ದೊಡ್ಡ ಆಸ್ತಿ ಎಂದರೆ ಜನಸಂಖ್ಯೆ ಇಲ್ಲಿರುವ ಎಲ್ಲರೂ ಆರೋಗ್ಯದಿಂದ ಇದ್ದರೆ ಅದೊಂದು ರೀತಿ ಸಂಪನ್ಮೂಲ. ದೇಶದ ಪ್ರತಿಯೊಬ್ಬರು ಸಶಕ್ತ ಆಸ್ತಿಯಾಗಬೇಕಾದರೇ ಯೋಗಾಭ್ಯಾಸವನ್ನು ರೂಢಿಸಿಕೊಂಡು ಆರೋಗ್ಯವಂತರಾಗಬೇಕು. ಆಗ ನಮ್ಮ ದೇಶವನ್ನು ಹಿಡಿಯಲು ವಿಶ್ವದ ಯಾವ ಪ್ರಭಾವಶಾಲಿಯಿಂದಲೂ ಸಾಧ್ಯವಾಗುವುದಿಲ್ಲ ಎಂದು ಅವರು ಹುರುಪಿನಿಂದ ಹೇಳಿದರು.

ಆಧ್ಯಾತ್ಮಿಕವಾದ ಅಭ್ಯಾಸಕ್ಕೆ ವೈಜ್ಞಾನಿಕ ಪದ್ಧತಿಯನ್ನು ಅಳವಡಿಸಿರುವುದೇ ಯೋಗ. ಆದ್ದರಿಂದ ನಿರಂತರವಾಗಿ ಯೋಗಾಭ್ಯಾಸದಲ್ಲಿ ತೊಡಗಿದರೇ ಮನುಷ್ಯನ ವ್ಯಕ್ತಿತ್ವ ಪರಿಪೂರ್ಣವಾಗಿ ಹೊರಹೊಮ್ಮುತ್ತದೆ. ಆತನಲ್ಲಿ ತೇಜಸ್ಸು ಹೆಚ್ಚಾಗಿ, ಶರೀರವನ್ನು ನಿಗ್ರಹಿಸುವ ದೃಢತೆ ಬೆಳೆಯುತ್ತದೆ. ಯೋಗ, ಧ್ಯಾನ, ಪ್ರಾಣಾಯಾಮದಿಂದ ಒಳ್ಳೆಯ ಪರಿಣಾಮಗಳು ತನ್ನಿಂದ ತಾನೇ ಉಂಟಾಗುತ್ತವೆ. ಆಧ್ಯಾತ್ಮಿಕ ಬೆಳವಣಿಗೆಯಾಗುತ್ತದೆ. ಆದ್ದರಿಂದ ಯೋಗಾಭ್ಯಾಸದ ಅನುಕೂಲವನ್ನು ಕೇವಲ ತಿಳಿದುಕೊಂಡರಷ್ಟೇ ಸಾಲದು. ಅದನ್ನು ರೂಢಿಸಿಕೊಳ್ಳುವ ತೀರ್ಮಾನ ಮಾಡಬೇಕು. ಇಚ್ಛಾಶಕ್ತಿಯನ್ನು ಬೆಳೆಸಿಕೊಂಡು ಶಿಸ್ತಿನಿಂದ ಯೋಗಾಭ್ಯಾಸ ಮಾಡಿದರೇ ಉತ್ತಮ ಆರೋಗ್ಯಕರ ಸಮಾಜವನ್ನು ನಿರ್ಮಾಣ ಮಾಡಬಹುದು ಎಂದರು.

ಯೋಗಕ್ಕೆ ಒಂದು ಪರಂಪರೆಯೇ ಇದೆ. ಸ್ವಾಮಿ ವಿವೇಕಾನಂದರು ಷಿಕಾಗೋ ನಗರದಲ್ಲಿ ನಡೆದ ವಿಶ್ವ ಧರ್ಮ ಸಮ್ಮೇಳನದಲ್ಲಿ ಭಾಗವಹಿಸಿ ಮಾತನಾಡುವ ಸಂದರ್ಭದಲ್ಲಿ ನಮ್ಮ ಯೋಗದ ಬಗ್ಗೆ ಪರಿಚಯ ಮಾಡಿಸಿದ್ದಾರೆ. ಯೋಗದ ಮುಖಾಂತರ ನಮ್ಮ ದೇಶದ ಭವ್ಯ ಪರಂಪರೆ, ಸಂಸ್ಕೃತಿ, ಜ್ಞಾನವನ್ನು ವಿಶ್ವಕ್ಕೆ ತೋರ್ಪಡಿಸಲು ಸಾಧ್ಯ ಎನ್ನುವುದನ್ನು ಆಗಲೇ ತಿಳಿಸಿಕೊಟ್ಟಿದ್ದಾರೆ ಎಂದು ದಿನೇಶ್ ಗುಂಡೂರಾವ್ ಇತಿಹಾಸವನ್ನು ಮೆಲುಕು ಹಾಕಿದರು.

ಪಂತಜಲಿ ಯೋಗಾಶ್ರಮ ಟ್ರಸ್ಟ್ ಸಂಸ್ಥಾಪಕ ಪ್ರಕಾಶ ಗುರೂಜಿ ಮಹರ್ಷಿ ಪತಂಜಲಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ಯೋಗ ಛಾಯಾಚಿತ್ರ ಪ್ರದರ್ಶನವನ್ನು ಹಿರಿಯ ಪತ್ರಕರ್ತ ಅಂಶಿ ಪ್ರಸನ್ನ ಕುಮಾರ್ ಉದ್ಘಾಟಿಸಿದರು.

ರಾಮಕೃಷ್ಣ ಆಶ್ರಮದ ಅಧ್ಯಕ್ಷ ಸ್ವಾಮಿ ಮುಕ್ತಿದಾನಂದಜಿ, ಬೇಬಿ ಮಠದ ಡಾ.ತ್ರಿನೇತ್ರ ಮಹಾಂತ ಸ್ವಾ?ಮೀಜಿ ಸಾನಿಧ್ಯ ವಹಿಸಿದ್ದರು. ಸಮ್ಮೇಳನದ ಸರ್ವಾಧ್ಯಕ್ಷ ಡಾ.ಕೆ.ಎಲ್. ಶಂಕರನಾರಾಯಣ ಜೋಯಿಷ್ ಅಧ್ಯಕ್ಷತೆ ವಹಿಸಿದ್ದರು. ಶಾಸಕ ಕೆ.ಹರೀಶ್ಗೌಡ, ವಿಧಾನ ಪರಿಷತ್ ಸದಸ್ಯರಾದ ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಡಾ.ಕೆ.ಎಚ್.ಪ್ರಸಾದ್, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಪಿ.ಸಿ.ಕುಮಾರಸ್ವಾಮಿ, ಡಾ.ಲಕ್ಷ್ಮೀ ನಾರಾಯಣ ಶೆಣೈ, ಮುಡಾ ಮಾಜಿ ಅಧ್ಯಕ್ಷ ಎಚ್.ವಿ.ರಾಜೀವ್, ಯೋಗ ಸಮ್ಮೇಳನ ಸಮಿತಿ ಅಧ್ಯಕ್ಷ ಡಾ.ಎಸ್.ಪಿ.ಯೋಗಣ್ಣ ಮತ್ತಿತರರು ಹಾಜರಿದ್ದರು.

### ಯೋಗ ಶಿಕ್ಷಕರ ನೇಮಕ

**ಶಾಲಾ ಮಟ್ಟದಲ್ಲೇ ಮಕ್ಕಳಿಗೆ ಯೋಗವನ್ನು ರೂಢಿಗೊಳಿಸಬೇಕು ಎನ್ನುವ ಉದ್ದೇಶದಿಂದ ನಮ್ಮ ಸರ್ಕಾರ ಮತ್ತೆ ಶಾಲೆಗಳಲ್ಲಿ ಯೋಗವನ್ನು ಕಡ್ಡಾಯ ಮಾಡಿದೆ. ಈ ಹಿನ್ನೆಲೆಯಲ್ಲಿ ಯೋಗ ಶಿಕ್ಷಕರನ್ನು ನೇಮಕ ಮಾಡಲಾಗುತ್ತದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು. ಬಹಳ ವರ್ಷಗಳಿಂದಲೂ ಶಾಲೆಗಳಲ್ಲಿ ಯೋಗ ಹಾಗೂ ದೈಹಿಕ ಶಿಕ್ಷಣವನ್ನು ಮಕ್ಕಳಿಗೆ ಹೇಳಿಕೊಡಲಾಗುತ್ತಿತ್ತು. ಆದರೆ ಹಿಂದಿನ ಸರ್ಕಾರ ಈ ಪದ್ಧತಿಯನ್ನು ನಿಲ್ಲಿಸಿಬಿಟ್ಟಿದ್ದರು. ಈಗ ನಮ್ಮ ಸರ್ಕಾರ ಅದನ್ನು ಮತ್ತೆ ಪ್ರಾರಂಭ ಮಾಡುತ್ತದೆ ಎಂದರು. ಸಮಾಜದಲ್ಲಿ ಜನರು ಆರೋಗ್ಯವಾಗಿರಬೇಕು ಎನ್ನುವ ದೃಷ್ಟಿಯಿಂದ ಆರೋಗ್ಯ ಇಲಾಖೆಯ ಕ್ಷೇಮ ಕೇಂದ್ರಗಳಲ್ಲಿ ಯೋಗಾಭ್ಯಾಸ ಮಾಡಲು ಪ್ರತ್ಯೇಕ ಸ್ಥಳವನ್ನು ನಿಗದಿಗೊಳಿಸಲಾಗಿದೆ. ಇಲ್ಲಿ ಯೋಗ ಶಿಕ್ಷಕರು ಬಂದು ಯೋಗವನ್ನು ಹೇಳಿಕೊಡುತ್ತಾರೆ. ಕ್ಷೇಮ ಕೇಂದ್ರದ ಸುತ್ತಮುತ್ತಲಿನ ಜನರು ಬಂದು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ಇದೇ ಸಂದರ್ಭದಲ್ಲಿ ಕರೆ ನೀಡಿದರು. ವಿಶ್ವ ಯೋಗ ದಿನದ ಅಂಗವಾಗಿ ರಾಜ್ಯದ ವಿವಿಧ ವಸತಿ ಶಾಲೆಗಳು, ಆಶ್ರಮ ಶಾಲೆಗಳು, ಸರ್ಕಾರಿ ಶಾಲೆ-ಕಾಲೇಜುಗಳಲ್ಲಿ ಒಂದು ವಾರಗಳ ಕಾಲ ಯೋಗೋತ್ಸವ ಆಚರಣೆ ಮಾಡಲಾಯಿತು. ಇದರಿಂದ ಸುಮಾರು 6 ಲಕ್ಷಕ್ಕೂ ಹೆಚ್ಚು ಮಂದಿ ಯೋಗವನ್ನು ಆಭ್ಯಾಸ ಮಾಡಿದ್ದಾರೆ ಎಂದು ತಿಳಿಸಿದರು.**

## ಕನಿಷ್ಠ ವೇತನ ನೀಡದೇ ವಂಚನೆ ಆರೋಪ

**ಮೈಸೂರು:** ನಗರದ ಕೆ.ಆರ್. ಆಸ್ಪತ್ರೆ, ಅದರ ವೈದ್ಯಕೀಯ ಕಾಲೇಜುಗಳಲ್ಲಿ 55 ಮಂದಿ ಹೌಸ್ ಕೀಪರ್ ಹಾಗೂ 38 ಮಂದಿ ಭದ್ರತಾ ಸಿಬ್ಬಂದಿಯಾಗಿ ಏಜೆನ್ಸಿಯೊಂದರ ಮೂಲಕ ನೇಮಕಗೊಂಡು ಹಲವಾರು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ. ಆದರೆ ಇವರಿಗೆ ಕನಿಷ್ಠ ವೇತನ ನೀಡದೇ ವಂಚಿಸಲಾಗುತ್ತಿದೆ. ಈ ಬಗ್ಗೆ ಕಾರ್ಮಿಕ ಇಲಾಖೆ ಕ್ರಮ ಕೈಗೊಳ್ಳುವ ವೇಳೆ ಸೂಕ್ತ ಪ್ರಮಾಣದಲ್ಲಿ ದಂಡ ವಿಧಿಸಿ, ಅದನ್ನು ಸಂತ್ರಸ್ತ ಕಾರ್ಮಿಕರಿಗೆ ನೀಡುವ ಕೆಲಸ ಮಾಡದೇ ಅಕ್ರಮ ಎಸಗಲಾಗಿದೆ ಎಂದು ದಸಂಸ (ಬಣರಹಿತ)ದ ಜಿಲ್ಲಾ ಸಂಚಾಲಕ ಉಮಾ ಮಹದೇವ್ ಆರೋಪಿಸಿದರು. ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಶ್ರೀರಾಮ ಎಂಟಪ್ರೈಸಸ್ ಹಾಗೂ ರಂಗನಾಥ ಏಜೆನ್ಸಿ ಮೂಲಕ ಇವರನ್ನು ನೇಮಕ ಮಾಡಿಕೊಂಡಿದ್ದು, ಇವರಿಗೆ ಕನಿಷ್ಠ ವೇತನ ನೀಡುತ್ತಿಲ್ಲದಿದ್ದುದನ್ನು ಕಾರ್ಮಿಕ ಇಲಾಖೆ ಅಧಿಕಾರಿಗಳೇ ಪತ್ತೆಹಚ್ಚಿ ಕ್ರಮ ಕೈಗೊಂಡರು. ಬಳಿಕ ಬಾಕಿ ಹಣ ಪಾವತಿಸಲು ಆದೇಶವೂ ಹೊರಬಿದ್ದಿತ್ತು. ಈ ವೇಳೆ ತಪ್ಪಿತಸ್ಥ ಏಜೆನ್ಸಿಗಳಿಗೆ ಹತ್ತು ಪಟ್ಟು ದಂಡ ವಿಧಿಸಿ ಅದನ್ನು ಸಂತ್ರಸ್ತ ಕಾರ್ಮಿಕರಿಗೆ ನೀಡುವ ಅವಕಾಶವಿದ್ದರೂ ಕೇವಲ ಒಂದು ಸಾವಿರ ದಂಡ ವಿಧಿಸಲಾಗಿದೆ. ಜೊತೆಗೆ ಕಾರ್ಮಿಕ ಆಯುಕ್ತರ ಹೆಸರಿಗೆ ಬಾಕಿ ಹಣದ ಚೆಕ್ ನೀಡುವಂತೆ ಏಜೆನ್ಸಿಗಳಿಗೆ ಆದೇಶಿಸಿದ್ದರೂ ಕೇವಲ ಐವರಿಗೆ ಮಾತ್ರ ನೀಡಲಾಗಿದೆ. ನಂತರ, ಆ ಚೆಕ್ ಸ್ವೀಕರಿಸಿದವರನ್ನು ಕೆಲಸದಿಂದ ತೆಗೆದುಹಾಕಲಾಗಿದೆ. ಹೀಗಾಗಿ ಕಾರ್ಮಿಕ ಆಯುಕ್ತರು, ಏಜೆನ್ಸಿ ಮೊದಲಾದವುಗಳ ಬಗ್ಗೆ ತಮಗೆ ಶಂಕೆಯಿದ್ದು, ಈ ಬಗ್ಗೆ ತನಿಖೆ ನಡೆಸಿ, ಸೂಕ್ತ ಕ್ರಮ ಕೈಗೊಂಡು ಸಂತ್ರಸ್ತರಿಗೆ ನ್ಯಾಯ ಒದಗಿಸಬೇಕು. ಇಲ್ಲದಿದ್ದರೆ ಹೋರಾಟ ನಡೆಸಲಾಗುವುದೆಂದು ಎಚ್ಚರಿಸಿದರು. ಮೂಡಳ್ಳಿ ಮಹದೇವ್, ಸಿದ್ದರಾಮಯ ಯಡತೊರೆ, ಜಯಪ್ರಕಾಶ್, ಇನ್ನಿತರರು ಇದ್ದರು.

## ರೈತರಿಗೆ ಭೂಹಕ್ಕು ನೀಡಲು ಆಗ್ರಹ

**ಮೈಸೂರು:** ಸರ್ಕಾರ ಸಮಿತಿ ರಚನೆ ಮಾಡುವ ಮೂಲಕ ಈಗಾಗಲೇ ಜೀವನೋಪಾಯಕ್ಕಾಗಿ ಬೇಸಾಯ ಮಾಡುತ್ತಿರುವ ಅರ್ಹ ರೈತರಿಗೆ ಭೂಹಕ್ಕು ನೀಡುವ ನಿಟ್ಟಿನಲ್ಲಿ ವಿಲೇವಾರಿಗೆ ಕ್ರಮ ಕೈಗೊಳ್ಳಬೇಕೆಂದು ದೊಡ್ಡಬಳ್ಳಾಪುರ ಮೂಲದ ಕರ್ನಾಟಕ ಭೂ ಹಕ್ಕುದಾರರ ವೇದಿಕೆ ರಾಜ್ಯ ಸಂಚಾಲಕರಾದ ಕೆ. ಚಿತ್ರಾವತಿ ಆಗ್ರಹಿಸಿದರು. ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ತಮ್ಮ ವೇದಿಕೆ ಕಳೆದ 15 ವರ್ಷಗಳಿಂದ ರಾಜ್ಯಾದ್ಯಂತ ಬಗರ್ಹುಕುಂ ಸಾಗುವಳಿದಾರರ ಜೀವನಮಟ್ಟ ಸುಧಾರಣೆಯಲ್ಲಿ ತೊಡಗಿಸಿಕೊಂಡಿದೆ. ಇದೇ ರೀತಿ ಹಲವರಿಗೆ ದೊರಕಿಸಿಕೊಟ್ಟಿದೆ. ಇನ್ನೂ ಲಕ್ಷಾಂತರ ಅರ್ಜಿ ವಿಲೇವಾರಿ ಬಾಕಿ ಇದ್ದು, ಈಗಾಗಲೇ 54 ಸಾವಿರ ಹೆಕ್ಟೇರ್ ಭೂಮಿ ಲಭ್ಯವಿರುವ ಮಾಹಿತಿಯೂ ಇದೆ. ಆದರೂ ಸಕ್ರಮೀಕರಣಕ್ಕೆ ಕ್ರಮ ಕೈಗೊಂಡಿಲ್ಲ. ಆದ್ದರಿಂದ ಕೂಡಲೇ ಸಿಎಂ ಸಿದ್ದರಾಮಯ್ಯ ಹಾಗೂ ಸಂಬಂಧಿತ ಸಚಿವರು ಗಮನ ಹರಿಸಬೇಕು. ಕಂದಾಯ ಮತ್ತು ಅರಣ್ಯ ಇಲಾಖೆಗಳ ನಡುವಿನ ಗಡಿ ಗೊಂದಲ ಹೋಗಲಾಡಿಸಿ, ತ್ವರಿತವಾಗಿ ಹಕ್ಕು ಪತ್ರ ನೀಡಲು ಕ್ರಮ ಕೈಗೊಳ್ಳಬೇಕೆಂದು ಕೋರಿದರು. ವೇದಿಕೆಯ ಮಹೇಶ್ಚಂದ್ರಗುರು, ಪ್ರಸನ್ನಮೂರ್ತಿ, ಬಾಲಗಂಗಾಧರ್ ಮೊದಲಾದವರು ಹಾಜರಿದ್ದರು.

## ಕಾವೇರಿ ಶಾಶ್ವತ ಪರಿಹಾರಕ್ಕೆ

# ಸಹಿ ಸಂಗ್ರಹ ಚಳವಳಿ



**ಮೈಸೂರು:** ಕಾವೇರಿ ಸಮಸ್ಯೆ ಇತ್ಯರ್ಥಕ್ಕೆ ಒತ್ತಾಯಿಸಿ ಕೇಂದ್ರ ಸಚಿವರನ್ನು ಭೇಟಿ ಮಾಡಿ ಮನವರಿಕೆ ಮಾಡುವ ಪ್ರಯತ್ನ ಕಾವೇರಿ ಕ್ರಿಯಾ ಸಮಿತಿ ಮಾಡಲಿದೆ ಎಂದು ಕಾವೇರಿ ಕ್ರಿಯಾಸಮಿತಿ ಅಧ್ಯಕ್ಷ ಎಸ್.ಜಯಪ್ರಕಾಶ್ ವಿಶ್ವಾಸ ವ್ಯಕ್ತಪಡಿಸಿದರು.

ಕಾವೇರಿ ಕ್ರಿಯಾ ಸಮಿತಿಯಿಂದ ಕಾವೇರಿ ಶಾಶ್ವತ ಪರಿಹರ ಹಾಗೂ ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಆಗ್ರಹಿಸಿ ಸಹಿ ಸಂಗ್ರಹ ಚಳವಳಿ ನೇತೃತ್ವವಹಿಸಿ ಅವರು ಮಾತನಾಡಿದರು. ನೂತನ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹಾಗೂ ವಿ.ಸೋಮಣ್ಣ ಅವರನ್ನು ಭೇಟಿ ಮಾಡಿ ಕಾವೇರಿ ಸಮಸ್ಯೆ ಇತ್ಯರ್ಥ ಪಡಿಸುವಂತೆ ಮನವರಿಕೆ ಮಾಡಿಕೊಡುವ ಪ್ರಯತ್ನ ಮಾಡಲಾಗುವುದು ಎಂದು ಹೇಳಿದರು.

ಇನ್ನೂ ಮೇಕೆದಾಟು ಯೋಜನೆ ಜಾರಿಯ ಬಗ್ಗೆ ಡಿ.ಕೆ.ಶಿವಕುಮಾರ್ ಅವರಿಗೆ ಚುನಾವಣಾ ಮುನ್ನ ಇದ್ದ ಕಾಳಜಿ ಉಪಮುಖ್ಯಮಂತ್ರಿ ಆದ ಬಳಿಕ ಇಲ್ಲವಾಗಿದೆ. ಅವರು ಮೇಕೆದಾಟು ವಿಚಾರವಾಗಿ ಜನತೆಗೆ ಸ್ಪಷ್ಟ ಪಡಿಸಬೇಕು. ಕೇಂದ್ರಕ್ಕೆ ಯೋಜನಾ ವರದಿ ನೀಡಿರುವ ಕುರಿತು ತಿಳಿಸಿಕೊಡಬೇಕು. ಕೇಂದ್ರದ ಮೇಲೆ ಸುಮ್ಮನೆ ಆರೋಪ ಹೊರಿಸುವುದು ನಿಲ್ಲಿಸಿ ವಾಸ್ತವ ಮಾತನಾಡಬೇಕೆಂದು ಒತ್ತಾಯಿಸಿದರು.

ಕಾವೇರಿ ಕ್ರಿಯಾ ಸಮಿತಿಯ ಮೂಗೂರು ನಂಜುಂಡಸ್ವಾಮಿ, ತೇಜಸ್ ಲೋಕೇಶ್ ಗೌಡ, ಅಶೋಕ್ (ಸುಬ್ಬಣ್ಣ) ಸಿಂದೂವಳ್ಳಿ ಶಿವಕುಮಾರ್, ರವೀಶ್, ರಾಜಶೇಖರ್, ಬಿ.ಬಿ.ಹನುಮಂತಪ್ಪ, ಪ್ರಭಾಕರ್, ಪದ್ದಿನಿ, ವಾಣಿ, ಬಾಲಕೃಷ್ಣ, ಡಾ.ರಾಜ್ ಸಂಘದ ಅಧ್ಯಕ್ಷ ಮಹದೇವಸ್ವಾಮಿ, ಪುರುಷೋತ್ತಮ, ಆಟೋ ಮಹದೇವ್, ಕೃಷ್ಣಯ್ಯ, ಚಂದ್ರಶೇಖರ್, ಪ್ರಭುಬಸಪ್ಪ, ರಾಜಣ್ಣ, ಲಕ್ಷ್ಮೀ, ರಾಮಚಂದ್ರ, ಭಾಗ್ಯಮ್ಮ, ಮಂಜುಳ, ಹನುಮಂತೇಗೌಡ, ನಾಗರಾಜೇಗೌಡ, ಮಹೇಶ್ ಗೌಡ, ನೇಹಾ, ಆಶೋಕ್, ಮಂಜುಳ ವಿಷ್ಣು ಕುಮಾರಸ್ವಾಮಿ ಸಂಜಯ್, ವರಕೂಡು ಕೃಷ್ಣಗೌಡರು ಸೇರಿ ಅನೇಕರು ಭಾಗವಹಿಸಿದ್ದರು.

## ತೈಲ ದರ ಏರಿಕೆ ವಾಪಸ್ ಪಡೆಯಲು ಮನವಿ

**ಮೈಸೂರು:** ರಾಜ್ಯ ಸರ್ಕಾರ ಇದೇ ತಿಂಗಳ 15 ರಿಂದ ಜಾರಿಗೆ ಬರುವಂತೆ ಪೆಟ್ರೋಲ್, ಡೀಸೆಲ್ ದರ ಏರಿಸಿರುವುದರಿಂದಾಗಿ ಟ್ರಕ್ ನಿರ್ವಹಣೆ ಮಾಡುವವರಿಗೆ ಭಾರೀ ಹೊಡೆತ ಬಿದ್ದಿದೆ. ಇದೇ ವೇಳೆ ಟೋಲ್ ದರ, ಟೈರ್, ವಿಮೆ, ಬಿಡಿಭಾಗಗಳ ದರ ಏರಿಕೆಯಾಗಿದ್ದು, ಸರ್ಕಾರ ಕೂಡಲೇ ತೈಲ ದರ ಏರಿಕೆ ವಾಪಸು ಪಡೆಯಬೇಕೆಂದು ಮೈಸೂರು ಜಿಲ್ಲಾ ಟ್ರಕ್ಸ್ ಅಸೋಸಿಯೇಷನ್ ಮನವಿ ಮಾಡಿದೆ.

ಈ ಕುರಿತು ನಗರದಲ್ಲಿ ಅಧ್ಯಕ್ಷ ಶ್ರೀನಿವಾಸರಾವ್ ಸುದ್ದಿಗಾರರೊಡನೆ ಮಾತನಾಡಿ, ಕಳೆದ ವರ್ಷದ ಬರಗಾಲದಿಂದಲೇ ಲಾರಿ ಉದ್ಯಮ ತತ್ತರಿಸಿದೆ. ಈಗ ತೈಲ ದರ ಏರಿಕೆ ಮಾಡಿರುವುದರಿಂದಾಗಿ ಸಾಗಾಣಿಕೆ ವೆಚ್ಚ ಹೆಚ್ಚಲಿದೆ. ಇದರ ಹೊರೆ ಸಾಮಗ್ರಿ ಸಾಗಣೆಗೆ ನೀಡುವವರಿಂದ ಪಡೆಯಲು ಈಗ ಸಾಧ್ಯವಾಗುತ್ತಿಲ್ಲ. ಜೊತೆಗೆ ಸಾಗಾಣಿಕೆ ದರ ಏರಿಸಿದಲ್ಲಿ ಪೈಪೋಟಿ ಮೇಲೆ ಕಡಿಮೆ ದರಕ್ಕೆ ಸಾಗಣೆ ಮಾಡಲು ಮುಂದೆ ಬರುವವರೂ ಇರುವುದರಿಂದಾಗಿ ಸ್ಪರ್ಧೆ ಹೆಚ್ಚಿ ಅನೇಕರಿಗೆ ಹೊಡೆತ ಬೀಳಲಿದೆ. ಅಂತಿಮವಾಗಿ ಇದರ ಹೊರೆ ಸಾರ್ವಜನಿಕರ ಮೇಲೆಯೇ ಬೀಳಲಿದ್ದು, ಹಣದುಬ್ಬರವೂ ಏರಲಿದೆ. ಆದ್ದರಿಂದಾಗಿ ಸರ್ಕಾರ ಕೂಡಲೇ ದರ ಏರಿಕೆ ವಾಪಸು ಪಡೆಯಬೇಕು. ಇಲ್ಲದಿದ್ದಲ್ಲಿ ರಾಜ್ಯ ಸಂಘದ ನಿರ್ಧಾರದಂತೆ ಹೋರಾಟ ನಡೆಸಲಾಗುವುದೆಂದರು. ಎಂ.ಪಿ. ನಾಗರಾಜ್, ಅಸ್ಗರ್ ಅಲಿಖಾನ್, ಲಿಂಗರಾಜು, ಪ್ರಕಾಶ್ ಇದ್ದರು.

## ತಳ ಸಮುದಾಯದ ತಲ್ಲಣಗಳ ಅನಾವರಣ ಜಲದ ಮಂಟಪ

# ಉಳ್ಳವರ ದರ್ಪಕ್ಕೆ ಧಿಕ್ಕಾರ

**ಹಾಸನ :** ತಳ ಸಮುದಾಯದ ತಲ್ಲಣಗಳ ಅನಾವರಣವೇ ಜಲದ ಮಂಟಪ. ಇದರಲ್ಲಿ ಸಾಮಾಜಿಕ ಮೌಢ್ಯಗಳ ಖಂಡನೆಯಿದೆ, ಸ್ವಾಸ್ಥ್ಯ ಸಮ ಸಮಾಜದ ಕನಸಿದೆ ಎಂದು ಹಿರಿಯ ಸಾಹಿತಿ ಎನ್. ಶೈಲಜಾ ಹಾಸನ ಅಭಿಪ್ರಾಯಪಟ್ಟರು.



ಅವರು ಹಾಸನ ತಾಲ್ಲೂಕು ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಯು ನಗರದ ಗೌರಿಕೊಪ್ಪಲಿನ ಮುಖ್ಯ ರಸ್ತೆಯಲ್ಲಿರುವ ವಿಸ್ತಾರ ಅಕಾಡೆಮಿಯಲ್ಲಿ ಸಾಹಿತ್ಯಾಸಕ್ತರಾದ ಬಿ.ವಿ.ವೇದಶ್ರೀ ನಿಶಿತ್ರವರ ಪ್ರಾಯೋಜಕತ್ವದಲ್ಲಿ ಹಮ್ಮಿಕೊಂಡಿದ್ದ 35ನೇ ಸಾಹಿತ್ಯ ಪಯಣ ಹೆಜ್ಜೆ ಕಾರ್ಯಕ್ರಮದಲ್ಲಿ ಮಾಣಿಕ್ಯ ಪ್ರಕಾಶನ ಹೊರತಂದಿರುವ ಕವಿ ಹಾಗೂ ಪತ್ರಕರ್ತ ನಾಗರಾಜ್ ಹೆತ್ತೂರವರ ಜಲದ ಮಂಟಪ ಕೃತಿ ಕುರಿತು ಮಾತನಾಡಿ ನಾಗರಾಜ್ ಹೆತ್ತೂರವರ ಕವಿತೆಗಳಲ್ಲಿ ಬಾಹ್ಯ ಬಣ್ಣಕ್ಕಿಂತಲೂ ಆಂತರಿಕ ವರ್ಣಕ್ಕೆ, ಮಾನವೀಯ ಮೌಲ್ಯಗಳಿಗೆ ಜೀವ ತುಂಬಿರುವುದನ್ನು ಕಾಣುತ್ತೇವೆ. ವಿಜ್ಞಾನ ಎಷ್ಟೇ ಮುಂದುವರಿದಿದ್ದರೂ, ವೈಚಾರಿಕತೆ ಎಷ್ಟೇ ಬೆಳೆದಿದ್ದರೂ ಜಾತಿ ವ್ಯವಸ್ಥೆ ಮಾತ್ರ ದಿನದಿಂದ ದಿನಕ್ಕೆ ವಿವಿಧ ರೂಪಾಂತರಗಳನ್ನು ಕಾಣುತ್ತಿರುವುದು ದುರಂತ. ಇಲ್ಲಿನ ಎಲ್ಲಾ ಕವಿತೆಗಳಲ್ಲಿ ಬಂಡಾಯದ ಧ್ವನಿ ಮೊಳೆದಿರುವುದನ್ನು ಕಾಣುತ್ತೇವೆ. ನಾಗರಾಜ್ರವರು ಸಾಮಾಜಿಕ ತಲ್ಲಣಗಳನ್ನು, ಶೋಷಣೆಗಳನ್ನು ನೇರ ಮಾತುಗಳಲ್ಲಿ ಒಡಮೂಡಿಸಿದ್ದಾರೆ. ಇವರ ಕವಿತೆಗಳಲ್ಲಿ ಮಾನವೀಯ ಮೌಲ್ಯಗಳ ಝೇಂಕಾರವಿದೆ. ಉಳ್ಳವರ ದರ್ಪಕ್ಕೆ ಧಿಕ್ಕಾರವಿದೆ. ಶೋಷಿತರಿಗೆ ಸಾಂತ್ವನವಿದೆ ಎಂದರು. ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಯ ತಾಲ್ಲೂಕು ಅಧ್ಯಕ್ಷೆ ಕೆ.ಸಿ.ಗೀತಾ ಮಾತನಾಡಿ ನಮ್ಮ ವೇದಿಕೆಯಿಂದ ಕೃತಿ ವಿಮರ್ಶೆಗಳು, ಕವಿಗೋಷ್ಠಿಗಳು, ಸಂವಾದಗಳು, ಕಮ್ಮಟಗಳು ಹೀಗೇ ವೈವಿಧ್ಯಮಯವಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬಂದಿದೆ. ಈ ನಿಟ್ಟಿನಲ್ಲಿ ಇಂದು ಹೆತ್ತೂರು ನಾಗರಾಜ್ ರವರ ಬಂಡಾಯ ಕೃತಿ ಜಲದ ಮಂಟಪ ಕೃತಿಯ ವಿಮರ್ಶೆಯನ್ನು ಹಮ್ಮಿಕೊಂಡಿದ್ದೇವೆ. ಈ ಮುಖೇನ ನಮ್ಮ ವೇದಿಕೆ ಕೃತಿಗೂ ಹಾಗೂ ಕೃತಿಕರ್ತರಿಗೂ ನ್ಯಾಯ ಒದಗಿಸುವ ಹಾಗೂ ಅದರಲ್ಲಿನ ಮೌಲ್ಯಗಳನ್ನು ಅನಾವರಣಗೊಳಿಸುವ ಕೈಂಕರ್ಯವನ್ನು ಮಾಡುತ್ತಿದ್ದೇವೆ ಎಂದರು.

ಉಪನ್ಯಾಸದ ಮೇಲೆ ನಡೆದ ಸಂವಾದದಲ್ಲಿ ಹಿರಿಯ ಸಾಹಿತ್ಯಾಸಕ್ತರಾದ ಜಯದೇವಪ್ಪ, ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ಕೊಟ್ರೇಶ್ ಎಸ್. ಉಪ್ಪಾರ್, ಸಂಸ್ಥಾಪಕ ಟ್ರಸ್ಟಿ ನಾಗರಾಜ್ ದೊಡ್ಡಮನಿ, ಬಿ.ವಿ.ವೇದಶ್ರೀ ನಿಶಿತ್ ಸೇರಿದಂತೆ ಹಲವರು ಭಾಗವಹಿಸಿದರು.

ಕೃತಿಕರ್ತ ನಾಗರಾಜ್ ಹೆತ್ತೂರ್ ಇದ್ದರು. ನಂತರ ನಡೆದ ಕವಿಗೋಷ್ಠಿಯಲ್ಲಿ ಎಚ್.ಬಿ.ಚೂಡಾಮಣಿ, ಗಿರಿಜಾ ನಿರ್ವಾಣಿ, ಹೇಮಾರಾಗ, ಸಿ.ಎನ್.ನೀಲಾವತಿ, ಎಚ್.ಕೆ.ಯಮುನಾ ಮುಂತಾದವರು ಕವಿತೆ ವಾಚಿಸಿದರು. ವಿಧುಷಿ ಶಶಿಚಂದ್ರಿಕಾ, ಸುನಂದಾ ಕೃಷ್ಣ ಗೀತಾ ಗಾಯನ ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ಎಚ್.ಎಸ್.ಭಾನುಮತಿ, ರಾಜೇಶ್ವರಿ ಹುಲ್ಲೇನಹಳ್ಳಿ, ಜಯದೇವಪ್ಪ, ಸುರೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಹುಳಿಯಾರಿನಲ್ಲಿ ಡಿಜಿಟಲ್ ಗ್ರಂಥಾಲಯ ಆರಂಭಿಸಿ

**ಹುಳಿಯಾರು:** ಹುಳಿಯಾರಿನಲ್ಲಿ ಡಿಜಿಟಲ್ ಗ್ರಂಥಾಲಯ ಆರಂಭಿಸಿ ವಿದ್ಯಾರ್ಥಿಗಳ ಜ್ಞಾನ ವಿಕಾಸಕ್ಕೆ ನೆರವಾಗುವಂತೆ ಹುಳಿಯಾರು ಪಟ್ಟಣ ಪಂಚಾಯ್ತಿ ಮುಖ್ಯಾಧಿಕಾರಿ ನಾಗಭೂಷಣ್ ಅವರಿಗೆ ಎಬಿವಿಪಿ ಕಾರ್ಯಕರ್ತರು ಸೋಮವಾರ ಮನವಿ ಸಲ್ಲಿಸಿದರು. ಹುಳಿಯಾರಿನಲ್ಲಿ ಸುಮಾರು 5000 ಕ್ಕೂ ಹೆಚ್ಚಿನ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು, ಹುಳಿಯಾರು ತಾಲ್ಲೂಕು ಆಗುವ ನಿರೀಕ್ಷೆಯಿದ್ದರೂ ಸಹ ಹುಳಿಯಾರು ಪಟ್ಟಣದಲ್ಲಿ ಒಂದು ಡಿಜಿಟಲ್ ಲೈಬ್ರರಿ ಇಲ್ಲದಿರುವುದು ಬೇಸರದ ಸಂಗತಿಯಾಗಿದೆ. ಕೆಲವು ಗ್ರಾಮಗಳಲ್ಲಿ ಡಿಜಿಟಲ್ ಗ್ರಂಥಾಲಯಗಳಿದ್ದು ಹುಳಿಯಾರು ಪಟ್ಟಣದಲ್ಲಿ ಒಂದು ಸುವ್ಯವಸ್ಥಿತ ಗ್ರಂಥಾಲಯ ಇಲ್ಲದಿರುವುದು ವಿದ್ಯಾರ್ಥಿಗಳ ಕಲಿಕೆ ಸಾಮರ್ಥ್ಯವನ್ನು ಕುಸಿಯುವಂತೆ ಮಾಡಿದೆ. ಶೀಘ್ರವೇ ಹುಳಿಯಾರು ನಗರದಲ್ಲಿ ಒಂದು ಡಿಜಿಟಲ್ ಲೈಬ್ರರಿಯನ್ನು ತೆರೆದು ಬಡ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಅನುಕೂಲ ಮಾಡಿಕೊಡಬೇಕೆಂದು ಅಖಿಲ ಭಾರತ ವಿದ್ಯಾರ್ಥಿ ಪರಿಷತ್ ಆಗ್ರಹಿಸಿದೆ. ಮನವಿ ಕೊಡುವ ಸಂದರ್ಭದಲ್ಲಿ ಜಿಲ್ಲಾ ಸಂಚಾಲಕರಾದ ಎಚ್.ಆರ್.ಗುರುಪ್ರಸಾದ್, ಎಬಿವಿಪಿ ರಾಜ್ಯ ಸಾಮಾಜಿಕ ಜಾಲತಾಣ ಪ್ರಮುಖರಾದ ದೀಪಕ್ ಕೆಂಕೆರೆ, ಕಾರ್ಯಕರ್ತರಾದ ಶಾಂತ್ಕುಮಾರ್, ಸಿದ್ದೇಶ್, ಕಿರಣ್ ಎಂ ಆರ್, ಸಂಜಯ್, ಮೋಹನ್ ಕುಮಾರ್ ಉಪಸ್ಥಿತರಿದ್ದರು.



## ಬಸವರಾಜು ಎರಡನೇ ಬಾರಿಗೆ ಆಯ್ಕೆ

**ಮಂಡ್ಯ :** ರಾಜ್ಯ ಬೀದಿನಾಟಕ ಕಲಾತಂಡಗಳ ಒಕ್ಕೂಟದ ಜಿಲ್ಲಾ ಅಧ್ಯಕ್ಷರಾಗಿ ಸಂತೆಕಸಲಗೆರೆ ಬಸವರಾಜು ಎರಡನೇ ಬಾರಿಗೆ ಆಯ್ಕೆಯಾಗಿದ್ದಾರೆ. ಸಂಘದ ಕಛೇರಿಯಲ್ಲಿ ನಡೆದ ರಾಜ್ಯ ಬೀದಿನಾಟಕ ಕಲಾತಂಡಗಳ ಒಕ್ಕೂಟದ ಮಾಜಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹೆಚ್ ಪಿ ವೈರಮುಡಿ ರವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಒಕ್ಕೂಟದ ಮಹಾಸಭೆಯಲ್ಲಿ ಎರಡನೇ ಬಾರಿ ಜಿಲ್ಲಾ ಘಟಕದ ಅಧ್ಯಕ್ಷರಾಗಿ ಸಂತೆಕಸಲಗೆರೆ ಬಸವರಾಜು ರವರನ್ನು ಅವಿರೋಧವಾಗಿ ಅಯ್ಕೆ ಮಾಡಲಾಯಿತು. ಪದಾಧಿಕಾರಿಗಳು : ಪ್ರಧಾನ ಕಾರ್ಯದರ್ಶಿ ತಡಗವಾಡಿ ನಾಗರಾಜು, ಖಜಾಂಚಿಯಾಗಿ ಹನಿಯಂಬಾಡಿ ಎನ್ ಶೇಖರ್, ಸಹಕಾರ್ಯದರ್ಶಿಯಾಗಿ ಮಂಗಲ ಡಿ ಉಮಾಪತಿ, ನಿರ್ದೇಶಕರಾಗಿ ಹನಿಯಂಬಾಡಿ ಹೆಚ್ ಬಿ ರಾಮಕೃಷ್ಣ, ದೀಪಾ ವೈರಮುಡಿ ಆಯ್ಕೆ ಮಾಡಲಾಯಿತು.

# ತ್ಯಜಿಸಿ ಕೊಳ್ಳುಬಾಕ ಸಂಸ್ಕೃತಿ

**ಹುಳಿಯಾರು:** ಅನಾವಶ್ಯಕವಾಗಿ ಬೇಕಿಲ್ಲದ ವಸ್ತುಗಳನ್ನು ಕೊಳ್ಳುವ ಪ್ರವೃತ್ತಿಯನ್ನು ತ್ಯಜಿಸಿ. ಪರಿಸರ ಉಳಿಸಿ ಎಂದು ತಾಲ್ಲೂಕು ವಿಜ್ಞಾನ ಕೇಂದ್ರದ ಅಧ್ಯಕ್ಷರಾದ ಎನ್. ಇಂದಿರಮ್ಮ ಕರೆ ನೀಡಿದರು.




ಹುಳಿಯಾರು ಸಮೀಪದ ಬಡಕೆಗುಡ್ಲು ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿ ಭೂಮಿಯು ಮರುಭೂಮಿಯಾಗುತ್ತಿದೆ, ಬರ ಕಾಡುತ್ತಿದೆ. ಭೂಮಿಯನ್ನು ಪುನಃಶ್ಚೇತನ ಗೊಳಿಸಲು ಸರ್ಕಾರ ಪ್ರಯತ್ನ ಮಾಡಬೇಕು ಎಂದು ಹೇಳಿದರು.

ಸುವರ್ಣ ವಿದ್ಯಾ ಚೇತನದ ಅಧ್ಯಕ್ಷ ರಾಮಕೃಷ್ಣಪ್ಪ ಮಾತನಾಡಿ ಮರುಭೂಮೀಕರಣದಿಂದ ಪರಿಸರ, ಕೃಷಿ, ಸಮಾಜ ಮತ್ತು ಆರೋಗ್ಯದ ಮೇಲೆ ಉಂಟಾಗಿರುವ ಪರಿಣಾಮಗಳ ಬಗ್ಗೆ ವಿವರಿಸಿದರು. ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಮುಖ್ಯ ಶಿಕ್ಷಕರು ಸುಜಾತಾ ನಾವು ಪ್ರತಿಯೊಂದನ್ನೂ ಪರಿಸರದಿಂದ ಪಡೆಯುತ್ತಿದ್ದೇವೆ, ಅದನ್ನು ರಕ್ಷಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಹೇಳಿದರು.

ಹಿರಿಯ ಆರೋಗ್ಯ ನಿರೀಕ್ಷಕ ತುಮಕೂರಿನ ಮಂಜೇಗೌಡ, ಚಿಕ್ಕನಾಯಕನಹಳ್ಳಿ ಮುದ್ವೇಗೌಡ, ತಿಮ್ಮನಹಳ್ಳಿ ಶಾಹೀನಾ ಬಾನು, ಕುಮಾರ್ ಸಿ ಹೆಚ್, ಲೀಲಾವತಿ, ಆರೋಗ್ಯ ಕಾರ್ಯಕರ್ತರಾದ ಧನಲಕ್ಷ್ಮಿ, ಶಿಕ್ಷಕರಾದ ರುಕ್ಮಿಣಿ, ನಂದೀಶ್, ಗೀತಾ, ಮತ್ತಿತರ ಶಿಕ್ಷಕರು, ವಿದ್ಯಾರ್ಥಿಗಳು, ಶಾಲಾ ಆಡಳಿತ ಮಂಡಳಿಯವರು, ಪೋಷಕರು ಹಾಜರಿದ್ದರು.

## ಹುಳಿಯಾರಿನಲ್ಲಿ ಅರ್ಥಪೂರ್ಣ ಕಾರಬ್ಬ ಆಚರಣೆ

**ಹುಳಿಯಾರು:** ವಿಜ್ಞಾನ, ತಂತ್ರಜ್ಞಾನ ಎಷ್ಟೇ ಮುಂದುವರಿದರೂ ನಾಡಿನ ಸಂಸ್ಕೃತಿ-ಸಂಪ್ರದಾಯ ಮರೆಯಾಗುವುದಿಲ್ಲ ಎನ್ನುವುದಕ್ಕೆ ಹುಳಿಯಾರಿನಲ್ಲಿ ನಡೆದ ಕಾರಬ್ಬ ಸಾಕ್ಷಿಯಾಗಿದೆ. ಮುಂಗಾರಿನಲ್ಲಿ ಯಾವ ಬೆಳೆ ತಮ್ಮ ಕೈ ಹಿಡಿಯುತ್ತದೆ ಎಂಬುದನ್ನು ಧಾರ್ಮಿಕ ನೆಲೆಗಟ್ಟಿನಲ್ಲಿ ಅರಿತು ಬಿತ್ತನೆ ಕಾರ್ಯ ಮುಂದಾಗುವ ವಿಶೇಷ ಹಾಗೂ ವಿಭಿನ್ನ ಆಚರಣೆಯೇ ಈ ಕಾರಬ್ಬ. ಹುಳಿಯಾರಿನಲ್ಲಿ ಕಾರಬ್ಬವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.



ಈ ಹಬ್ಬವನ್ನು ದಕ್ಷಿಣ ಕರ್ನಾಟಕದ ರೈತರು ಹೆಚ್ಚಾಗಿ ಆಚರಿಸುತ್ತಾರಾದರೂ ಚಿಕ್ಕನಾಯಕನಹಳ್ಳಿ ತಾಲೂಕಿನ ಶೆಟ್ಟಿಕೆರೆ, ಹಂದನಕೆರೆ, ಹುಳಿಯಾರಿನಲ್ಲಿ ಅನಾದಿ ಕಾಲದಿಂದಲೂ ಆಚರಿಸಿಕೊಂಡು ಬರುತ್ತಿದ್ದಾರೆ. ಅದರಂತೆ ಈ ವರ್ಷವೂ ಇಲ್ಲಿನ ಗ್ರಾಮ ದೇವತೆ ಶ್ರೀ ದುರ್ಗಾಪರಮೇಶ್ವರಿ ಅಮ್ಮನವರ ಸಮ್ಮುಖದಲ್ಲಿ ಅರ್ಥಗರ್ಭಿತವಾಗಿ ಪ್ರಸಕ್ತ ಸಾಲಿನ ಕಾರಬ್ಬವನ್ನು ಆಚರಿಸಿದರು. ಶ್ರೀ ಅಮ್ಮನವರನ್ನು ಮಂಗಳವಾದ್ಯದೊಂದಿಗೆ ಹೊರಡಿಸಿ ಕೆಂಚಮ್ಮ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ಎತ್ತು, ಕುಂಟೆಯೊಂದಿಗೆ ಇತಿಹಾಸ ಪ್ರಸಿದ್ಧ ಕರಿಗಲ್ಲಿಗೆ ಕರೆತರಲಾಯಿತು. ಕರಿಗಲ್ಲನ್ನು ಅಂಬಳ್ಳಿ, ಮಾವು, ಬೇವಿನ ಸೊಪ್ಪಿನಿಂದ ಅಲಂಕರಿಸಿ ಅಲ್ಲಿ ಒಂದು ಮಣ್ಣಿನ ಗಡಿಕೆಯಲ್ಲಿ ತಾವು ಬೆಳೆಯುವ ಸಕಲ ಧಾನ್ಯಗಳನ್ನೂ ಒಂದೊಂದು ಹಿಡಿಯಷ್ಟು ತುಂಬಿ ಆ ಗಡಿಗೆಗೆ ಕರಿನಸೊಪ್ಪು ಅಂಗುನೂಲು, ಅಕ್ಷತೆಯನ್ನಿಟ್ಟು ಪೂಜಿಸಲಾಯಿತು. ನಂತರ ಸಂಪ್ರದಾಯದಂತೆ ಕೆಂಚಮ್ಮ ದೇವಸ್ಥಾನದ ಪೂಜಾರಪ್ಪ ಧಾನ್ಯ ತುಂಬಿದ ಕರಗವನ್ನು ಜೋಡೆತ್ತಿನ ಕುಂಟೆಯಿಂದ ಹೊಡೆದರು. ಹೀಗೆ ಹೊಡೆದ ರಭಸಕ್ಕೆ ಒಳಗಿನ ಧಾನ್ಯಗಳೆಲ್ಲಾ ದೂರಕ್ಕೆ ಚಲ್ಲಿತು. ಹೀಗೆ ಚೆಲ್ಲಿದ ಧಾನ್ಯದಲ್ಲಿ ರಾಗಿ, ಹುರುಳಿಕಾಳು, ಹೆಸರುಕಾಳು ಮುಂದೆ ಬಿದ್ದಿತ್ತು. ಹಾಗಾಗಿ ಈ ಭಾರಿಯ ಮುಂಗಾರಿಗೆ ಈ ಧಾನ್ಯಗಳು ಉತ್ತಮ ಫಸಲಾಗುತ್ತದೆ ಎಂದು ನಿರ್ಧರಿಸಿ ನೆರೆದಿದ್ದ ರೈತರು ಸಂಭ್ರಮಿಸಿದರು.

## ಡಾ.ಕೆ.ಎಲ್.ಶಂಕರನಾರಾಯಣ ಜೋಯಿಸ್ ಅಭಿಮತ

# ಉಪನಿಷತ್ತು ಭಾರತದ ಪರಮ ಶ್ರೇಷ್ಠ ಸಾಹಿತ್ಯ

**ಮೈಸೂರು:** ಭಾರತದ ಪರಮ ಶ್ರೇಷ್ಠವಾದ ಸಾಹಿತ್ಯ ಉಪನಿಷತ್ತು. ಅಲ್ಲಿಂದ ಆರಂಭಿಸಿ ವೇದ, ಇತಿಹಾಸ, ಪುರಾಣ, ಅಷ್ಟಾದಶ ವಿದ್ಯೆಗಳು, ಕಲೆಗಳು ಈ ಎಲ್ಲದರಲ್ಲೂ ಒಂದು ವ್ಯಾಪಕವಾದ ಅರ್ಥದಲ್ಲಿ ಯೋಗದ ಅನ್ವಯವಿದೆ ಎಂದು ಭಾರತೀ ಯೋಗಧಾಮದ ಸಂಸ್ಥಾಪಕ ಡಾ.ಕೆ. ಎಲ್. ಶಂಕರನಾರಾಯಣ ಜೋಯಿಸ್ ಹೇಳಿದರು.




ಕರ್ನಾಟಕ ಯೋಗ ಶಿಕ್ಷಕರ ಒಕ್ಕೂಟ ಕಲಾಮಂದಿರದಲ್ಲಿ ಏರ್ಪಡಿಸಿರುವ ಎರಡು ದಿನಗಳ ರಾಜ್ಯ ಮಟ್ಟದ ಪ್ರಥಮ ಯೋಗ ಸಮ್ಮೇಳನದ ಸಮ್ಮೇಳನಾಧ್ಯಕ್ಷರಾಗಿ ಮಾತನಾಡಿದ ಅವರು, ಇವೆಲ್ಲದರಲ್ಲೂ ಪರಸ್ಪರ ವಿರೋಧವಿಲ್ಲದಂತೆ ನಾನಾ ರೂಪದಲ್ಲಿ ಯೋಗದ ಅಂಗೋಪಾಂಗಗಳು ಹಾಸುಹೊಕ್ಕಾಗಿ ಹೆಣೆದುಕೊಂಡಿವೆ ಎಂದರು.

ಯೋಗಶಾಸ್ತ್ರ ಇತರ ಶಾಸ್ತ್ರಗಳಂತೆ ಅತ್ಯಂತ ಗಹನವಾಗಿದೆ. ಭೌತಿಕ ದೈವಿಕ ಅಧ್ಯಾತ್ಮಿಕ ಕ್ಷೇತ್ರದ ಹಲವಾರು ಸತ್ಯಗಳನ್ನು ಒಳಗೊಂಡಿದೆ. ಅಲ್ಲಿ ಬರುವ ಎಲ್ಲ ಮಾತುಗಳನ್ನೂ ಭೌತಿಕ ಸ್ತರದಲ್ಲಿ ನಿಂತು ಅರಿತುಕೊಳ್ಳಲಾಗದು, ವಿವರಿಸಲು ಸಾಧ್ಯವಾಗದು. ಕೇವಲ ಅನುಭವಕ್ಕೆ ಲಭಿಸುವ ವಿಷಯಗಳು ಎಷ್ಟೋ ಇವೆ. ಇದೆಲ್ಲವನ್ನೂ ಮನಸ್ಸಿನಲ್ಲಿಟ್ಟುಕೊಂಡು ಚಿಂತನೆಯು ಸಾಗಬೇಕು ಎಂದು ಅವರು ಕರೆ ನೀಡಿದರು.

ಆಧುನಿಕ ವಿಜ್ಞಾನದ ಮಾನದಂಡಕ್ಕೆ ಎಟುಕುವ ಭೌತಿಕವಾದ ವಿಷಯಗಳನ್ನು ಅಗತ್ಯವಾಗಿ ಗೌರವದಿಂದ ಭಾವಿಸಬೇಕು ಎಂದು ಅವರು ಸಲಹೆ ಮಾಡಿದರು.

ಪ್ರಾಚೀನವಾದದ್ದು ಹಿರಿದಾದದ್ದು ಎಂಬ ಅಭಿಮಾನವು ಹುಟ್ಟಲವಕಾಶವಿದೆಯೋ ಅದೇ ರೀತಿ ಆಧುನಿಕ ವಿಜ್ಞಾನವೆಂದೊಡನೆ ಕಣ್ಣುಮುಚ್ಚಿಕೊಂಡು ಮೆಚ್ಚುವ ದುರಭಿಮಾನವೂ ಹುಟ್ಟಲಾವಕಾಶವಿದೆ. ಆ ವಿಷಯದಲ್ಲೊಂದು ಸಾವಧಾನತೆ ಅತ್ಯಂತ ಅಗತ್ಯ. ಎಷ್ಟೆಷ್ಟೋ ಆಧುನಿಕ ವಿಜ್ಞಾನದ ನಿರ್ಣಯಗಳು ತಲೆಕೆಳಗಾಗಿವೆ. ಎಷ್ಟೆಷ್ಟೋ ಸೃಷ್ಟಿಯ ಮರ್ಮಗಳಿಗೆ ಉತ್ತರ ಲಭಿಸಿಲ್ಲ.ವಿಜ್ಞಾನದ ಆವಿಷ್ಕಾರಗಳಿಗೂ ಪ್ರಾಚೀನ ಋಷಿ ಮಹರ್ಷಿಗಳ ಚಿಂತನೆಗೂ ವಿರೋಧ ತೋರಿಬಂದರೆ, ಪ್ರಾಚೀನ ಋಷಿ ಮಹರ್ಷಿಗಳ ಮಾತಿನ ಆಳ ಅಗಲಗಳನ್ನೇ ಮರುಪರಿಶೀಲಿಸಿ ಸತ್ಯಾರ್ಥವನ್ನು ಗ್ರಹಿಸಲು ಯತ್ನಿಸಬೇಕು ಎಂದು ಅವರು ಹೇಳಿದರು.

ಆಧುನಿಕ ವಿಜ್ಞಾನದ ಒಂದೊಂದು ಪ್ರಯೋಗಗಳೂ ದಾರಿ ತಪ್ಪಿರಲು ಅವಕಾಶವಿದೆ. ಉದಾಹರಣೆಗೆ ಯೋಗ ಸಂಸ್ಥೆಯೊಂದು ಪಶ್ಚಿಮತಾನಾಸನದ ಬಗ್ಗೆ ಮಾಡಿರುವ ಪ್ರಯೋಗ ಮತ್ತು ಅದರ ಫಲಿತಾಂಶದ ಬಗ್ಗೆ ಒಂದೆಡೆ ಕಂಡೆ. ಖಾಲಿ ಹೊಟ್ಟೆಯಲ್ಲಿ ಆಸನ ಮಾಡುವುದರಿಂದ ಚಿಕ್ಕ ಕರುಳಿನ ಮೇಲೆ ಒತ್ತಡವಾಗುತ್ತೆ ಎಂಬ ಕಾರಣದಿಂದ ಒಂದು ಲೋಟ ಕಾಫಿ ಕುಡಿಸಿ ಅನಂತರ ಯೋಗಾಸನ ಮಾಡಿಸಿದೆವು ಎಂದು. ಇದು ಯೋಗದ ಸಿದ್ಧಾಂತಕ್ಕೆ ತೀರ ವಿರುದ್ಧವಾದದ್ದು. ಇಂತಹ ಪ್ರಯೋಗಗಳ ಮೇಲೆ ನಿಂತ ನಿರ್ಣಯಗಳು ಸಮರ್ಪಕವಾಗಲಾರವು ಎಂದು ಅವರು ಅಭಿಪ್ರಾಯಪಟ್ಟರು.

ಈ ಸಮ್ಮೇಳನದ ಆಯೋಜನೆಯಲ್ಲಿ ಹಿರಿದಾದ ಉದ್ದೇಶವಿದೆ. ಇದು ಹಲವರಿಗೆ ಯೋಗದ ವಿವಿಧ ಮುಖಗಳ ಬಗ್ಗೆ ಹೊಸ ನೋಟವನ್ನು ಖಂಡಿತವಾಗಿಯೂ ಉಂಟುಮಾಡಬಲ್ಲದು. ತಜ್ಞರಲ್ಲೂ ವಿಚಾರ ವಿನಿಮಯಕ್ಕೆ ಎಡೆಮಾಡಿಕೊಡುತ್ತದೆ, ಹಾಗೂ ಲಾಭವಿದೆ ಎಂದು ಅವರು ಹೇಳಿದರು.

## ಕೆಂಪೇಗೌಡರ ಜಯಂತಿ ಜಾತ್ಯತೀತ ಆಚರಣೆಗೆ ಮನವಿ

**ಕೆ.ಆರ್.ಪೇಟೆ:** ಇದೇ ಜೂನ್ 27 ರಂದು ಗುರುವಾರ ತಾಲ್ಲೂಕು ಆಡಳಿತದ ಹಾಗೂ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯ ವತಿಯಿಂದ ಆಚರಿಸಲಾಗುತ್ತಿರುವ ನಾಡಪ್ರಭು ಕೆಂಪೇಗೌಡರ ಜಯಂತ್ಯೋತ್ಸವ ಕಾರ್ಯಕ್ರಮಕ್ಕೆ ತಾಲೂಕು ಒಕ್ಕಲಿಗರ ಸಂಘಟನೆಗಳು ಸಂಪೂರ್ಣ ಸಹಕಾರ ನೀಡುತ್ತಿದ್ದು, ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಜಾತ್ಯಾತೀತವಾಗಿ ಆಚರಣೆ ಮಾಡಲು ನಿರ್ಧರಿಸಲಾಗಿದೆ ಎಂದು ಅಖಿಲ ಕರ್ನಾಟಕ ಒಕ್ಕಲಿಗರ ಒಕ್ಕೂಟದ ತಾಲ್ಲೂಕು ಘಟಕದ ಅಧ್ಯಕ್ಷ ನಾಟನಹಳ್ಳಿ ಗಂಗಾಧರ್ ತಿಳಿಸಿದರು.



ಪಟ್ಟಣದ ಪ್ರವಾಸಿ ಮಂದಿರದಲ್ಲಿ ಅಖಿಲ ಕರ್ನಾಟಕ ಒಕ್ಕಲಿಗರ ಸಂಘದ ತಾಲೂಕು ಘಟಕದ ಅಧ್ಯಕ್ಷ ನಾಟನಹಳ್ಳಿ ಗಂಗಾಧರ್ ನೇತೃತ್ವದಲ್ಲಿ ನಡೆದ ಒಕ್ಕಲಿಗರ ಸಂಘಟನೆಗಳ ಒಕ್ಕೂಟದ ಸಭೆಯಲ್ಲಿ ಮಾತನಾಡಿ ನಾಡಪ್ರಭು ಕೆಂಪೇಗೌಡರ ಜಯಂತಿ ಕಾರ್ಯಕ್ರಮದಲ್ಲಿ ವಿವಿಧ ಸಮುದಾಯದ ಸಾಧನೆ ಮಾಡಿದ ಸಾಧಕರನ್ನು ಹಾಗೂ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದು ಉತ್ತೀರ್ಣ ಹೊಂದಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಿ ಗೌರವಿಸಲು ಹಾಗೂ ಜಾತ್ಯಾತೀತವಾಗಿ ಕೆಂಪೇಗೌಡರ ಜಯಂತಿ ಆಚರಿಸಲು ತಾಲೂಕು ಆಡಳಿತಕ್ಕೆ ಮನವಿ ಮಾಡಿದರು.

ಗಂಗಾಧರ್ ನಾಡಪ್ರಭು ಕೆಂಪೇಗೌಡರು ಜಾತಿಯ ಕಟ್ಟುಪಾಡುಗಳನ್ನು ಮೀರಿ ನಾಡಿನ ಸಮಸ್ತ ಜನರ ಒಳಿತಿಗಾಗಿ ಶ್ರಮಿಸಿದವರು. ಒಕ್ಕಲಿಗ ಸಮಾಜ ಈಗಲೂ ಗ್ರಾಮೀಣ ಪ್ರದೇಶದಲ್ಲಿ ಜಾತಿ, ಮತ, ಪಂಥಗಳನ್ನು ಮೀರಿ ಬದುಕುತ್ತಿದೆ. ಒಕ್ಕಲಿಗ ಸಮಾಜಕ್ಕೆ ಯಾರ ಬಗ್ಗೆಯೂ ಪೂರ್ವಾಗ್ರಹ ರಾಗ ದ್ವೇ?ಗಳಿಲ್ಲ. ನಾಡಪ್ರಭು ಕೆಂಪೇಗೌಡರ ಅಶಯದಂತೆ ಸರ್ವ ಜನರ ಜೊತೆ ಒಗ್ಗೂಡಿ ಬದುಕುವುದು ನಮ್ಮ ಆಶಯ. ಅದರಂತೆ ಜೂನ್ 27 ರಂದು ನಡೆಯಲಿರುವ ಕೆಂಪೇಗೌಡರ ಜಯಂತಿಯಲ್ಲಿ ತಾಲೂಕಿನ ಸರ್ವ ಸಮಾಜದ ಜನರು ಭಾಗಿಯಾಗಬೇಕು. ತಾಲೂಕು ಆಡಳಿತ ಸೌಧದ ಆವರಣದಲ್ಲಿ ಕೆಂಪೇಗೌಡರ ಜಯಂತ್ಯೋತ್ಸವ ಸಭಾ ಕಾರ್ಯಕ್ರಮ ನಡೆಯಲಿದ್ದು ಮಂಡ್ಯದ ಕರ್ನಾಟಕ ಸಂಘದ ಅಧ್ಯಕ್ಷ ಜಯಪ್ರಕಾಶ್ ಗೌಡ ಕೆಂಪೇಗೌಡರನ್ನು ಕುರಿತು ಮಾತನಾಡಲಿದ್ದಾರೆ. ಶಾಸಕ ಹೆಚ್.ಟಿ.ಮಂಜು, ತಹಸೀಲ್ದಾರ್ ನಿಸರ್ಗಪ್ರಿಯ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ತಾಲೂಕಿನ ಎಲ್ಲಾ ಸಮಾಜದ ಮುಖಂಡರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಪಟ್ಟಣದ ಪ್ರವಾಸಿ ಮಂದಿರದ ಆವರಣದಿಂದ ನಾಡಪ್ರಭು ಕೆಂಪೇಗೌಡರ ಭಾವಚಿತ್ರವನ್ನು ಒಳಗೊಂಡ ಮೆರವಣಿಗೆ ಪ್ರಮುಖ ಬೀದಿಗಳಲ್ಲಿ ಹಾದು ಕಾರ್ಯಕ್ರಮದ ವೇದಿಕೆಗೆ ಆಗಮಿಸಲಿದೆ. ವೀರಗಾಸೆ, ನಂದಿ ಕಂಭ, ಕೋಲಾಟ ಸೇರಿದಂತೆ ವಿವಿಧ ಜನಪದ ಕಲಾತಂಡಗಳ ಪ್ರದರ್ಶನ ಹಾಗೂ ಮಂಗಳ ಕಳಸಗಳ ಮೂಲಕ ಮೆರವಣಿಗೆ ನಡೆಯಲಿದೆ. ಕಾರ್ಯಕ್ರಮದಲ್ಲಿ ವಿವಿಧ ಸಮುದಾಯದ ವಿವಿಧ ಕ್ಷೇತ್ರದ ಸಾಧನೆ ಮಾಡಿದ ಸಾಧಕರನ್ನು ಹಾಗೂ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಜಾತ್ಯಾತೀತವಾಗಿ ಗುರುತಿಸಿ ಗೌರವಿಸಲಾಗುವುದು. ತಾಲೂಕು ಸಮಸ್ತ ಜಾತಿ ವರ್ಗಗಳ ಜನ ಜೂನ್ 27 ರ ಕೆಂಪೇಗೌಡರ ಜಯಂತಿಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

# ಸಂಜೆ ಟಿಪ್ಸ್

## ಅಮೃತಹಳ್ಳಿಯಲ್ಲಿ ಅತ್ಯಾಧುನಿಕ ಮ್ಯೂಸಿಕ್ ಅಕಾಡೆಮಿ ಪ್ರಾರಂಭ

ಭಾರತದ ಅತ್ಯಂತ ದೊಡ್ಡ ಸಂಗೀತ ಶಿಕ್ಷಣದ ಪ್ಲಾಟ್ ಫಾರಂ ಮ್ಯೂಜಿಗಲ್ ಬೆಂಗಳೂರಿನ ಜಕ್ಕೂರು ಲೇಔಟಿನ ಅಮೃತಹಳ್ಳಿಯಲ್ಲಿ ತನ್ನ 11ನೇ ಅತ್ಯಾಧುನಿಕ ಮ್ಯೂಸಿಕ್ ಅಕಾಡೆಮಿ ಪ್ರಾರಂಭಿಸಿದೆ. ಈ ಅಕಾಡೆಮಿಯು 2200 ಚದರ ಅಡಿ ವಿಸ್ತೀರ್ಣ ಹೊಂದಿದೆ ಮತ್ತು ಗಾಯನ ಮತ್ತು ಇನ್ಸ್ ಟ್ರುಮೆಂಟಲ್ ಸಂಗೀತ ಕಲಿಯಲು ಪೂರಕ ವಾತಾವರಣ ಹೊಂದಿದೆ. ಖ್ಯಾತ ಹಿನ್ನೆಲೆ ಗಾಯಕ ನಾಗರಂಜನಿ ರಘು ಮುಖ್ಯ ಅತಿಥಿಯಾಗಿದ್ದರು ಮತ್ತು ಮ್ಯೂಜಿಗಲ್ ಸಂಸ್ಥಾಪಕ ಡಾ.ಲಕ್ಷ್ಮೀನಾರಾಯಣ ಯೆಲೂರಿ ಗೌರವ ಅತಿಥಿಗಳಾಗಿದ್ದರು. 500 ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸುವ ಹಲವು ಬ್ಯಾಚ್ ಗಳನ್ನು ಹೊಂದಿರುವ ಈ ಮ್ಯೂಸಿಕ್ ಅಕಾಡೆಮಿಯು ಪಿಯಾನೊ, ಕೀಬೋರ್ಡ್, ಗಿಟಾರ್, ಡ್ರಮ್ಸ್, ಕರ್ನಾಟಕ ಸಂಗೀತ, ಹಿಂದೂಸ್ತಾನಿ, ಪಾಶ್ಚಿಮಾತ್ಯ, ವಯೊಲಿನ್ ಮತ್ತು ಉಕುಲೆಲೆಯಲ್ಲಿ ಪಾಠಗಳನ್ನು ನೀಡುತ್ತದೆ. ಉದ್ಘಾಟನಾ ತಿಂಗಳಲ್ಲಿ ಮ್ಯೂಜಿಗಲ್ ನೋಂದಾಯಿತರಾದ ಎಲ್ಲರಿಗೂ 1 ತಿಂಗಳು ಉಚಿತ ಸಂಗೀತ ಶಿಕ್ಷಣ ನೀಡುತ್ತದೆ. ಮ್ಯೂಜಿಗಲ್ ಸಂಗೀತ ಶಿಕ್ಷಣದಲ್ಲಿ 360-ಡಿಗ್ರಿ ಫ್ರೇಮ್ ವರ್ಕ್ ಅನ್ನು ಪೂರೈಸುತ್ತಿದ್ದು ಸಂಗೀತ ಕಲಿಕೆ ಮತ್ತು ಬೋಧನೆಯ ವ್ಯವಸ್ಥೆಯನ್ನು ಆನ್ಲೈನ್, ಆಫ್ಲೈನ್ ಮತ್ತು ಸಂಗೀತ ಸಾಧನಗಳ ಮಳಿಗೆಯನ್ನು ಒಂದೇ ಪ್ಲಾಟ್ ಫಾರಂಗೆ ಅಳವಡಿಸುವ ಮೂಲಕ ಸುವರ್ಣ ಮಾನದಂಡ ರೂಪಿಸುತ್ತಿದೆ. ಮ್ಯೂಜಿಗಲ್ ಅಕಾಡೆಮಿ ಪ್ರಾರಂಭ ಕುರಿತು ಅಕಾಡೆಮಿ ಸಂಸ್ಥಾಪಕ ಡಾ.ಲಕ್ಷ್ಮೀನಾರಾಯಣ ಯೆಲೂರಿ, ''ಮ್ಯೂಜಿಗಲ್ ಅಕಾಡೆಮಿಯು ಸಂಗೀತ ಶಿಕ್ಷಣವನ್ನು ಅತ್ಯಾಧುನಿಕ ಕಲಿಕಾ ಕೇಂದ್ರದ ಮೂಲಕ ಪ್ರಜಾಸತ್ತೀಯಗೊಳಿಸುವ ಉದ್ದೇಶ ಹೊಂದಿದೆ. ಇದು ಸಂಗೀತದಲ್ಲಿ ಅತ್ಯುತ್ತಮ ಕಲಿಕೆ ಮತ್ತು ಬೋಧನೆಯ ಅನುಭವ ನೀಡುತ್ತದೆ. ಇದು ಪರಿಣಿತ ಶಿಕ್ಷಕರಿಂದ ಭಾರತೀಯ ಶಾಸ್ತ್ರೀಯ ಮತ್ತು ಪಾಶ್ಚಿಮಾತ್ಯ ಸಂಗೀತದಲ್ಲಿ ಕಲಿಕೆ ಮತ್ತು ಬೋಧನೆ ನೀಡುತ್ತದೆ. ಇದರೊಂದಿಗೆ ರಚನಾತ್ಮಕ ಪಠ್ಯಕ್ರಮ, ನಿಯಮಿತ ಮೌಲ್ಯಮಾಪನ, ಪ್ರಮಾಣೀಕರಣ, ಅನುಕೂಲಕರ ಶುಲ್ಕ ಪಾವತಿ, ತರಬೇತಿ ಪಡೆದ ಶಿಕ್ಷಕರು ಮತ್ತು ಸುಲಭ ಲಭ್ಯತೆ ಇದನ್ನು ಕಲಿಯುವವರ ಕೇಂದ್ರವಾಗಿಸಿದೆ'' ಎಂದರು.ಭಾರತ, ಯು.ಎಸ್.ಎ., ಯು.ಕೆ., ಆಸ್ಟ್ರೇಲಿಯಾ ಮತ್ತು ಯು.ಎ.ಇ.ಗಳಲ್ಲಿ 10,000ಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ಹೊಂದಿರುವ 400+ ತರಬೇತಿ ಪಡೆದ ಸಂಗೀತ ಶಿಕ್ಷಕರನ್ನು ಹೊಂದಿದ್ದು 40,000ಕ್ಕೂ ಹೆಚ್ಚು ತರಗತಿಗಳನ್ನು ಯಶಸ್ವಿಯಾಗಿ ಪೂರೈಸಿರುವ ಮ್ಯೂಜಿಗಲ್ ವಿದ್ಯಾರ್ಥಿಗಳಿಗೆ ಅವರ ಸಂಗೀತದ ಆಸೆ ಆಕಾಂಕ್ಷೆಗಳನ್ನು ಪೂರೈಸಿಕೊಳ್ಳಲು ನೆರವಾಗುತ್ತದೆ.

## ಈರುಳ್ಳಿ ವಡೆ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ದೋಸೆ ಅಕ್ಕಿ- 2 ಕಪ್, ಕಾಯಿತುರಿ- 1 ಕಪ್, ಈರುಳ್ಳಿ-4, ಹಸಿಮೆಣಸಿನಕಾಯಿ-4, ಶುಂಠಿ-ಸ್ವಲ್ಪ, ಕರಿಬೇವುಸೊಪ್ಪು- ಸ್ವಲ್ಪ

### ಮಾಡುವ ವಿಧಾನ

**3 ಈರುಳ್ಳಿ, 3 ಹಸಿಮೆಣಸಿನಕಾಯಿ, ಶುಂಠಿ, ಕರಿಬೇವುಸೊಪ್ಪನ್ನು ಸಣ್ಣಗೆ ಹೆಚ್ಚಿಕೊಳ್ಳಿ, ನಂತರ 2 ಗಂಟೆ ನೆನೆಸಿಟ್ಟ ದೋಸೆ ಅಕ್ಕಿ, 1 ಕಪ್ ಕಾಯಿತುರಿ, 1 ಈರುಳ್ಳಿ, 1 ಮೆಣಸಿನಕಾಯಿ ಸೇರಿಸಿ ರುಬ್ಬಿಕೊಳ್ಳಿ.**
**ಜೊತೆಗೆ ರುಚಿಗೆ ತಕ್ಕಷ್ಟು ಉಪ್ಪು ಸೇರಿಸಿ ಬೇಕಾದರೆ ನೀರು ಸೇರಿಸಿ ರುಬ್ಬಿಕೊಳ್ಳಿ. ಆದರೆ ಹಿಟ್ಟು ಗಟ್ಟಿಯಾಗಿರಬೇಕು.**
**ನಂತರ ಈ ಹಿಟ್ಟಿಗೆ ಹೆಚ್ಚಿಟ್ಟ ಈರುಳ್ಳಿ, ಶುಂಠಿ, ಹಸಿಮೆಣಸಿನಕಾಯಿ, ಕರಿಬೇವುಸೊಪ್ಪನ್ನು ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಿ. ನಂತರ ಒಂದು ಬಾಣಲೆಯಲ್ಲಿ ಎಣ್ಣೆ ಹಾಕಿ ಸ್ಟೌವ್ ಮೇಲಿಡಿ. ಹಿಟ್ಟನ್ನು ಉಂಡೆ ಮಾಡಿ ವಡೆ ತರಹ ಕೈಯಲ್ಲೇ ತಟ್ಟಿ ಕಾದ ಎಣ್ಣೆಗೆ ಬಿಡಿ. ಕಂದು ಬಣ್ಣ ಬಂದಾಗ ಸರ್ವಿಂಗ್ ಪ್ಲೇಟ್ ಗೆ ಹಾಕಿಟ್ಟರೆ ಸವಿಯಲು ಈರುಳ್ಳಿ ವಡಾ ರೆಡಿ.**

## ಸ್ವೀಟ್ ಕಾರ್ನ್ ಲಾಭ ಗೊತ್ತಾ!

### ಹೆಲ್ತ್ ಟಿಪ್ಸ್



ಸ್ವೀಟ್ಕಾರ್ನ್ ಫೈಬರ್ ಸಮೃದ್ಧವಾಗಿದೆ. ಮಲಬದ್ಧತೆ ಮತ್ತು ಪೈಲ್ಸ್ನಿಂದ ಬಳಲುತ್ತಿರುವವರಿಗೆ ಸ್ವೀಟ್ಕಾರ್ನ್ ಉತ್ತಮ ಪರಿಹಾರವಾಗಿದೆ. ಸ್ವೀಟ್ ಕಾರ್ನ್ ನಲ್ಲಿ ಆಯಂಟಿಆಕ್ಸಿಡೆಂಟ್ ಅಧಿಕವಾಗಿರುತ್ತದೆ. ಕ್ಯಾನ್ಸರ್ ಉಂಟುಮಾಡುವ ಸ್ವತಂತ್ರ ರಾಡಿಕಲ್ಗಳನ್ನು ಇದು ತಡೆಯುತ್ತದೆ. ನಿರ್ದಿಷ್ಟವಾಗಿ ಸ್ತನ ಮತ್ತು ಯಕೃತ್ತಿನ ಕ್ಯಾನ್ಸರ್ ತಡೆಗಟ್ಟುವ ಉತ್ಕರ್ಷಣ ನಿರೋಧಕಗಳು ಪ್ರಮುಖ ಪಾತ್ರವಹಿಸುತ್ತವೆ. ಸ್ವೀಟ್ ಕಾರ್ನ್ ತಿಂದರೆ ಆಸಿಡಿಟಿ ಸಮಸ್ಯೆಯಿಂದ ಮುಕ್ತಿ ಸಿಗುತ್ತದೆ. ಸ್ವೀಟ್ ಕಾರ್ನ್ ಸೇವನೆಯಿಂದ ಮಲಬದ್ಧತೆ, ಗ್ಯಾಸ್ ಮತ್ತು ಆಸಿಡಿಟಿ ಸಮಸ್ಯೆಯೂ ನಿವಾರಣೆಯಾಗುತ್ತದೆ. ಸ್ವೀಟ್ ಕಾರ್ನ್ ವಿವಿಧ ಪೋಷಕಾಂಶಗಳನ್ನು ಒಳಗೊಂಡಿದೆ. ಇವು ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಸ್ವೀಟ್ಕಾರ್ನ್ನಲ್ಲಿರುವ ವಿಟಮಿನ್-ಸಿ, ಕ್ಯಾರೊಟಿನಾಯ್ಡ್ಗಳು ಮತ್ತು ಬಯೋಫ್ಲೇವನಾಯ್ಡ್ಗಳು ಹೃದಯದ ಕಾರ್ಯವನ್ನು ಸುಧಾರಿಸುತ್ತದೆ. ಸ್ವೀಟ್ ಕಾರ್ನ್ ವಿಟಮಿನ್ ಮತ್ತು ಆಯಂಟಿಆಕ್ಸಿಡೆಂಟ್ ಗಳಲ್ಲಿ ಸಮೃದ್ಧವಾಗಿದೆ. ವಿಟಮಿನ್ ಬಿ-12, ಕಬ್ಬಿಣ ಮತ್ತು ಫೋಲಿಕ್ ಆಮ್ಲವು ರಕ್ತಹೀನತೆಯನ್ನು ತಡೆಯುತ್ತದೆ. ಅಂತೆಯೇ, ಸಿಹಿ ಜೋಳದಲ್ಲಿರುವ ರಂಜಕ, ಮೆಗ್ನೀಸಿಯಮ್, ಮ್ಯಾಂಗನೀಸ್, ಕಬ್ಬಿಣ, ತಾಮ್ರ, ಸತು ಮುಂತಾದ ಖನಿಜಗಳು ಮೂಳೆಗಳನ್ನು ಬಲಪಡಿಸುತ್ತದೆ ಮತ್ತು ಮೂತ್ರಪಿಂಡಗಳ ಕಾರ್ಯವನ್ನು ಸುಧಾರಿಸುತ್ತದೆ.

ನಿರಂತರ ಒತ್ತಡದಲ್ಲಿ ಕೆಲಸ ಮಾಡುವವರಿಗೆ ಸ್ವೀಟ್ ಕಾರ್ನ್ ಉತ್ತಮ ಔಷಧಿಯಾಗಿ ಕೆಲಸ ಮಾಡುತ್ತದೆ. ಇದರಲ್ಲಿರುವ ಫೀನಾಲಿಕ್ ಫೈಟೊಕೆಮಿಕಲ್ಸ್ ಅಧಿಕ ರಕ್ತದೊತ್ತಡವನ್ನು ಕಡಿಮೆ ಮಾಡುವಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತದೆ. ಸ್ವೀಟ್ ಕಾರ್ನ್ ಬಹಳ ಬೇಗ ಜೀರ್ಣವಾಗುತ್ತದೆ. ಆದ್ದರಿಂದ, ದೇಹವು ಅಗತ್ಯವಿರುವ ಶಕ್ತಿಯನ್ನು ತಕ್ಷಣವೇ ಪಡೆಯುತ್ತದೆ. ಆದ್ದರಿಂದ ಪ್ರತಿದಿನವೂ ಸ್ವೀಟ್ ಕಾರ್ನ್ ಅನ್ನು ಆಹಾರದ ಭಾಗವನ್ನಾಗಿ ಮಾಡಿಕೊಂಡರೆ ಆರೋಗ್ಯ ಹಿತಕರವಾಗಿರುತ್ತದೆ ಎನ್ನುತ್ತಾರೆ ತಜ್ಞರು.

ನಿಮ್ಮ ರೋಗನಿರೋಧಕ ಶಕ್ತಿ ದುರ್ಬಲವಾಗಿದ್ದರೆ, ಖಂಡಿತವಾಗಿಯೂ ತಿನ್ನಿರಿ. ಇದು ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಸ್ವೀಟ್ ಕಾರ್ನ್ ಸೇವಿಸುವುದರಿಂದ ಹೃದಯಾಘಾತದ ಸಾಧ್ಯತೆ ಕಡಿಮೆಯಾಗುತ್ತದೆ. ಸ್ವೀಟ್ ಕಾರ್ನ್ ತಿನ್ನುವುದರಿಂದ ತೂಕ ನಿಯಂತ್ರಣದಲ್ಲಿರುತ್ತದೆ. ಸ್ವೀಟ್ ಕಾರ್ನ್ ಕೂಡ ತ್ವಚೆಗೆ ತುಂಬಾ ಒಳ್ಳೆಯದು.

## ಅನಗತ್ಯ ಕೂದಲಿಗೆ ಗುಡ್ ಬೈ ಹೇಳಿ

### ಬ್ಯೂಟಿ ಟಿಪ್ಸ್

ಮಹಿಳೆಯರ ಮುಖದಲ್ಲಿ ಅನಗತ್ಯ ಕೂದಲು ಸಾಮಾನ್ಯ. ಆದರೆ ಈ ಅನಗತ್ಯ ಕೂದಲು ಮುಖದ ಸೌಂದರ್ಯವನ್ನು ಹಾಳು ಮಾಡುತ್ತದೆ. ಕೂದಲು ಬೆಳೆಯಲು ಹಾರ್ಮೋನುಗಳ ಬದಲಾವಣೆಗಳು, ಆನುವಂಶಿಕ ಕಾರಣಗಳು, ರೋಗಗಳು ಮತ್ತು ಔಷಧಿಗಳು ಕಾರಣವಾಗುತ್ತವೆ. ಅನಗತ್ಯ ಕೂದಲಿನ ಬಗ್ಗೆ ತಲೆಕೆಡಿಸಿಕೊಳ್ಳುವ ಮಹಿಳೆಯರು ಪಾರ್ಲರ್ ಗೆ ಹೋಗ್ತಾರೆ.

ಓಟ್ ಮೀಲ್ ಮತ್ತು ಬಾಳೆಹಣ್ಣು : ಅನಗತ್ಯ ಕೂದಲನ್ನು ತೆಗೆದುಹಾಕಲು ಓಟ್ ಮೀಲ್ ಮತ್ತು ಬಾಳೆಹಣ್ಣಿನ ಸ್ಕಬ್ ಮಾಡಬಹುದು. ಇದಕ್ಕಾಗಿ ಬಾಳೆಹಣ್ಣನ್ನು ದೊಡ್ಡ ಬಟ್ಟಲಿನಲ್ಲಿ ನುರಿದುಕೊಳ್ಳಿ. ಅದಕ್ಕೆ ಓಟ್ ಮೀಲ್ ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ. ಈ ಪ್ಯಾಕ್ ಅನ್ನು ಮುಖಕ್ಕೆ ಹಚ್ಚಿ. ಅದು ಸಂಪೂರ್ಣವಾಗಿ ಒಣಗಿದ ನಂತ್ರ ಬೆರಳುಗಳ ಸಹಾಯದಿಂದ ಉಜ್ಜುವ ಮೂಲಕ ತೆಗೆಯಿರಿ. ನಂತ್ರ ನೀರಿನಿಂದ ಮುಖ ತೊಳೆಯಿರಿ. ವಾರಕ್ಕೆ ಎರಡು ಬಾರಿ ಹೀಗೆ ಮಾಡಿದ್ರೆ, ಅನಗತ್ಯ ಕೂದಲು ಇರುವುದಿಲ್ಲ.

ಸಕ್ಕರೆ ಮತ್ತು ಜೇನುತುಪ್ಪ: ಒಂದು ಪಾತ್ರೆಗೆ ಎರಡು ಚಮಚ ಸಕ್ಕರೆ ಪುಡಿಯನ್ನು ತೆಗೆದುಕೊಳ್ಳಿ. ಅದಕ್ಕೆ ಒಂದು ಚಮಚ ಜೇನುತುಪ್ಪವನ್ನು ಸೇರಿಸಿ ಬಿಸಿ ಮಾಡಿ. ಸ್ವಲ್ಪ ತಣ್ಣಗಾದಾಗ ಅದನ್ನು ಮುಖಕ್ಕೆ ಹಚ್ಚಿ. ಸ್ವಲ್ಪ ಸಮಯದ ನಂತರ ಅದನ್ನು ತೆಗೆದು ಮುಖ ತೊಳೆದುಕೊಳ್ಳಿ.



## ನಟಿ ಅನುಷ್ಕಾ ಶೆಟ್ಟಿಗೆ ನಗುವ ಕಾಯಿಲೆ ಅಂತೆ





ದಕ್ಷಿಣ ಭಾರತದ ಖ್ಯಾತ ನಟಿ ಅನುಷ್ಕಾ ಶೆಟ್ಟಿ ಈಗ ಪಾನ್ ಇಂಡಿಯಾ ಸ್ಟಾರ್ ಆಗಿದ್ದಾರೆ, ಬಾಹುಬಲಿ ಸಿನಿಮಾದಲ್ಲಿನ ಅವರ ನಟನೆ ಅವರನ್ನು ಆಲ್ ಇಂಡಿಯಾ ಸ್ಟಾರ್ ಎಂಬ ಬಿರುದು ತಂದು ಕೊಟ್ಟಿತ್ತು. ಆದ್ರೆ, ಅವರು ಯಾವಾಗಲು ಮದುವೆಯ ವಿಚಾರವಾಗಿಯೇ ಹೆಚ್ಚು ಸುದ್ದಿಯಾಗುತ್ತಿದ್ದರು.

ಆದರೆ ಈಗ ಆರೋಗ್ಯದ ವಿಚಾರವಾಗಿ ಸುದ್ದಿಯಾಗುತ್ತಿದ್ದಾರೆ.

ಬಾಹುಬಲಿಯ ನಟಿಗೆ ಅಪರೂಪದ ಕಾಯಿಲೆಯೊಂದು ಕಾಡಿತ್ತಂತೆ. ಸಂದರ್ಶನವೊಂದರಲ್ಲಿ ಮಾತನಾಡಿದ್ದ ಅವರು ಈ ಕುರಿತು ಹೇಳಿಕೊಂಡಿದ್ದರು . ಅವರಿಗೆ ಅಪರೂಪದಲ್ಲಿ ಅಪರೂಪ ಎನ್ನಬಹುದಾದ ನಗುವಿನ ಕಾಯಿಲೆ ಇತ್ತಂತೆ. ಅಂದರೆ ಅವರಿಗೆ ಒಮ್ಮೆ ನಗು ಆರಂಭಗೊಂಡರೆ ನಿಲ್ಲಿಸುವುದು ಕಷ್ಟವಾಗುತ್ತಿತ್ತಂತೆ. ನನಗೆ ನಗುವ ಕಾಯಿಲೆ ಇದೆ. ನಿಮಗೆ ಆಶ್ಚರ್ಯವಾಗಬಹುದು, 'ನಗುವುದು ಒಂದು ಸಮಸ್ಯೆಯೇ?' ನಾನು ನಗಲು ಪ್ರಾರಂಭಿಸಿದರೆ, 15 ರಿಂದ 20 ನಿಮಿಷಗಳ ಕಾಲ ನಿಲ್ಲಿಸಲು ಸಾಧ್ಯವಿಲ್ಲ. ಹಾಸ್ಯ ದೃಶ್ಯಗಳನ್ನು ನೋಡುವಾಗ ಅಥವಾ ಚಿತ್ರೀಕರಿಸುವಾಗ, ನಾನು ಅಕ್ಷರಶಃ ನಗುತ್ತಾ ನೆಲದ ಮೇಲೆ ಕುಸಿದು ಬೀಳುತ್ತಿದ್ದೆ. ಇದೇ ಕಾರಣಕ್ಕೆ ಚಿತ್ರೀಕರಣ ಮುಂದೂಡಿದ ಘಟನೆಗಳು ಸಹ ನಡೆದಿತ್ತು. ಆದರೆ ನೋಡುಗರಿಗೆ ಇದು ಕಾಯಿಲೆಯಂತೆ ಕಾಣಿಸುತ್ತಿರಲಿಲ್ಲ ಎಂದು ಅವರು ಹೇಳಿದ್ದಾರೆ. ಈ ನಗುವ ಕಾಯಿಲೆಯನ್ನು ವೈದ್ಯಕೀಯ ಲೋಕದಲ್ಲಿ ಸ್ಯೂಡೋಬುಲ್ಬರ್ ಪರಿಣಾಮ ಎಂದು ಕರೆಯಲಾಗುತ್ತದೆ ಇದು ಸಾಮಾನ್ಯವಾಗಿ ಲಕ್ಷದಲ್ಲಿ ಒಬ್ಬರಲ್ಲಿ ಕಂಡು ಬರುತ್ತದೆ ಯಂತೆ. ಇದರಲ್ಲಿ ನಗು ಮಾತ್ರವಲ್ಲ ಅಳು ಸಹ ಅದೇ ರೀತಿಯಾಗಿ ಕಾಣಿಸಿಕೊಳ್ಳುತ್ತದೆ. ಅಂದರೆ ಒಮ್ಮೆ ನಗು ಬಂದರೆ ನಿಲ್ಲಿಸಲಾಗುವುದಿಲ್ಲ. ಜೊತೆಗೆ ಅಳು ಬಂದರೆ ಸಹ ನಿಲ್ಲಿಸುವುದು ತುಂಬಾ ಕಷ್ಟವಾಗುತ್ತದೆ.

ಆಗಾಗ್ಗೆ, ನಗುವಿಕೆಯನ್ನು ಪ್ರಚೋದಿಸುವ ಅಂಶವು ಚಿಕ್ಕದಾಗಿರಬಹುದು, ಅಂದರೆ ಭಾವನಾತ್ಮಕ ಪ್ರತಿಕ್ರಿಯೆಗಳು ಪ್ರಚೋದಿಸುವ ಘಟನೆಗೆ ಅನುಪಾತದಲ್ಲಿರುತ್ತವೆ. ಅಲ್ಲಿ ಇರುವ ಇತರ ಜನರು ಅದನ್ನು ತಮಾಷೆಯಾಗಿ ಕಾಣದಿರಬಹುದು ಮತ್ತು ಆದ್ದರಿಂದ, ನಗುವ ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಯು ಅವನ / ಅವಳ ಪ್ರತಿಕ್ರಿಯೆಯ ಬಗ್ಗೆ ಮುಜುಗರ ಅನುಭವಿಸಬಹುದು. ಇದೇ ಕಾಯಿಲೆ ನಟಿಗೂ ಕಾಡುತ್ತಿತ್ತಂತೆ.

ಮೋಟಾರ್ ನ್ಯೂರಾನ್ ಕಾಯಿಲೆ ಅಮಿಯೋಟ್ರೋಫಿಕ್ ಲ್ಯಾಟರಲ್ ಸ್ಕ್ಲೆರೋಸಿಸ್ ಮಲ್ಟಿಪಲ್ ಸ್ಕ್ಲೆರೋಸಿಸ್ ,ಬ್ರೈನ್ ಸ್ಟ್ರೋಕ್, ಬ್ರೈನ್ ಟ್ಯೂಮರ್ ಅಥವಾ ಆಘಾತಕಾರಿ ಮಿದುಳಿನ ಗಾಯದಂತಹ ಹಲವಾರು ನರವೈಜ್ಞಾನಿಕ ಅಸ್ವಸ್ಥತೆಗಳು ಸೂಡೊಬುಲ್ಬಾರ್ ಪರಿಣಾಮವನ್ನು ಉಂಟುಮಾಡಬಹುದು.

## ಮುಂಬೈನಲ್ಲಿ 900 ಮಕ್ಕಳೊಂದಿಗೆ ಒಲಿಂಪಿಕ್ ದಿನವನ್ನು ಸಂಭ್ರಮಿಸಿದ ರಿಲಯನ್ಸ್ ಫೌಂಡೇಶನ್

ರಿಲಯನ್ಸ್ ಫೌಂಡೇಶನ್ ಆಯೋಜಿಸಿದ ವಿಶಿಷ್ಟ ಒಲಿಂಪಿಕ್ ದಿನವನ್ನು ಒಂಬತ್ತು ನೂರು ಮಕ್ಕಳು ಸಂಭ್ರಮಿಸಿದರು. ಐಒಸಿಯ ಲೆಟ್ಸ್ ಮೂವ್ ಇಂಡಿಯಾಅಭಿಯಾನದ ಭಾಗವಾಗಿ ವಿಶೇಷ ಕಾರ್ನಿವಲ್ ನಿಂದ ಕೂಡಿದ ಕಾರ್ಯಕ್ರಮದಲ್ಲಿ ಮುಂದಾಳತ್ವ ಮತ್ತು ಕ್ರೀಡೆಗಳನ್ನು ಉತ್ತೇಜಿಸಲಾಯಿತು. ಮುಂಬೈನ ರಿಲಯನ್ಸ್ ಕಾರ್ಪೊರೇಟ್ ಪಾರ್ಕ್ನಲ್ಲಿ (ಆರ್ಸಿಪಿ)ಶನಿವಾರ (ಜೂನ್ 22)ನಡೆದ ಈ ಕಾರ್ಯಕ್ರಮ, ಮುಂಬೈನಾದ್ಯಂತ ಹಿಂದುಳಿದ ಸಮುದಾಯಗಳ ಮಕ್ಕಳಿಗೆ ವಿನೋದ, ಕ್ರೀಡೆಗಳು ಮತ್ತು ಶೈಕ್ಷಣಿಕ ಚಟುವಟಿಕೆಗಳಿಂದ ಕೂಡಿತ್ತು. ಈ ಮೂಲಕ ಸ್ನೇಹ, ಶ್ರೇಷ್ಠತೆ, ಗೌರವ ಮುಂತಾದ ಒಲಿಂಪಿಕ್ ಮೌಲ್ಯಗಳನ್ನು ಸಾರಲಾಯಿತು.

ಆರು ಬಾರಿಯ ವಿಂಟರ್ ಒಲಿಂಪಿಯನ್ ಶಿವ ಕೇಶವನ್ ಅವರೊಂದಿಗಿನ ಭೇಟಿ ಮತ್ತು ಶುಭಾಶಯ ಸಭೆಯು ಈ ಕಾರ್ಯಕ್ರಮದ ಪ್ರಮುಖ ಭಾಗವಾಗಿತ್ತು. ಈ ವೇಳೆ ಅವರು ತಮ್ಮ ಅನುಭವಗಳನ್ನು ಹಂಚಿಕೊಂಡರು ಮತ್ತು ಮಕ್ಕಳಿಗೆ ಶ್ರೇಷ್ಠತೆ, ಗೌರವ ಮತ್ತು ಸ್ನೇಹದಂಥ ಪ್ರಮುಖ ಒಲಿಂಪಿಕ್ ಮೌಲ್ಯಗಳ ಪ್ರಾಮುಖ್ಯತೆಯನ್ನು ಒತ್ತಿ ಹೇಳಿದರು. ಕೇಶವನ್ ಅವರು ಮಕ್ಕಳೊಂದಿಗೆ ವಿಶೇಷ ಮೂವ್ ಆಂಡ್ಗ್ರೂವ್ ಅಧಿವೇಶನದಲ್ಲೂ ಭಾಗವಹಿಸಿದರು.

ಈ ಕಾರ್ಯಕ್ರಮ ಮಕ್ಕಳನ್ನು ಸಕ್ರಿಯ ಜೀವನಶೈಲಿಯನ್ನು ಅಳವಡಿಸಿಕೊಳ್ಳಲು ಮತ್ತು ಅದರ ಮಹತ್ವವನ್ನು ಗುರುತಿಸಲು ಪ್ರೇರೇಪಿಸುವ ಗುರಿಯನ್ನು ಹೊಂದಿದೆ. ರಿಲಯನ್ಸ್ ಸಂಸ್ಥೆಯ 200ಕ್ಕೂ ಅಧಿಕ ಉದ್ಯೋಗಿಗಳು ಸ್ವಯಂಪ್ರೇರಿತರಾಗಿ ಬ್ಯಾಸ್ಕೆಟ್ಬಾಲ್, ಫುಟ್ಬಾಲ್ ಶೂಟೌಟ್ಗಳು, ವಾಕಿಂಗ್ ರೇಸ್ಗಳು ಮತ್ತು ಫಿಟ್ನೆಸ್ ಸೆಷನ್ಗಳಂಥ ವಿವಿಧ ಕ್ರೀಡಾ ಕೇಂದ್ರಗಳ ಹಾಗೂ ಚಿತ್ರಕಲೆ ಮತ್ತು ಕಲಾ ಚಟುವಟಿಕೆಗಳ ಮೇಲ್ವಿಚಾರಣೆ ನೋಡಿಕೊಂಡರು. ಈ ಅವಧಿಗಳನ್ನು ಮಕ್ಕಳಲ್ಲಿ ದೈಹಿಕ ಚಲನೆ ಮತ್ತು ಚಟುವಟಿಕೆಯ ಪ್ರಾಮುಖ್ಯತೆಯನ್ನು ತುಂಬಲು ವಿನ್ಯಾಸಗೊಳಿಸಲಾಗಿತ್ತು. ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಲು ಅವರನ್ನು ಪ್ರೇರೇಪಿಸಿತು.

ಈ ಅಭಿಯಾನದ ಕುರಿತು ಮಾತನಾಡಿದ ಕೇಶವನ್, ಭಾರತದಲ್ಲಿ ಒಲಿಂಪಿಕ್ ಆಂದೋಲನದ ಬೆಳವಣಿಗೆಯನ್ನು ಬೆಂಬಲಿಸುವಲ್ಲಿ ರಿಲಯನ್ಸ್ ಫೌಂಡೇಶನ್ ಯಾವಾಗಲೂ ಮುಂದಾಳತ್ವ ವಹಿಸಿದೆ. ಲೆಟ್ಸ್ ಮೂವ್ಮಕ್ಕಳು ದೈಹಿಕವಾಗಿ ಸಕ್ರಿಯವಾಗಿರುವುದರ ಪ್ರಯೋಜನಗಳನ್ನು ಅರ್ಥಮಾಡಿಕೊಳ್ಳಲು ಸಹಾಯ ಮಾಡುವ ಉತ್ತಮ ಮಾರ್ಗವಾಗಿದೆ. ಮಕ್ಕಳು ಅತ್ಯಂತ ಉತ್ಸಾಹಭರಿತರಾಗಿದ್ದರು ಮತ್ತು ಅವರ ಉತ್ಸಾಹ ಮತ್ತು ಶಕ್ತಿಯು ಸರ್ವವ್ಯಾಪಿಯಾಗಿತ್ತು. ಅವರು ಬಹಳಷ್ಟು ಪ್ರಶ್ನೆಗಳನ್ನು ಹೊಂದಿದ್ದರು ಮತ್ತು ಈ ಅನುಭವದಿಂದ ಬಹಳಷ್ಟು ಕಲಿಯುತ್ತಾರೆ. ಒಲಿಂಪಿಯನ್ ಆಗಿ ನಾನು ಒಲಿಂಪಿಕ್ ಮೌಲ್ಯಗಳು ನನ್ನ ಹೃದಯಕ್ಕೆ ಬಹಳ ಹತ್ತಿರವಾಗಿವೆ ಮತ್ತು ಅವುಗಳು ತಮ್ಮ ಜೀವನದಲ್ಲಿ ಮಕ್ಕಳಿಗೆ ಉತ್ತಮವಾಗಿ ಸೇವೆ ಸಲ್ಲಿಸುವ ಮೌಲ್ಯಗಳಾಗಿವೆ. ಈ ಮಕ್ಕಳಲ್ಲಿ ಕೆಲವರು ಕ್ರೀಡೆಗಳನ್ನು ಸಕ್ರಿಯವಾಗಿ ತೊಡಗಿಸಿಕೊಳ್ಳಲು ಸ್ಫೂರ್ತಿ ಪಡೆದಿದ್ದಾರೆ ಮತ್ತು ಬಹುಶಃ ಅದರಲ್ಲಿ ವೃತ್ತಿಜೀವನವನ್ನು ಮುಂದುವರಿಸಬಹುದು ಎಂದು ನಾನು ಭಾವಿಸುತ್ತೇನೆ ಎಂದರು.

ಐಒಸಿಯ ಡಿಜಿಟಲ್ ಎಂಗೇಜ್ಮೆಂಟ್ ಮತ್ತು ಮಾರ್ಕೆಟಿಂಗ್ ನಿರ್ದೇಶಕ ಲಿಯಾಂಡ್ರೊ ಲಾರೋಸಾ, ಭಾರತದಲ್ಲಿ ಲೆಟ್ಸ್ ಮೂವ್ ಅಭಿಯಾನಕ್ಕೆ ಸಹಕರಿಸಿದ್ದಕ್ಕಾಗಿ ರಿಲಯನ್ಸ್ ಫೌಂಡೇಶನ್ಗೆ ಧನ್ಯವಾದಗಳು ಮತ್ತು ಯುವಜನರು ಒಲಿಂಪಿಯನ್ರನ್ನು ಭೇಟಿ ಮಾಡಲು ಮತ್ತು ಕಲಿಯಲು ಈ ಅವಕಾಶವನ್ನು ಸೃಷ್ಟಿಸಿದ್ದಾರೆ. ಈ ಅಭಿಯಾನವು ಪ್ಯಾರಿಸ್ 2024ಕ್ಕೆ ಜಗತ್ತು ಅಣಿಯಾಗುತ್ತಿರುವಾಗ ಸಂತೋಷ ಮತ್ತು ಸಕ್ರಿಯ ಜೀವನಶೈಲಿಯನ್ನು ಸ್ವೀಕರಿಸಲು ಜನರನ್ನು ಪ್ರೋತ್ಸಾಹಿಸುವ ಬಗ್ಗೆ ಮತ್ತು ಇದು ಭಾರತದ ಹೆಚ್ಚಿನ ಮಕ್ಕಳನ್ನು ಕ್ರೀಡೆಯ ಮೋಜಿಗೆ ಸೇರಲು ಪ್ರೇರೇಪಿಸುತ್ತದೆ ಎಂದು ನಾವು ಭಾವಿಸುತ್ತೇವೆ ಎಂದರು.

ಲೆಟ್ಸ್ ಮೂವ್ ಇಂಡಿಯಾ ಅಭಿಯಾನದ ಮೂಲಕ, ರಿಲಯನ್ಸ್ ಫೌಂಡೇಶನ್ ಮುಂಬರುವ ವಾರಗಳಲ್ಲಿ ಭಾರತದ ಅನೇಕ ನಗರಗಳಲ್ಲಿ ಹಿಂದುಳಿದ ಸಮುದಾಯಗಳ 10,000 ಮಕ್ಕಳಲ್ಲಿ ಒಳಗೊಳ್ಳುವಿಕೆ, ಅಭಿವೃದ್ಧಿ ಮತ್ತು ದೈಹಿಕ ಚಟುವಟಿಕೆಯ ಪ್ರಾಮುಖ್ಯತೆಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ. ಈ ಅಭಿಯಾನದ ಆಯೋಜನೆಯನ್ನು ರಿಲಯನ್ಸ್ ಉದ್ಯೋಗಿಗಳಾಗಿರುವ 500 ಸ್ವಯಂಸೇವಕರು ಸುಗಮಗೊಳಿಸಿದರು. ಅವರು ಆರೋಗ್ಯಕರ ಜೀವನಶೈಲಿಯನ್ನು ಪ್ರೋತ್ಸಾಹಿಸಲು ಮತ್ತು ಈ ಮಕ್ಕಳಲ್ಲಿ ಧನಾತ್ಮಕ ಬೆಳವಣಿಗೆಯನ್ನು ಉತ್ತೇಜಿಸಲು ಕೆಲಸ ಮಾಡುತ್ತಾರೆ.



## ವಿಶ್ವ ವಿಟಲಿಗೋ ದಿನ




ವಿಶ್ವ ವಿಟಲಿಗೋ ದಿನವು ಜೂನ್ 25 ರಂದು ನಡೆಯುತ್ತದೆ. ವಿಟಲಿಗೋ ಒಂದು ಚರ್ಮದ ಕಾಯಿಲೆಯಾಗಿದ್ದು ಅದು ಜನಸಂಖ್ಯೆಯ 1% ರಿಂದ 2% ರಷ್ಟು ಪರಿಣಾಮ ಬೀರುತ್ತದೆ. ಇದು ಜೀವಿತಾವಧಿಯ ಅಸ್ವಸ್ಥತೆಯಾಗಿದ್ದು ಅದು ದೇಹದ ವಿವಿಧ ಪ್ರದೇಶಗಳಲ್ಲಿನ ತೇಪೆಗಳ ಬಣ್ಣವನ್ನು ಉಂಟುಮಾಡುತ್ತದೆ ಮತ್ತು ಚರ್ಮದ ಬಣ್ಣವನ್ನು ಸಂಪೂರ್ಣವಾಗಿ ಕಳೆದುಕೊಳ್ಳುತ್ತದೆ. ಕೂದಲು ಅಕಾಲಿಕವಾಗಿ ಬೂದು ಅಥವಾ ಬಿಳಿ ಬಣ್ಣಕ್ಕೆ ತಿರುಗುವುದು ಮತ್ತು ರೆಪ್ಪೆಗೂದಲು ಅಥವಾ ಹುಬ್ಬುಗಳು ಬಣ್ಣವನ್ನು ಕಳೆದುಕೊಳ್ಳುವುದು ಮತ್ತು ಬಿಳಿಯಾಗುವುದು ಇತರ ರೋಗಲಕ್ಷಣಗಳು. ವಿಶ್ವ ವಿಟಲಿಗೋ ದಿನವನ್ನು ಮೊದಲು 2011 ರಲ್ಲಿ ಆಚರಿಸಲಾಯಿತು ಮತ್ತು ಇದನ್ನು Vitiligo ಜಾಗೃತಿ ದಿನ ಅಥವಾ Vitiligo ಪರ್ಪಲ್ ಫನ್ ಡೇ ಎಂದೂ ಕರೆಯಲಾಗುತ್ತದೆ, ಏಕೆಂದರೆ ನೇರಳೆ ಸ್ಥಿತಿಯನ್ನು ಪ್ರತಿನಿಧಿಸುವ ಅಧಿಕೃತ ಬಣ್ಣವಾಗಿದೆ.

ವಿಟಲಿಗೋವನ್ನು ಪ್ರತಿಯೊಂದು ಪ್ರಮುಖ ಧರ್ಮದ ಪಠ್ಯದಲ್ಲಿ ಉಲ್ಲೇಖಿಸಲಾಗಿದೆ ಮತ್ತು ಅದರ ಮೊದಲ ವಿವರಣೆಯು 3,000 ವರ್ಷಗಳಿಗಿಂತಲೂ ಹಿಂದಿನದು. 19 ನೇ ಶತಮಾನದ ಅಂತ್ಯವು ವಿಟಲಿಗೋವನ್ನು ಅರ್ಥಮಾಡಿಕೊಳ್ಳುವ ವಿಷಯದಲ್ಲಿ ಹೆಚ್ಚಿನ ಪ್ರಗತಿಯ ಸಮಯವಾಗಿತ್ತು. ಭಾವನಾತ್ಮಕ ಒತ್ತಡದ ಕಂತುಗಳು ವಿಟಲಿಗೋದ ಉಲ್ಬಣಕ್ಕೆ ಕಾರಣವಾಗುತ್ತವೆ ಎಂದು ವೈದ್ಯರು ಗಮನಿಸಿದರು. ಆಗ ಲಭ್ಯವಿರುವ ಯಾವುದೇ ಚಿಕಿತ್ಸೆಗಳು ರೋಗದ ಮೇಲೆ ಹೆಚ್ಚು ಪರಿಣಾಮ ಬೀರಲಿಲ್ಲ ಎಂಬುದನ್ನು ಅವರು ಗಮನಿಸಿದರು. 1940 ರ ದಶಕದಲ್ಲಿ, ವಿಟಲಿಗೋ ಆನುವಂಶಿಕವಾಗಿರಬಹುದು ಎಂದು ಗಮನಿಸಲಾಯಿತು, ಏಕೆಂದರೆ ಅಸ್ವಸ್ಥತೆಯು ಕುಟುಂಬಗಳನ್ನು ಬಾಧಿಸಿತು.

ವಿಶ್ವ ವಿಟಲಿಗೋ ದಿನವನ್ನು ಮೊದಲು 2011 ರಲ್ಲಿ ನೈಜೀರಿಯಾದ ಲಾಗೋಸ್ನಲ್ಲಿ ಉದ್ಘಾಟನಾ ಕಾರ್ಯಕ್ರಮದೊಂದಿಗೆ ಆಚರಿಸಲಾಯಿತು. ಮೈಕೆಲ್ ಜಾಕ್ಸನ್ ಈ ಸ್ಥಿತಿಯಿಂದ ಬಳಲುತ್ತಿರುವ ಅತ್ಯಂತ ಪ್ರಸಿದ್ಧ ಸೆಲೆಬ್ರಿಟಿಗಳಲ್ಲಿ ಒಬ್ಬರು. ಅವರು ಜೂನ್ 25, 2009 ರಂದು ನಿಧನರಾದರು, ಆದ್ದರಿಂದ ಅವರ ಗೌರವಾರ್ಥವಾಗಿ ಜೂನ್ 25 ರಂದು ವಿಶ್ವ ವಿಟಲಿಗೋ ದಿನವನ್ನು ಆಚರಿಸಲಾಗುತ್ತದೆ. 2013 ರಲ್ಲಿ ವಿಶ್ವ ವಿಟಲಿಗೋ ದಿನವು ಅದರ ಪ್ರಧಾನ ಕಛೇರಿಯನ್ನು ರೋಮ್ನಿಂದ ಡೆಟ್ರಾಯಿಟ್ಗೆ ಬದಲಾಯಿಸಿತು. ಆಂದೋಲನವು ವರ್ಷಗಳಲ್ಲಿ ಸ್ಥಿರವಾಗಿ ಬೆಳೆದಿದೆ, ಬೆರಳೆಣಿಕೆಯ ಸ್ವಯಂಸೇವಕರಿಂದ 484,687 ಕಾರ್ಯಕರ್ತರು ಮತ್ತು 50+ ಚಿಕಿತ್ಸಾಲಯಗಳು 17 ದೇಶಗಳಲ್ಲಿ ಉಚಿತ ಚರ್ಮ ತಪಾಸಣೆಗಳನ್ನು ನೀಡುತ್ತಿವೆ. ಜಗತ್ತಿನಾದ್ಯಂತ ಅನೇಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಜಾಗೃತಿ ಅಭಿಯಾನದ ಇನ್ನೊಂದು ಭಾಗವು ವಿಟಲಿಗೋ ಹೊಂದಿರುವವರಿಗೆ ಅವರು ಹೊಂದಿರುವ ಯಾವುದೇ ಅಭದ್ರತೆಯನ್ನು ನಿವಾರಿಸಲು ಸಹಾಯ ಮಾಡುತ್ತದೆ. ಇವುಗಳನ್ನು ಸ್ಥಳೀಯ ಸಂಸ್ಥೆಗಳು ಆಯೋಜಿಸಿವೆ ಮತ್ತು ವೈಯಕ್ತಿಕವಾಗಿ ಮತ್ತು ಆನ್ಲೈನ್ನಲ್ಲಿ ನಡೆದಿವೆ. 2020 ರಲ್ಲಿ WVD ಚೀನಾದಲ್ಲಿ ಒಂದು ವೆಬ್ನಾರ್ ಅನ್ನು 5,51 ಮಿಲಿಯನ್ ಜನರು ವೀಕ್ಷಿಸಿದ್ದಾರೆ.

## ರಾಶಿ ಭವಿಷ್ಯ



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಯತ್ನ ಕಾರ್ಯಗಳಲ್ಲಿ ಜಯ, ಆರೋಗ್ಯದಲ್ಲಿ ಸಮಸ್ಯೆ, ತಿರುಗಾಟ, ನಾನಾ ರೀತಿಯ ಸಮಸ್ಯೆ, ಅಕಾಲ ಭೋಜನ.

**ವೃಷಭ:** ಮನಸ್ಸಿಗೆ ಚಿಂತೆ, ಹಣಕಾಸಿನ ತೊಂದರೆ, ವ್ಯಾಪಾರ ಉದ್ಯೋಗದಲ್ಲಿ ಅಲ್ಪ ಲಾಭ, ಪುಣ್ಯಕ್ಷೇತ್ರ ಯಾತ್ರೆ,

**ಮಿಥುನ:** ಕುಟುಂಬದಲ್ಲಿ ಪ್ರೀತಿ, ಕೃಷಿಯಲ್ಲಿ ಲಾಭ, ಉದ್ಯೋಗದಲ್ಲಿ ಪ್ರಗತಿ, ಹಿತ ಶತ್ರು ಭಾದೆ,

**ಕಟಕ:** ಮಾತಿಗೆ ಮರುಳಾಗದಿರಿ, ರೋಗಭಾದೆ, ಅನರ್ಥ, ದಿನಸಿ ವ್ಯಾಪಾರಿಗಳಿಗೆ ಲಾಭ.

**ಸಿಂಹ:** ಯಾರನ್ನು ಹೆಚ್ಚಾಗಿ ನಂಬಬೇಡಿ, ವಿದೇಶ ಪ್ರಯಾಣ, ಉದ್ಯೋಗದಲ್ಲಿ ಅಭಿವೃದ್ಧಿ, ನೂತನ ಕೆಲಸಗಳಲ್ಲಿ ಭಾಗಿ.

**ಕನ್ಯಾ:** ದಾನ ಧರ್ಮ ಮಾಡುವಿರಿ, ಉದರ ಭಾದೆ, ಮನಕ್ಲೇಶ, ಅನ್ಯರಿಂದ ಮನಸ್ತಾಪ, ನಂಬಿಕೆ ದ್ರೋಹ.

**ತುಲಾ:** ಅಮೂಲ್ಯ ವಸ್ತುಗಳ ಖರೀದಿ, ಸ್ವಯಂಕೃತ ಅಪರಾಧ, ಅಧಿಕ ಖರ್ಚು, ಸ್ನೇಹಿತರಿಂದ ವಂಚನೆ,

**ವೃಶ್ಚಿಕ:** ಖರ್ಚಿನ ಬಗ್ಗೆ ನಿಯಂತ್ರಣ ಅಗತ್ಯ, ದಿನಸಿ ವ್ಯಾಪಾರಿಗಳಿಗೆ ಲಾಭ. ವಿರೋಧಿಗಳಿಂದ ತೊಂದರೆ, ಆಲಸ್ಯ ಮನೋಭಾವ. ಅವಿವಾಹಿತರಿಗೆ ವಿವಾಹ ಯೋಗ.

**ಧನಸ್ಸು:** ಗುರಿ ಸಾಧಿಸಲು ಶ್ರಮಪಡುವಿರಿ, ಬಾಕಿ ವಸೂಲಿ, ಅಧಿಕ ತಿರುಗಾಟ, ನಿಮ್ಮ ಪ್ರಯತ್ನಗಳಿಗೆ ಫಲ.

**ಮಕರ:** ಅನ್ಯ ಜನರಲ್ಲಿ ಪ್ರೀತಿ, ಮಿತ್ರರ ಭೇಟಿ, ಮಾನಸಿಕ ಒತ್ತಡ, ನಾನಾ ರೀತಿಯ ಸಮಸ್ಯೆ, ಶೀತ ಸಂಬಂಧ ರೋಗ,

**ಕುಂಭ:** ಸ್ಥಿರಾಸ್ತಿ ಮಾರಾಟ, ವಿವಾದಗಳಿಂದ ದೂರವಿರಿ, ಹೊಸ ಪ್ರಯತ್ನ.

**ಮೀನ:** ಮಾಡುವ ಕೆಲಸದಲ್ಲಿ ಶ್ರದ್ಧೆ, ಷೇರು ವ್ಯವಹಾರಗಳಲ್ಲಿ ಲಾಭ, ಧನ ಲಾಭ, ಅವಿವಾಹಿತರಿಗೆ ವಿವಾಹ ಯೋಗ.ನಾನಾ ರೀತಿಯ ಸಮಸ್ಯೆ, ಮನಕ್ಲೇಶ, ಅನ್ಯರಿಂದ ಮನಸ್ತಾಪ,

## ಹಜ್ ಯಾತ್ರೆಯ ಸಂದರ್ಭ

# 1,300 ಮಂದಿ ಬಲಿ

**ರಿಯಾದ್** : ಈ ವರ್ಷದ ಹಜ್ ಯಾತ್ರೆಯ ಸಂದರ್ಭದಲ್ಲಿ ಬಿಸಿಲ ಬೇಗೆ ಹಾಗೂ ಶಾಖ ಸಂಬಂಧಿತ ಸಮಸ್ಯೆಗಳಿಂದ 1,300ಕ್ಕೂ ಅಧಿಕ ಹಜ್ ಯಾತ್ರಾರ್ಥಿಗಳು ಮೃತಪಟ್ಟಿದ್ದಾರೆ ಎಂದು ಸೌದಿ ಅರೇಬಿಯಾ ಸೋಮವಾರ ದೃಢಪಡಿಸಿದೆ. ಸಾವನ್ನಪ್ಪಿದವರಲ್ಲಿ ಅಮೆರಿಕ, ಇಂಡೋನೇಶ್ಯಾ, ಭಾರತ, ಈಜಿಪ್ಟ್, ಜೋರ್ಡಾನ್ ಸೇರಿದಂತೆ 10 ದೇಶಗಳ ಯಾತ್ರಾರ್ಥಿಗಳು ಸೇರಿದ್ದಾರೆ. 'ಈ ವರ್ಷ 1,75,000 ಭಾರತೀಯರು ಹಜ್ಗೆ ಭೇಟಿ ನೀಡಿದ್ದು ಯಾತ್ರೆಯ ಸಂದರ್ಭ ನೈಸರ್ಗಿಕ ಕಾರಣಗಳಿಂದ 98 ಭಾರತೀಯರು ಮರಣ ಹೊಂದಿದ್ದಾರೆ' ಎಂದು ಭಾರತದ ವಿದೇಶಾಂಗ ಇಲಾಖೆಯ ವಕ್ತಾರ ರಣಧೀರ್ ಜೈಸ್ವಾಲ್ ಕಳೆದ ವಾರ ಸುದ್ದಿಗೋಷ್ಠಿಯಲ್ಲಿ ಹೇಳಿದ್ದರು. ಹವಾಮಾನ ಬದಲಾವಣೆಯಿಂದ ಹಜ್ ಯಾತ್ರಾರ್ಥಿಗಳು ತೀವ್ರ ಪರಿಣಾಮ ಎದುರಿಸುತ್ತಿದ್ದಾರೆ. ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸುವ ಸ್ಥಳದಲ್ಲಿ ಪ್ರತೀ ದಶಕದಲ್ಲಿ 0.4 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ಏರಿದೆ ಎಂದು ಅಧ್ಯಯನ ವರದಿಯೊಂದು ಹೇಳಿದೆ.



# ಕಿಂಗ್ ಚಾರ್ಲ್ಸ್ ಸಹೋದರಿ ತಲೆಗೆ ಗಾಯ: ಆಸ್ಪತ್ರೆಗೆ ದಾಖಲು



ಕಿಂಗ್ ಚಾರ್ಲ್ಸ್ ಅವರ ಕಿರಿಯ ಸಹೋದರಿ ರಾಜಕುಮಾರಿ ಅನ್ನಿ ಅವರಿಗೆ ಆಘಾತವಾಗಿದ್ದು, ಆಸ್ಪತ್ರೆಯಲ್ಲಿದ್ದಾರೆ ಎಂದು ಬಕಿಂಗ್ಹ್ಯಾಮ್ ಅರಮನೆ ತಿಳಿಸಿದೆ.

ರಾಜಕುಮಾರಿ ಅನ್ನಿ ಸದ್ಯ ಚೇತರಿಸಿಕೊಳ್ಳುತ್ತಿದ್ದಾರೆ, ಆರಾಮದಾಯಕ ಸ್ಥಿತಿಯಲ್ಲಿದ್ದಾರೆ ಮತ್ತು ಹೆಚ್ಚಿನ ವೀಕ್ಷಣೆಗಾಗಿ ಮುನ್ನೆಚ್ಚರಿಕೆ ಕ್ರಮವಾಗಿ ಅವರನ್ನು ಆಸ್ಪತ್ರೆಯಲ್ಲಿ ಇರಿಸಲಾಗಿದೆ ಎಂದು ಬಕಿಂಗ್ಹ್ಯಾಮ್ ಅರಮನೆಯ ವಕ್ತಾರರು ತಿಳಿಸಿದ್ದಾರೆ.

ದಿವಂಗತ ರಾಣಿ ಎಲಿಜಬೆತ್ ಅವರ ಏಕೈಕ ಪುತ್ರಿಯಾಗಿರುವ 73 ವರ್ಷದ ಎಲಿಜಬೆತ್ ಅವರು ತಮ್ಮ ಮನೆ ಇರುವ ಗ್ಯಾಟ್ಕೊಂಬೆ ಪಾರ್ಕ್ ಎಸ್ಟೇಟ್ ಮೈದಾನದಲ್ಲಿ ನಡೆದುಕೊಂಡು ಹೋಗುತ್ತಿದ್ದಾಗ ಅವರ ತಲೆಗೆ ಸಣ್ಣ ಗಾಯಗಳಾಗಿವೆ ಎಂದು ರಾಜಮನೆತನದ ಮೂಲಗಳು ತಿಳಿಸಿವೆ.

ಆಸುಪಾಸಿನಲ್ಲಿ ಕುದುರೆಗಳಿದ್ದವು ಮತ್ತು ಕುದುರೆಯ ತಲೆ ಅಥವಾ ಕಾಲುಗಳಿಂದ ಅವರಿಗೆ ಗಾಯ ಆಗಿರಬಹುದು ಎಂದು ಅವರ ವೈದ್ಯಕೀಯ ತಂಡ ತಿಳಿಸಿದೆ ಎಂದು ಮೂಲಗಳು ತಿಳಿಸಿವೆ. 'ರಾಜನಿಗೆ ನಿಕಟ ಮಾಹಿತಿ ನೀಡಲಾಗಿದೆ ಮತ್ತು ರಾಜಕುಮಾರಿ ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಅವರ ಪ್ರೀತಿಯ ಪ್ರೀತಿ ಮತ್ತು ಶುಭಾಶಯಗಳನ್ನು ಕಳುಹಿಸುವಲ್ಲಿ ಇಡೀ ರಾಜಮನೆತನದೊಂದಿಗೆ ಸೇರಿಕೊಳ್ಳುತ್ತಾರೆ' ಎಂದು ಬಕಿಂಗ್ಹ್ಯಾಮ್ ಅರಮನೆಯ ಹೇಳಿಕೆ ತಿಳಿಸಿದೆ.

## ತೈವಾನ್ ಪ್ರತ್ಯೇಕತಾವಾದಿ ಶಿಕ್ಷಿಸಲು ಚೀನಾ ಎಚ್ಚರಿಕೆ

**ಬೀಜಿಂಗ್:** ತೈವಾನ್ ಸ್ವಾತಂತ್ರ್ಯವನ್ನು ಪ್ರತಿಪಾದಿಸುವ 'ಪ್ರತ್ಯೇಕತಾವಾದಿಗಳಿಗೆ' ಮರಣದಂಡನೆ ವಿಧಿಸುವ ಹೊಸ ಮಾರ್ಗಸೂಚಿಯನ್ನು ಜಾರಿಗೊಳಿಸುವುದಾಗಿ ಚೀನಾ ಎಚ್ಚರಿಕೆ ನೀಡಿದೆ. ತೈವಾನ್ನ ಅಧ್ಯಕ್ಷರಾಗಿ ಲಾಯ್ ಚಿಂಗ್ಟೆ ಅಧಿಕಾರ ಸ್ವೀಕರಿಸಿದಂದಿನಿಂದ ತೈವಾನ್ ವಿರುದ್ಧದ ಆಕ್ರಮಣಕಾರಿ ಉಪಕ್ರಮಗಳನ್ನು ಚೀನಾ ತೀವ್ರಗೊಳಿಸಿದ್ದು ಲಾಯ್ ಓರ್ವ ಪ್ರತ್ಯೇಕತಾವಾದಿ ಎಂದು ಟೀಕಿಸಿದೆ. ಚೀನಾದೊಂದಿಗೆ ತೈವಾನ್ ಮರುಏಕೀಕರಣವನ್ನು ಬೆಂಬಲಿಸದವರು ತೈವಾನ್ ಸ್ವಾತಂತ್ರ್ಯವನ್ನು ಬೆಂಬಲಿಸುವ ಪ್ರತ್ಯೇಕತಾವಾದಿಗಳೆಂದು ಪರಿಗಣಿಸಿ ಕಠಿಣ ಶಿಕ್ಷೆ ವಿಧಿಸಲಾಗುವುದು. ಔಪಚಾರಿಕ ಸ್ವಾತಂತ್ರ್ಯವನ್ನು ಘೋಷಿಸುವ ತೈವಾನ್ನ ಕ್ರಮವು ಆ ದ್ವೀಪದ ಮೇಲೆ ದಾಳಿ ನಡೆಸಲು ಸಕಾರಣವಾಗಲಿದೆ ಎಂದು ಎಂದು ಚೀನಾ ಶುಕ್ರವಾರ ಎಚ್ಚರಿಕೆ ನೀಡಿದೆ. ಇದಕ್ಕೆ ಪ್ರತಿಕ್ರಿಯೆ ನೀಡಿದ ತೈವಾನ್ ಅಧ್ಯಕ್ಷ ಲಾಯ್ ಚಿಂಗ್ಟೆ 'ರಿಪಬ್ಲಿಕ್ ಆಫ್ ಚೀನಾ(ತೈವಾನ್)ನ ಅಸ್ತಿತ್ವವನ್ನು ಪರಿಗಣಿಸಲು ಮತ್ತು ತೈವಾನ್ನ ಪ್ರಜಾಸತ್ತಾತ್ಮಕವಾಗಿ ಚುನಾಯಿತ ಕಾನೂನುಬದ್ಧ ಸರಕಾರದ ಜತೆ ಮಾತುಕತೆ ನಡೆಸುವಂತೆ' ಚೀನಾಕ್ಕೆ ಕರೆ ನೀಡುವುದಾಗಿ ಹೇಳಿದ್ದಾರೆ.

## ದೇಗುಲದ ಪ್ರಧಾನ ಅರ್ಚಕರ ಆತಂಕ!

# ಸೋರುತ್ತಿದೆ ಅಯೋಧ್ಯೆ ರಾಮಮಂದಿರದ ಗರ್ಭಗುಡಿ

**ಅಯೋಧ್ಯೆ:** ಜನವರಿ 22 ರಂದು ಪ್ರಾಣ ಪ್ರತಿಷ್ಠೆಯಾಗಿ ಲೋಕಾರ್ಪಣೆಯಾದ ಅಯೋಧ್ಯೆ ರಾಮಮಂದಿರದ ಮಾಳಿಗೆಯಲ್ಲಿ ನೀರು ಸೋರಿಕೆಯಾಗುತ್ತಿದೆ ಎಂದು ಮಂದಿರ ಪ್ರಧಾನ ಅರ್ಚಕ ಆಚಾರ್ಯ ಸತ್ಯೇಂದ್ರ ದಾಸ್ ಅವರು ಆತಂಕ ವ್ಯಕ್ತಪಡಿಸಿದ್ದಾರೆ.

ರಾಮ ಮಂದಿರವು ಸಾರ್ವಜನಿಕರ ಪ್ರವೇಶಕ್ಕೆ ಮುಕ್ತವಾದ ನಂತರದಲ್ಲಿ ಸುರಿದ ಮೊದಲ ಭಾರಿ ಮಳೆಯ ಸಂದರ್ಭದಲ್ಲಿ ಗರ್ಭಗುಡಿಯಲ್ಲಿ ನೀರು ಸೋರುತ್ತಿದೆ. ಮಂದಿರದ ನಿರ್ಮಾಣದ ವೇಳೆ ನಿರ್ಲಕ್ಷ್ಯ ವಹಿಸಲಾಗಿದೆ ಎಂದು ಆರೋಪಿಸಿದ್ದಾರೆ.

ಶನಿವಾರ ಮಧ್ಯರಾತ್ರಿ ಮಳೆ ಸುರಿಯಿತು, ಮಂದಿರದ ಆವರಣದಲ್ಲಿ ಬಿದ್ದ ಮಳೆನೀರು ಹರಿದುಹೋಗಲು ಸೂಕ್ತವಾದ ವ್ಯವಸ್ಥೆ ಇರಲಿಲ್ಲ, ಮಂದಿರದ ಆಡಳಿತದ ಹೊಣೆ ಹೊತ್ತಿರುವವರು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಮೇಲ್ಛಾವಣಿಯಿಂದ ನೀರು ಸೋರುತ್ತಿರುವ ಬಗ್ಗೆ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದಾಗ, ಮಂದಿರ ನಿರ್ಮಾಣ ಸಮಿತಿಯ ಅಧ್ಯಕ್ಷ ನೃಪೇಂದ್ರ ಮಿಶ್ರಾ ಅವರು ಮಂದಿರಕ್ಕೆ ಬಂದು ಮೇಲ್ಛಾವಣಿಯ ರಿಪೇರಿಗೆ ಸೂಚನೆ ನೀಡಿದರು ಎಂದು ಮೂಲಗಳು ಹೇಳಿವೆ.

ಮಂದಿರ ನಿರ್ಮಾಣದಲ್ಲಿ ಆಗಿರುವ ಪ್ರಗತಿಯ ಬಗ್ಗೆ ಸುದ್ದಿಗಾರರೊದಿಗೆ ಮಾತನಾಡಿದ ನೃಪೇಂದ್ರ ಮಿಶ್ರಾ ಅವರು, ಮೊದಲ ಮಹಡಿಯ ಕೆಲಸ ನಡೆಯುತ್ತಿದ್ದು, ಅದು ಜುಲೈ ಅಂತ್ಯದೊಳಗೆ ಮುಕ್ತಾಯ ಆಗಲಿದೆ ಎಂದರು. ಡಿಸೆಂಬರ್ ವೇಳೆಗೆ ಮಂದಿರದ ನಿರ್ಮಾಣ ಕಾರ್ಯವು ಪೂರ್ಣಗೊಳ್ಳಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.



ಮಂದಿರದ ಉದ್ಘಾಟನೆ ಆದ ನಂತರ ಶನಿವಾರ ರಾತ್ರಿ ಮೊದಲ ಬಾರಿಗೆ ಭಾರಿ ಮಳೆ ಸುರಿದಿದೆ. ಆಗ ಗರ್ಭಗುಡಿಯ ಮೇಲ್ಛಾವಣಿಯಿಂದ ದೊಡ್ಡ ಮಟ್ಟದಲ್ಲಿ ನೀರು ಸೋರುತ್ತಿತ್ತು. ಬಾಲರಾಮನ ಮುಂದೆ ಅರ್ಚಕರು ಕುಳಿತುಕೊಳ್ಳುವ ಸ್ಥಳದಲ್ಲಿ ಹಾಗೂ ಅತಿಗಣ್ಯ ವ್ಯಕ್ತಿಗಳು ದರ್ಶನಕ್ಕೆ ಬರುವ ಸ್ಥಳದಲ್ಲಿ ನೀರು ಸೋರುತ್ತಿತ್ತು ಎಂದು ಸತ್ಯೇಂದ್ರ ದಾಸ್ ತಿಳಿಸಿದ್ದಾರೆ.

ದೇಶದ ಎಲ್ಲೆಡೆಗಳಿಂದ ಬಂದಿರುವ ಎಂಜಿನಿಯರ್ಗಳು ರಾಮ ಮಂದಿರವನ್ನು ನಿರ್ಮಿಸುತ್ತಿದ್ದಾರೆ. ಜನವರಿ 22ರಂದು ಮಂದಿರ ಉದ್ಘಾಟನೆಯಾಗಿದೆ. ಆದರೆ ಮಳೆ ಸುರಿದಾಗ ಮೇಲ್ಛಾವಣಿಯಿಂದ ನೀರು ಸೋರುತ್ತದೆ ಎಂಬುದು ಯಾರಿಗೂ ತಿಳಿದಿರಲಿಲ್ಲ. ವಿಶ್ವವಿಖ್ಯಾತ ಮಂದಿರ ಸೋರುತ್ತಿರುವುದು ಆಶ್ಚರ್ಯಕರ. ಇದು ಆಗಿದ್ದು ಹೇಗೆ ಎಂದು ಅವರು ಪ್ರಶ್ನಿಸಿದ್ದಾರೆ.ಶನಿವಾರ ರಾತ್ರಿ ಸುರಿದ ಮಳೆಯ ಕಾರಣದಿಂದಾಗಿ ರಾಮಪಥ ರಸ್ತೆಯಲ್ಲಿ ಹಾಗೂ ಅದಕ್ಕೆ ಹೊಂದಿಕೊಂಡಿರುವ ಬೀದಿಗಳಲ್ಲಿ ನೀರು ಭಾರಿ ಪ್ರಮಾಣದಲ್ಲಿ ನಿಂತಿತ್ತು. ಈ ಪ್ರದೇಶದ ಮನೆಗಳಿಗೆ ಕೊಳಚೆ ನೀರು ನುಗ್ಗಿದೆ. ರಾಮಪಥ ರಸ್ತೆ ಹಾಗೂ ಹೊಸದಾಗಿ ನಿರ್ಮಿಸಲಾದ ಕೆಲವು ರಸ್ತೆಗಳು ಅಲ್ಲಲ್ಲಿ ಕುಸಿದಿವೆ.

ಮಂದಿರ ನಿರ್ಮಾಣದಲ್ಲಿ ಹಾಗೂ ಅಯೋಧ್ಯೆಯಲ್ಲಿ ನಾಗರಿಕ ಸೌಲಭ್ಯಗಳನ್ನು ಒದಗಿಸುವಲ್ಲಿ ಬಿಜೆಪಿಯು ಭ್ರಷ್ಟಾಚಾರ ಎಸಗಿದೆ ಎಂದು ಕಾಂಗ್ರೆಸ್ ಆರೋಪಿಸಿದೆ.

ಹುತಾತ್ಮರ ಶವಪೆಟ್ಟಿಗೆ ಇರಲಿ, ದೇವಸ್ಥಾನವೇ ಇರಲಿ ಬಿಜೆಪಿಗೆ ಇವೆಲ್ಲವೂ ಭ್ರಷ್ಟಾಚಾರ ಎಸಗಲು ಒಂದು ಅವಕಾಶವಾಗಿ ಸಿಗುತ್ತವೆ. ನಂಬಿಕೆ ಮತ್ತು ಪಾವಿತ್ರ್ಯದ ಸಂಕೇತಗಳು ಕೂಡ ಅವರಿಗೆ ಲೂಟಿ ಮಾಡಲು ಒಂದು ಅವಕಾಶ' ಎಂದು ಉತ್ತರ ಪ್ರದೇಶ ಕಾಂಗ್ರೆಸ್ ಮುಖ್ಯಸ್ಥ ಅಜಯ್ ರಾಯ್ ದೂರಿದ್ದಾರೆ

## ಲಾಟರಿ ಗೆದ್ದ ಖುಷಿಯಲ್ಲೇ ಪ್ರಾಣ ಬಿಟ್ಟ ನತದೃಷ್ಟ

**ಸಿಂಗಾಪುರ :** ಕೆಲವು ಸಾರಿ ಅದೃಷ್ಟ ಹುಡುಕಿಕೊಂಡು ಬಂದರು ಅದನ್ನು ಅನುಭವಿಸುವ ಯೋಗ ಎಲ್ಲರಿಗೂ ಇರುವುದಿಲ್ಲ. ಇದಕ್ಕೆ ತಾಜಾ ಉದಾಹರಣೆ ಎಂದರೆ ಸಿಂಗಾಪುರದಲ್ಲಿ ನಡೆದಿರುವ ಘಟನೆ. ಹೌದು, ಕ್ಯಾಸಿನೋದಲ್ಲಿ 30 ಕೋಟಿ ಗೆದ್ದ ವ್ಯಕ್ತಿ ಖುಷಿಯಿಂದ ಹೃದಯಾಘಾತವಾಗಿ ಸಾವನ್ನಪ್ಪಿದ್ದಾನೆ. ಸಿಂಗಾಪುರದ ಬೇ ಸ್ಯಾಂಡ್ ಕಾಸಿನೋದಲ್ಲಿ ಈ ಘಟನೆ ನಡೆದಿದೆ. ಲಾಟರಿ ಹೊಡೆದ ವಿಚಾರ ತಿಳಿಯುತ್ತಿದ್ದಂತೆ ವ್ಯಕ್ತಿ ಕುಸಿದು ಬಿದ್ದು ಸಾವನ್ನಪ್ಪಿದ ದೃಶ್ಯ ಕ್ಯಾಮರಾಗಳಲ್ಲಿ ಸೆರೆ ಆಗಿದ್ದು, ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಸಿಂಗಾಪುರದ ಮರೀನಾ ಬೇ ಸ್ಯಾಂಡ್ಸ್ ಕ್ಯಾಸಿನೋದಲ್ಲಿ ಘಟನೆ ನಡೆದಿದ್ದು, ಇದು ಖುಷಿಯ ಸಮಯವನ್ನು ಕ್ಷಣದಲ್ಲೇ ಶೋಕಕ್ಕೆ ತಿರುಗಿಸಿದೆ. 30 ಕೋಟಿ ಮೊತ್ತದ ಲಾಟರಿಯನ್ನು ವ್ಯಕ್ತಿಯೊಬ್ಬರು ಗೆದ್ದಿದ್ದು, ಇದಾಗಿ ಸ್ವಲ್ಪ ಹೊತ್ತಿನಲ್ಲಿ ಉದ್ವೇಗ ತಡೆಯಲಾಗದೇ ಅವರು ಹೃದಯಾಘಾತಕ್ಕೆ ಒಳಗಾಗಿದ್ದಾರೆ. ಎಲ್ಲರೂ ಖುಷಿಯ ಕ್ಷಣವನ್ನು ಸೆಲೆಬ್ರೇಷನ್ ಮಾಡುತ್ತಿದ್ದರೆ ಈತ ಮಾತ್ರ ಒಮ್ಮೆಗೆ ಬಂದ ಖುಷಿಯನ್ನು ಅರಗಿಸಿಕೊಳ್ಳಲಾಗದೇ ಪ್ರಾಣ ಬಿಟ್ಟಿದ್ದಾರೆ.

## ರಷ್ಯಾದ ಚರ್ಚ್ ಮೇಲೆ ಭಯೋತ್ಪಾದಕ ದಾಳಿ

ರಷ್ಯಾದಲ್ಲಿ ಚರ್ಚ್ ಮತ್ತು ಯಹೂದಿಗಳ ಪ್ರಾರ್ಥನಾ ಮಂದಿರದ ಮೇಲೆ ದಾಳಿ ನಡೆಸಿದ್ದು, 15 ಪೊಲೀಸರು ಸೇರಿ, ಹಲವರು ಸಾವಿಗೀಡಾಗಿದ್ದಾರೆ. ಉಗ್ರರು ಈ ದಾಳಿ ನಡೆಸಿದ ಹಿನ್ನೆಲೆ ಈ ಅನಾಹುತವಾಗಿದ್ದು, ಚರ್ಚ್ಗೆ ಬಂದಿದ್ದ ಭಕ್ತರ ಮೇಲೆ ಹಿಗ್ಗಾಮುಗ್ಗಾ ಗುಂಡಿನ ದಾಳಿ ನಡೆಸಿದ್ದಾರೆ. ಅಲ್ಲದೇ ಪೊಲೀಸ್ ಸ್ಟೇಷನ್ ಮೇಲೂ ದಾಳಿಗಳಾಗಿದೆ. ಹೀಗಾಗಿ 15 ಜನ ಪೊಲೀಸರು ಸೇರಿ, ಹಲವರು ಸಾವನ್ನಪ್ಪಿದ್ದು, 13ಕ್ಕೂ ಹೆಚ್ಚು ಜನರಿಗೆ ಗಂಭೀರ ಗಾಯಗಳಾಗಿದೆ. ಅವರನ್ನು ಹತ್ತಿರದ ಆಸ್ಪತ್ರೆಗೆ ಸೇರಿಸಿ, ಚಿಕಿತ್ಸೆ ಕೊಡಿಸಲಾಗುತ್ತಿದೆ. ಅಲ್ಲದೇ, ಈ ಘಟನೆ ನಡೆಯುವಾಗ, ಪೊಲೀಸರು ನಡೆಸಿದ ಪ್ರತಿದಾಳಿಯಲ್ಲಿ ಇಬ್ಬರು ದಾಳಿಕೋರರು ಸಾವನ್ನಪ್ಪಿದ್ದಾರೆ. ಕಳೆದ ನಾಲ್ಕು ತಿಂಗಳಲ್ಲಿ ರಷ್ಯಾದ ಸಾರ್ವಜನಿಕ ಸ್ಥಳದಲ್ಲಿ ಉಗ್ರರಿಂದ ಎರಡನೇಯ ಬಾರಿ ನಡೆದ ದಾಳಿ ಇದಾಗಿದ್ದು, ಈ ದಾಳಿಗೆ ಕಾರಣ, ಉಕ್ರೇನ್. ಉಕ್ರೇನ್ ರಷ್ಯಾದಲ್ಲಿ ಅಶಾಂತಿ ಹುಟ್ಟಿಸಲು ಕಾರಣವಾಗಿದೆ ಎಂದು ರಷ್ಯಾ ಅಧ್ಯಕ್ಷ ಪುಟೀನ್ ಆರೋಪಿಸಿದ್ದಾರೆ.

## ಬಿಜೆಪಿ ಜೊತೆಗಿನ ಸಂಬಂಧಕ್ಕೆ 'ಎಳ್ಳು ನೀರು' ಬಿಟ್ಟ ಬಿಜೆಡಿ!

**ಒಡಿಶಾ:** ಒಡಿಶಾದಲ್ಲಿ ಹಲವು ವರ್ಷಗಳಿಂದ ಬಿಜೆಪಿಯನ್ನು ಬೆಂಬಲಿಸಿಕೊಂಡು ಬರುತ್ತಿದ್ದ ಬಿಜು ಜನತಾ ದಳ, ವಿಧಾನಸಭೆ ಚುನಾವಣೆಯಲ್ಲಿ ಸೋಲಿನ ನಂತರ ಕೇಸರಿ ಜೊತೆಗಿನ ಸಂಬಂಧಕ್ಕೆ ಎಳ್ಳು ನೀರು ಬಿಟ್ಟು, ಪ್ರಬಲ ವಿರೋಧ ಪಕ್ಷವಾಗಿ ಕೆಲಸ ಮಾಡುವುದಾಗಿ ಘೋಷಿಸಿದೆ. ಸೋಮವಾರ ಪಕ್ಷದ ಒಂಬತ್ತು ರಾಜ್ಯಸಭಾ ಸಂಸದರೊಂದಿಗೆ ಸಭೆ ನಡೆಸಿದ ಬಿಜೆಡಿ ಅಧ್ಯಕ್ಷ ನವೀನ್ ಪಟ್ನಾಯಕ್, ಜೂನ್ 27 ರಂದು ಪ್ರಾರಂಭವಾಗುವ ಸಂಸತ್ತಿನ ಮುಂಬರುವ ಅಧಿವೇಶನದಲ್ಲಿ ಮೇಲ್ಮನೆಯಲ್ಲಿ ಪ್ರಬಲ ಪ್ರತಿಪಕ್ಷವಾಗಿ ಹೊರಹೊಮ್ಮುವಂತೆ ಸೂಚಿಸಿದರು. ರಾಜ್ಯದ ಹಿತಾಸಕ್ತಿಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಸೂಕ್ತವಾದ ರೀತಿಯಲ್ಲಿ ಪ್ರಸ್ತಾಪಿಸಲು ಸಂಸದರಿಗೆ ಹೇಳಿದ್ದಾರೆ.

# ಓಂ ಬಿರ್ಲಾ ಮುಂದುವರಿಕೆಗೆ ವಿಪಕ್ಷಗಳ ವಿರೋಧ

**ನವದೆಹಲಿ:** 18ನೇ ಲೋಕಸಭೆಯ ಸ್ಪೀಕರ್ ಹುದ್ದೆಗೆ ಇಂದು ಅಭ್ಯರ್ಥಿಗಳ ನಾಮನಿರ್ದೇಶನ ನಡೆಯಲಿದ್ದು, ಬಿಜೆಪಿ ನೇತೃತ್ವದ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (ಎನ್ಡಿಎ) ತನ್ನ ಅಭ್ಯರ್ಥಿಯನ್ನು ಘೋಷಿಸುವ ನಿರೀಕ್ಷೆಯಿದೆ.



ಮೂಲಗಳ ಪ್ರಕಾರ ಹಿಂದಿನ ಲೋಕಸಭೆಯಲ್ಲಿ ಸ್ಪೀಕರ್ ಆಗಿದ್ದ ಓಂ ಬಿರ್ಲಾ ಅವರನ್ನು ಸ್ಪೀಕರ್ ಸ್ಥಾನಕ್ಕೆ ಒಮ್ಮತದ ಅಭ್ಯರ್ಥಿಯಾಗಿ ಎನ್ಡಿಎ ಸೂಚಿಸಿದೆ ಆದರೆ ವಿರೋಧ ಪಕ್ಷಗಳಿಂದ ಬೆಂಬಲ ಸಿಗುತ್ತಿಲ್ಲ. ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಮೂರನೇ ಅವಧಿಯ ನಿರಂತರತೆಯ ಥೀಮ್ಗೆ ಅನುಗುಣವಾಗಿ ಬಿರ್ಲಾ ಮೊದಲ ಆಯ್ಕೆಯಾಗಿದ್ದಾರೆ ಎನ್ನಲಾಗಿದೆ. ಒಮ್ಮತದ ಅಭ್ಯರ್ಥಿ ಕುರಿತು ಎನ್ಡಿಎ ಕಡೆಯಿಂದ ಇನ್ನೂ ಯಾವುದೇ ಅಧಿಕೃತ ಹೇಳಿಕೆ ಹೊರಬಿದ್ದಿಲ್ಲ. ಇನ್ನೂ ಮೂವರ ಹೆಸರುಗಳನ್ನು ಪರಿಗಣಿಸಲಾಗುತ್ತಿದೆ ಎಂದು ಬಿಜೆಪಿ ಮೂಲಗಳು ತಿಳಿಸಿವೆ. ''ಎಲ್ಲವೂ ಅಂದುಕೊಂಡಂತೆ ನಡೆದರೆ ಮತ್ತು ಪ್ರತಿಪಕ್ಷಗಳು ಓಂ ಬಿರ್ಲಾ ಅವರ ಮುಂದುವರಿಕೆಯನ್ನು ವಿರೋಧಿಸದಿದ್ದರೆ, ಬಿರ್ಲಾ ಅವರ ಮುಂದುವರಿಯುವ ಸಾಧ್ಯತೆ ಹೆಚ್ಚಿದೆ. ಭಿನ್ನಾಭಿಪ್ರಾಯವಿದ್ದಲ್ಲಿ ಬಿಜೆಪಿಯ ಪೂರ್ವ ಚಂಪಾರಣ್ (ಬಿಹಾರ) ಸಂಸದ ರಾಧಾ ಮೋಹನ್ ಸಿಂಗ್ ಅಥವಾ ಪಾಲಿ ಕ್ಷೇತ್ರದ ಸಂಸದ ಪಿಪಿ ಚೌಧರಿ ಅವರನ್ನು ಸ್ಪೀಕರ್ ಹುದ್ದೆಗೆ ಎನ್ಡಿಎ ಅಭ್ಯರ್ಥಿಯನ್ನಾಗಿ ಘೋಷಿಸಬಹುದು ಎಂದು ಬಿಜೆಪಿಯ ಉನ್ನತ ಮೂಲಗಳು ತಿಳಿಸಿವೆ.

ಆಂಧ್ರದ ಬಿಜೆಪಿ ಮುಖ್ಯಸ್ಥೆ ದಗ್ಗುಬಾಟಿ ಪುರಂದೇಶ್ವರಿ ಅವರ ಹೆಸರು ಕೂಡ ಕೇಳಿಬರುತ್ತಿದೆ. ಚೌಧರಿ ಅವರು ಹಿರಿಯ ವಕೀಲರು ಮತ್ತು ಜನ ವಿಶ್ವಾಸ್ ಬಿಲ್ 2022 ರ ಸಂಸದೀಯ ಸ್ಥಾಯಿ ಸಮಿತಿಯ ಅಧ್ಯಕ್ಷರೂ ಆಗಿದ್ದಾರೆ. ಅವರು ಈ ಹಿಂದೆ 2019 ರಲ್ಲಿ ಕಾನೂನು ಮತ್ತು ನ್ಯಾಯ ಸಚಿವಾಲಯ ಹಾಗೂ 2017ರಲ್ಲಿ ಐಟಿ ಮತ್ತು ಎಲೆಕ್ಟ್ರಾನಿಕ್ಸ್ ಸಚಿವಾಲಯದ ರಾಜ್ಯ ಸಚಿವರೂ ಆಗಿ ಸೇವೆ ಸಲ್ಲಿಸಿದ್ದರು. ಅವರು 2015 ಮತ್ತು 2016 ರಲ್ಲಿ ಎರಡು ಬಾರಿ ಸಂಸತ್ ರತ್ನ ಪ್ರಶಸ್ತಿಯನ್ನು ಸಹ ಪಡೆದಿದ್ದರು.

18ನೇ ಲೋಕಸಭೆಯ ಸದಸ್ಯರಾಗಿ ಮೋದಿ, ಅಮಿತ್ ಶಾ ಸೇರಿ ಹಲವು ಸಚಿವರು, ಸಂಸದರಿಂದ ಪ್ರಮಾಣ ವಚನ ಸ್ವೀಕಾರ

ಚೌಧರಿ ಮತ್ತು ಸಿಂಗ್ ಇಬ್ಬರೂ ಸಂಸದೀಯ ವ್ಯವಹಾರಗಳಲ್ಲಿ ಅನುಭವಿಗಳು ಮತ್ತು ವಿರೋಧ ಪಕ್ಷಗಳೊಂದಿಗೆ ಬಾಂಧವ್ಯವನ್ನು ಹೊಂದಿದ್ದಾರೆ. ಪುರಂದೇಶ್ವರಿ ಟಿಡಿಪಿ ಮುಖ್ಯಸ್ಥ ಹಾಗೂ ಆಂಧ್ರ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರ ಸೊಸೆ. ಲೋಕಸಭೆ ಸ್ಪೀಕರ್ ಚುನಾವಣೆ ಜೂನ್ 26 ರಂದು ನಡೆಯಲಿದೆ.

## ಪತ್ರಕರ್ತನಿಗೆ 1 ಬಿಲಿಯನ್ ಮಾನನಷ್ಟ ನೋಟಿಸ್ ನೀಡಿದ 'ಬಾಬರ್ ಅಜಮ್'..!

**ಕರಾಚಿ:** 2024ರ ಟಿ20 ವಿಶ್ವಕಪ್ ವೇಳೆ ತನ್ನ ವಿರುದ್ಧ ಅನುಚಿತ ವರ್ತನೆ ತೋರಿದ ಪತ್ರಕರ್ತನ ವಿರುದ್ಧ ಪಾಕಿಸ್ತಾನ ಕ್ರಿಕೆಟ್ ತಂಡದ ನಾಯಕ 1 ಬಿಲಿಯನ್ ಪಿಕೆಆರ್ ಮಾನನಷ್ಟ ಮೊಕದ್ದಮೆ ಹೂಡಿದ್ದಾರೆ. ಯೂಟ್ಯೂಬರ್ಗಳು ಮತ್ತು ಮಾಜಿ ಕ್ರಿಕೆಟಿಗರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳುವ ಆಯ್ಕೆಯನ್ನು ಪರಿಗಣಿಸುವುದಾಗಿ ಅವರು ಆರಂಭದಲ್ಲಿ ಬೆದರಿಕೆ ಹಾಕಿದ ನಂತರ, ಪಾಕಿಸ್ತಾನ ನಾಯಕ ಅಂತಿಮವಾಗಿ ಈ ವಿಷಯದ ಬಗ್ಗೆ ಅಗತ್ಯ ಕ್ರಮಗಳನ್ನು ತೆಗೆದುಕೊಂಡಿದ್ದಾರೆ. ಮುಬಶೀರ್ ಲುಕ್ಮಾನ್ ಎಂಬ ಪತ್ರಕರ್ತ ಸಾಮಾಜಿಕ ಮಾಧ್ಯಮದಲ್ಲಿ ಮ್ಯಾಚ್ ಫಿಕ್ಸಿಂಗ್ ಬಗ್ಗೆ ವ್ಯಂಗ್ಯವಾಡಿದ ನಂತರ ಪಾಕಿಸ್ತಾನ ಬ್ಯಾಟ್ಸ್ಮನ್ 1 ಬಿಲಿಯನ್ ಪಿಕೆಆರ್ ಮೌಲ್ಯದ ನೋಟಿಸ್ ನೀಡಿದ್ದಾರೆ. ಆಡಿ ಇ-ಟ್ರಾನ್ ಮತ್ತು ಆಸ್ಟ್ರೇಲಿಯಾ ಮತ್ತು ದುಬೈನಲ್ಲಿ ಐಷಾರಾಮಿ ಅಪಾರ್ಟ್ಮೆಂಟ್ಗಳಂತಹ ದುಬಾರಿ ಉಡುಗೊರೆಗಳನ್ನು ಅಜಮ್ ಪಡೆದಿದ್ದಾರೆ ಎಂದು ಲುಕ್ಮನ್ ಆರೋಪಿಸಿದ್ದಾರೆ.

## ಗುಂಡಿನ ದಾಳಿಯಲ್ಲಿ ಭಾರತೀಯ ಸಾವು

**ಡಲ್ಲಾಸ್ (ಅಮೆರಿಕ):** ಇಲ್ಲಿನ ಪ್ಲೆಸೆಂಟ್ ಗ್ರೋವ್ ಎಂಬಲ್ಲಿ ಗ್ಯಾಸ್ ಸ್ಟೇಷನ್ ಕನ್ವೀನಿಯೆನ್ಸ್ ಸ್ಟೋರ್ ಮೇಲೆ ಡಕಾಯಿತರು ನಡೆಸಿದ ದಾಳಿಯಲ್ಲಿ ತೀವ್ರ ಗಾಯಗೊಂಡಿದ್ದ ಕ್ಯಾಷಿಯರ್ ಆಂಧ್ರಪ್ರದೇಶದ ಡಿ.ಗೋಪಿ ಕೃಷ್ಣ (32) ಮೃತಪಟ್ಟಿದ್ದಾರೆ. ಈ ದಾಳಿಯಲ್ಲಿ ಗೋಪಿಕೃಷ್ಣ ಅವರಿಗೆ ತೀರಾ ಸನಿಹದಿಂದ ಡಕಾಯಿತರು ಗುಂಡು ಹಾರಿಸಿದ್ದು ಸಿಸಿಟಿವಿ ದೃಶ್ಯಾವಳಿಯಿಂದ ತಿಳಿಯುತ್ತದೆ. ಇವರು ಆಂಧ್ರಪ್ರದೇಶದ ಬಾಪಟ್ಲ ಜಿಲ್ಲೆಯ ಕರ್ಲಪಮೇಂ ಮಂಡಲದ ಯಜಲಿಯವರು. ಕ್ಯಾಷ್ ಕೌಂಟರ್ ನಲ್ಲಿದ್ದ ಗೋಪಿಕೃಷ್ಣ ಮೇಲೆ ನಡೆದ ದಾಳಿಯಲ್ಲಿ ಅವರು ತೀವ್ರ ಗಾಯಗೊಂಡಿದ್ದರು. ಭಾರತದಲ್ಲಿ ಎಂಜಿನಿಯರಿಂಗ್ ಪದವಿ ಪೂರೈಸಿದ ಗೋಪಿ, ಸೂಕ್ತ ಉದ್ಯೋಗ ಹುಡುಕಾಟಕ್ಕೆ ಅಮೆರಿಕಕ್ಕೆ ಆಗಮಿಸಿ, ಸ್ಟೋರ್ ಕೌಂಟರ್ ನಲ್ಲಿ ಉದ್ಯೋಗ ಪಡೆದಿದ್ದರು. ದಾಳಿಯಲ್ಲಿ ತೀವ್ರ ಗಾಯಗೊಂಡಿದ್ದ ಅವರು ಆಸ್ಪತ್ರೆಯಲ್ಲಿ ಮೃತಪಟ್ಟರು. ಗೋಪಿಕೃಷ್ಣ ಅವರಿಗೆ ಪತ್ನಿ ಮತ್ತು ಒಂದೂವರೆ ವರ್ಷದ ಮಗು ಇದ್ದು, ಉದ್ಯೋಗ ಅರಸಿ ಎಂಟು ತಿಂಗಳ ಹಿಂದೆ ಅಮೆರಿಕಕ್ಕೆ ಆಗಮಿಸಿದ್ದರು. ಸಂಬಂಧಿಕರ ಮನೆಯಲ್ಲಿ ಉಳಿದುಕೊಂಡಿದ್ದರು ಎಂದು ಅವರ ನಿಕಟ ಸಂಬಂಧಿ ಡಿ.ಲಕ್ಷ್ಮಣ್ ಹೇಳಿದ್ದಾರೆ. ಗೋಪಿ ಅವರ ಮೃತದೇಹವನ್ನು ಅವರ ಹುಟ್ಟೂರಿಗೆ ಬುಧವಾರ ಒಯ್ಯಲಾಗುತ್ತದೆ. ಮೃತದೇಹವನ್ನು ಹುಟ್ಟೂರಿಗೆ ಒಯ್ಯಲು ಮತ್ತು ಇತರ ವೆಚ್ಚಗಳಿಗಾಗಿ ಅವರ ಸ್ನೇಹಿತ ಶ್ರೀಕಾಂತ್ ಅವರು ನಿಧಿಸಂಗ್ರಹದಲ್ಲಿ ತೊಡಗಿದ್ದಾರೆ. ಗೋಪಿ ಅತ್ಯಂತ ಕಾಳಜಿಯ, ಕಠಿಣ ಪರಿಶ್ರಮಿಯಾಗಿದ್ದರು. ಎಲ್ಲರ ಪ್ರೀತಿ ಸಂಪಾದಿಸಿದ್ದರು. ಸಾಕಷ್ಟು ನಿರೀಕ್ಷೆಗಳೊಂದಿಗೆ ಇಲ್ಲಿಗೆ ಆಗಮಿಸಿದ್ದರು ಎಂದು ಶ್ರೀಕಾಂತ್ ಹೇಳಿದ್ದಾರೆ.

## 11ನೇ ಮಗುವಿಗೆ ತಂದೆಯಾದ ಎಲಾನ್ ಮಸ್ಕ್..!



ಎಲಾನ್ ಮಸ್ಕ್... ವಿಶ್ವದ ನಂ. 01 ಶ್ರೀಮಂತ. ಈತ ಏನೇ ಮಾಡಿದರೂ ಅದು ಸೆನ್ಸೇಷನಲ್ ನ್ಯೂಸ್. ಒಂದಲ್ಲ ಒಂದು ವಿಷಯದ ಬಗ್ಗೆ ಸದಾ ಸುದ್ದಿಯಲ್ಲಿರುವ ಎಲಾನ್ ಮಸ್ಕ್ ಇದೀಗ ಮತ್ತೆ ಸದ್ದು ಮಾಡಿದ್ದಾರೆ. ವಿಶ್ವದ ಬಿಲಿಯನೇರ್, ಸ್ಪೇಸ್ ಎಕ್ಸ್ ಮತ್ತು ಟೆಸ್ಲಾ ಮುಖ್ಯಸ್ಥರೆಂದೇ ಖ್ಯಾತಿ ಪಡೆದಿರುವ ಎಲೋನ್ ಮಸ್ಕ್ ದುಡ್ಡಿನಲ್ಲಿ ಅಷ್ಟೇ ಅಲ್ಲ ಮಕ್ಕಳ ವಿಷಯದಲ್ಲೂ ಶ್ರೀಮಂತ ಎಂದೇ ಹೇಳಬಹುದು. ಈಗಾಗಲೇ ಹತ್ತು ಮಕ್ಕಳನ್ನು ಹೊಂದಿರುವ ಎಲಾನ್ ಮಸ್ಕ್ ಇದೀಗ 11 ನೇ ಮಗುವಿಗೆ ತಂದೆಯಾಗಿದ್ದಾರೆ. ಎಲಾನ್ಮಸ್ಕ್ ಅವರ ಮೊದಲ ಹೆಂಡತಿ, ಲೇಖಕ ಜಸ್ಟಿನ್ ಮಸ್ಕ್ಗೆ ಐದು ಮಕ್ಕಳಿಗೆ ಜನ್ಮ ನೀಡಿದ್ದರು. ನಂತರ ಇಬ್ಬರ ಮಧ್ಯೆ ಮನಸ್ತಾಪ ಉಂಟಾದ ಕಾರಣ ಇಬ್ಬರು ಬೇರ್ಪಟ್ಟಿದ್ದರು. ನಂತರ ಮಸ್ಕ್ ಸಂಗೀತಗಾರ್ತಿ ಗ್ರಿಮ್ಸ್ನೊಂದಿಗೆ ಡೇಟಿಂಗ್ ಮಾಡಿ ಮೂರು ಮಕ್ಕಳಿಗೆ ಜನ್ಮ ನೀಡಿದ್ರು. ಇದೀಗ ಎಲೋನ್ ಕಂಪನಿಯ ಉದೋಗಿಯಾದ ಶಿವೋನ್ ಜಿಲಿಸ್ ಅವರರೊಂದಿಗೆ ಸಂಬಂಧ ಹೊಂದಿದ್ದು, ಮೊದಲು ಅವಳಿ ಮಕ್ಕಳಿಗೆ ಜನ್ಮ ನೀಡಿದ್ದ ಮಸ್ಕ್ ಇದೀಗ ಮತ್ತೊಂದು ಮಗುವಿಗೆ ಜನ್ಮ ನೀಡಿದ್ದು. ಈ ವಿಷಯವನ್ನು ಎಲ್ಲೂ ಬಹಿರಂಗವಾಗಿಲ್ಲ.

## ಕೇರಳ ರಾಜ್ಯ ಇನ್ನು ಕೇರಳಂ

ಕೇರಳ ರಾಜ್ಯದ ಹೆಸರನ್ನು 'ಕೇರಳಂ' ಎಂದು ಬದಲಾಯಿಸುವಂತೆ ಕೇರಳ ವಿಧಾನಸಭೆ ಇಂದು ನಿರ್ಣಯವನ್ನು ಮರು ಅಂಗೀಕರಿಸಿತು. ಇಂದು ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಮಂಡಿಸಿದ ನಿರ್ಣಯದಲ್ಲಿ, ಸಂವಿಧಾನದ ಮೊದಲ ಅನುಸೂಚಿಯಲ್ಲಿ ರಾಜ್ಯದ ಹೆಸರನ್ನು ಅಧಿಕೃತವಾಗಿ 'ಕೇರಳಂ' ಎಂದು ಬದಲಾಯಿಸಲು ಸಂವಿಧಾನದ 3ನೇ ವಿಧಿಯ ಅಡಿಯಲ್ಲಿ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.



ಈ ಬಗ್ಗೆ ಒಂದು ವರ್ಷದ ಹಿಂದೆಯೇ ರಾಜ್ಯದ ಹೆಸರನ್ನು 'ಕೇರಳ'ದಿಂದ 'ಕೇರಳಂ' ಎಂದು ಬದಲಾಯಿಸಲು ಸಾಂವಿಧಾನಿಕ ತಿದ್ದುಪಡಿ ತರುವಂತೆ ಕೇಂದ್ರವನ್ನು ಒತ್ತಾಯಿಸುವ ನಿರ್ಣಯವನ್ನು ರಾಜ್ಯ ವಿಧಾನಸಭೆ ಸರ್ವಾನುಮತದಿಂದ ಅಂಗೀಕರಿಸಿತ್ತು. ಆದರೆ ಆ ನಿರ್ಣಯಕ್ಕೆ ಕೆಲ ತಿದ್ದುಪಡಿಗಳನ್ನು ಮಾಡುವಂತೆ ಸೂಚಿಸಿ ಕೇಂದ್ರ ಸರ್ಕಾರ ವಾಪಸ್ ಕಳುಹಿಸಿತ್ತು. ಅದರಂತೆ ಈಗ ಮತ್ತೊಮ್ಮೆ ಸಣ್ಣ ತಿದ್ದುಪಡಿಗಳೊಂದಿಗೆ ಅದೇ ನಿರ್ಣಯವನ್ನು ವಿಧಾನಸಭೆ ಅಂಗೀಕರಿಸಿದೆ. ಈ ನಿರ್ಣಯವನ್ನು ಈಗ ಅನುಮೋದನೆಗಾಗಿ ಕೇಂದ್ರಕ್ಕೆ ಕಳುಹಿಸಲಾಗುವುದು.

## ಭಾರತದಿಂದಾಗಿಯೇ ಶ್ರೀಲಂಕಾ ಆರ್ಥಿಕ ಬಿಕ್ಕಟ್ಟಿನಿಂದ ಹೊರಬಂದಿದೆ

ಕೊಲಂಬೊ (ಶ್ರೀಲಂಕಾ) – ಶ್ರೀಲಂಕಾ ಅಧ್ಯಕ್ಷ ರಾನಿಲ್ ವಿಕ್ರಮಸಿಂಘೆ ಅವರು ಮೊದಲ ಬಾರಿಗೆ ಭಾರತದ ನೆರವಿನಿಂದ ತಮ್ಮ ದೇಶವು ಎರಡು ವರ್ಷಗಳಲ್ಲಿನ ಅತ್ಯಂತ ಭೀಕರ ಆರ್ಥಿಕ ಬಿಕ್ಕಟ್ಟಿನಿಂದ ಹೊರಬಂದಿದೆ ಎಂದು ಒಪ್ಪಿಕೊಂಡಿದ್ದಾರೆ. ಇದೆಲ್ಲವೂ ಭಾರತದಿಂದ ಪಡೆದ 29 ಸಾವಿರ ಕೋಟಿ 247 ಕೋಟಿ (350 ಕೋಟಿ ಡಾಲರ್) ಆರ್ಥಿಕ ನೆರವಿನಿಂದ ಸಾಧ್ಯವಾಯಿತು. ಇದೆಲ್ಲವನ್ನೂ ಹಿಂತಿರುಗಿಸಲಾಗುವುದು ಎಂದವರು ಹೇಳಿದರು. ಕೊಲಂಬೊದಲ್ಲಿ ನಡೆದ 31ನೇ ಅಖಿಲ ಭಾರತ ಸಹಭಾಗಿತ್ವ ಸಭೆಯಲ್ಲಿ ಮಾತನಾಡಿದ ವಿಕ್ರಮಸಿಂಘೆ, ಅಕ್ಷಯ ಶಕ್ತಿ ಒಂದು ಮಹತ್ವದ ಭಾಗವಾಗಿದೆ. ಈ ಯೋಜನೆಗಾಗಿ ಎರಡೂ ದೇಶಗಳು ಜಂಟಿಯಾಗಿ ಕೆಲಸ ಮಾಡಲಿವೆ. ಜಂಟಿ ಕಾರ್ಯಕ್ರಮಕ್ಕೆ ವೇಗವನ್ನು ಹೆಚ್ಚಿಸುವ ಆವಶ್ಯಕತೆಯಿರುವಾಗ ನಾನು ನನ್ನ ಹಿಂದಿನ ಭೇಟಿಯಲ್ಲಿ ಪ್ರಧಾನಿ ಮೋದಿಯವರೊಂದಿಗೆ ಚರ್ಚಿಸಿದಾಗ, ಅವರು ಅದನ್ನು ಒಪ್ಪಿಕೊಂಡರು. ನಾವು ಅನೇಕ ಪ್ರಸ್ತಾಪಗಳ ಬಗ್ಗೆ ಚರ್ಚಿಸಿದ್ದೇವೆ ಎಂದವರು ತಿಳಿಸಿದರು.

## ಮಾತೃಭಾಷೆ, ದೇವರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದ ಸಚಿವ ಜೋಶಿ

ನವದೆಹಲಿ: ಸಂಸತ್ ಭವನದಲ್ಲಿ ಸೋಮವಾರ ನಡೆದ 18ನೇ ಲೋಕಸಭೆ ಮೊದಲ ಅಧಿವೇಶನದಲ್ಲಿ ಕೇಂದ್ರ ಆಹಾರ ಮತ್ತು ಗ್ರಾಹಕ ವ್ಯವಹಾರಗಳ ಖಾತೆ ನೂತನ ಸಚಿವ ಪ್ರಲ್ಹಾದ್ ಜೋಶಿ ಮಾತೃಭಾಷೆಯಲ್ಲೇ ಪ್ರಮಾಣ ವಚನ ಸ್ವೀಕರಿಸಿ, ಸಂಸತ್ನಲ್ಲಿ ಕನ್ನಡತನ ಎತ್ತಿ ಹಿಡಿದರು.



2024ರ ಲೋಕಸಭೆ ಚುನಾವಣೆ ಬಳಿಕ ನೂತನ ಸಂಸತ್ ಭವನದಲ್ಲಿ ಸೋಮವಾರ ಮೊದಲ ಬಾರಿ ಆಯೋಜಿಸಿದ್ದ ಅಧಿವೇಶನದ ವೇಳೆ ಹಂಗಾಮಿ ಸ್ಪೀಕರ್ ಭರ್ತೃಹರಿ ಮಹ್ತಾಬ್ ಪ್ರಮಾಣ ವಚನ ಬೋಧಿಸಿದರು.

ಈ ವೇಳೆ, ಧಾರವಾಡ ಲೋಕಸಭೆ ಕ್ಷೇತ್ರದಿಂದ ಸತತ 5ನೇ ಬಾರಿ ಬಿಜೆಪಿಯಿಂದ ಕಣಕ್ಕಿಳಿದು ಐತಿಹಾಸಿಕ ಗೆಲುವು ಸಾಧಿಸಿದ್ದ ಪ್ರಲ್ಹಾದ್ ಜೋಶಿ, ಸಂಸತ್ನಲ್ಲಿ ಪ್ರಧಾನಿ ಮೋದಿ ಸಂಗಡ ಮೂರನೇ ಬಾರಿ ಪ್ರಮಾಣ ವಚನ ಸ್ವೀಕರಿಸಿದರು.

ಪ್ರಸಕ್ತ ಅಧಿವೇಶನದಲ್ಲಿ ''ಪ್ರಲ್ಹಾದ್ ವೆಂಕಟೇಶ ಜೋಶಿಯಾದ ನಾನು'' ಎಂದು ಕನ್ನಡದಲ್ಲೇ ಮಾತನಾಡುತ್ತ, ಪ್ರತಿಜ್ಞಾ ಪತ್ರ ಓದಿ ದೇವರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ದೇಶದ ಅಖಂಡತೆ, ಸಾರ್ವಭೌಮತ್ವವನ್ನು ಎತ್ತಿ ಹಿಡಿಯುವ ಜತೆಗೆ ನನ್ನ ಕರ್ತವ್ಯವನ್ನು ಅತ್ಯಂತ ಪ್ರಾಮಾಣಿಕವಾಗಿ ಶ್ರದ್ಧೆ ಮತ್ತು ನಿಷ್ಠೆಯಿಂದ ನಿರ್ವಹಿಸುವುದಾಗಿ ಪ್ರಮಾಣಗೈದರು.

## ರಾಜ್ಯಸಭೆಯ ಸಭಾನಾಯಕರಾಗಿ ಜೆಪಿ ನಡ್ಡಾ ನೇಮಕ

**ನವದೆಹಲಿ:** ಬಿಜೆಪಿಯ ರಾಷ್ಟ್ರೀಯ ಅಧ್ಯಕ್ಷ ಮತ್ತು ಕೇಂದ್ರ ಸಚಿವ ಜೆಪಿ ನಡ್ಡಾ ಅವರು ಸೋಮವಾರ ರಾಜ್ಯಸಭೆಯ ಸಭಾನಾಯಕರಾಗಿ ಆಯ್ಕೆಯಾದರು.

ಈ ತಿಂಗಳ ಆರಂಭದಲ್ಲಿ, ನಡ್ಡಾ ಅವರು ಕೇಂದ್ರ ಆರೋಗ್ಯ ಸಚಿವಾಲಯದ ಕಚೇರಿಯನ್ನು ವಹಿಸಿಕೊಂಡರು. ಅವರನ್ನು ರಾಸಾಯನಿಕ ಮತ್ತು ರಸಗೊಬ್ಬರ ಸಚಿವಾಲಯಕ್ಕೂ ನಿಯೋಜಿಸಲಾಗಿದೆ. 18ನೇ ಲೋಕಸಭೆಯ ಮೊದಲ ಅಧಿವೇಶನ ಸೋಮವಾರದಂದು ಹೊಸದಾಗಿ ಚುನಾಯಿತರಾದ ಎಲ್ಲಾ ಸಂಸತ್ ಸದಸ್ಯರ ಪ್ರಮಾಣ ವಚನದೊಂದಿಗೆ ಆರಂಭವಾಯಿತು. ಅದೇ ರೀತಿ ಲೋಕಸಭೆ ಸ್ಪೀಕರ್ ಚುನಾವಣೆ ಜೂನ್ 26 ರಂದು ನಡೆಯಲಿದೆ.



# ದಕ್ಷಿಣ ಕೊರಿಯಾದಲ್ಲಿ ಹೊತ್ತಿ ಉರಿದು ಮೂರು ಅಂತಸ್ತಿನ ಕಟ್ಟಡ: 21 ಜನ ಸಜೀವ ದಹನ

ದಕ್ಷಿಣ ಕೊರಿಯಾದ ಹ್ವಾಸಿಯೊಂಗ್ ನಲ್ಲಿರುವ ಮೂರು ಅಂತಸ್ತಿನ ಲಿಥಿಯಂ ಬ್ಯಾಟರಿ ಉತ್ಪಾದನಾ ಘಟಕದಲ್ಲಿ ಸಂಭವಿಸಿದ ಅಗ್ನಿದುರಂತದಲ್ಲಿ ಕನಿಷ್ಠ 21 ಜನರು ಸಾವನ್ನಪ್ಪಿದ್ದು ಸಾಕಷ್ಟು ಮಂದಿ ಕಟ್ಟಡದಲ್ಲಿ ಸಿಕ್ಕಿಬಿದ್ದಿದ್ದಾರೆ ಎಂದು ಶಂಕಿಸಲಾಗಿದೆ.

ದೇಶದ ವಾಯುವ್ಯ ಭಾಗದಲ್ಲಿರುವ ಗ್ಯೋಂಗಿ ಪ್ರಾಂತ್ಯದ ಹ್ವಾಸಿಯೊಂಗ್ನಲ್ಲಿ ಈ ಘಟನೆ ನಡೆದಿದೆ. ಬೆಂಕಿಯನ್ನು ನಿಯಂತ್ರಿಸಲು 140 ಕ್ಕೂ ಹೆಚ್ಚು ಅಗ್ನಿಶಾಮಕ ಸಿಬ್ಬಂದಿಯನ್ನು ಕಾರ್ಖಾನೆಗೆ ಕಳುಹಿಸಲಾಗಿದೆ. ಆದಾಗ್ಯೂ, ಬ್ಯಾಟರಿ ಸೆಲ್ ಗಳ ನಿರಂತರ ಸ್ಫೋಟದಿಂದಾಗಿ ಸಿಬ್ಬಂದಿ ಆವರಣವನ್ನು ಪ್ರವೇಶಿಸಲು ಸಾಧ್ಯವಿಲ್ಲ ಎಂದು ಅಗ್ನಿಶಾಮಕ ಮುಖ್ಯಸ್ಥರು ವರದಿ ಮಾಡಿದ್ದಾರೆ.

ಸಾವುನೋವುಗಳು ಹೆಚ್ಚಾಗಬಹುದು ಎಂಬ ಆತಂಕದ ನಡುವೆ ಸರ್ಕಾರಿ ಅಧಿಕಾರಿಗಳು ಎರಡನೇ ಅತ್ಯುನ್ನತ ಮಟ್ಟದ ತುರ್ತು ಪರಿಸ್ಥಿತಿಯನ್ನು ಘೋಷಿಸಿದರು. ಕಟ್ಟಡದಲ್ಲಿ ಸಿಲುಕಿರುವ ಜನರನ್ನು ಹುಡುಕಲು ಮತ್ತು ಶವಗಳನ್ನು ಹೊರತೆಗೆಯಲು ರಕ್ಷಣಾ ತಂಡಗಳು ಮತ್ತು ಸಲಕರಣೆಗಳನ್ನು ನಿಯೋಜಿಸಲು ದಕ್ಷಿಣ ಕೊರಿಯಾದ ಅಧ್ಯಕ್ಷ ಯೂನ್ ಸುಕ್ ಯೆಯೋಲ್ ತುರ್ತು ಸೂಚನೆಗಳನ್ನು ನೀಡಿದ್ದಾರೆ. ನಾವು ಇನ್ನೂ ಒಳಗೆ ಹೋಗಿ ರಕ್ಷಣಾ ಕಾರ್ಯಾಚರಣೆ ನಡೆಸಲು ಸಾಧ್ಯವಾಗುತ್ತಿಲ್ಲ. ಬೆಂಕಿಯನ್ನು ನಿಯಂತ್ರಣಕ್ಕೆ ತಂದ ನಂತರ ನಾವು ಅದನ್ನು ನಡೆಸುತ್ತೇವೆ ಎಂದು ಅಗ್ನಿಶಾಮಕ ದಳದ ಕಿಮ್ ಜಿನ್-ಯಂಗ್ ಮಾಧ್ಯಮಗಳಿಗೆ ತಿಳಿಸಿದ್ದಾರೆ ಎಂದು ಕಣಟಿಭ್ಛಿಟಿರ. ಛಿಂಟ ವರದಿ ಮಾಡಿದೆ. ಇಪ್ಪತ್ತೊಂದು ಕಾರ್ಮಿಕರು ಈಗ ಲೆಕ್ಕಕ್ಕೆ ಸಿಗುತ್ತಿಲ್ಲ. ಕಂಪನಿಯು ಒದಗಿಸಿದ ಸಂಪರ್ಕಗಳೊಂದಿಗೆ ಅವರ ಇರುವಿಕೆಯನ್ನು ಪತ್ತೆಹಚ್ಚಲು ನಾವು ಯೋಜಿಸುತ್ತಿದ್ದೇವೆ ಎಂದು ಕಿಮ್ ತಿಳಿಸಿದ್ದಾರೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಬೆಂಗಳೂರಿನಲ್ಲಿ ಪ್ರಭಾಸ್ ಚಿತ್ರಕ್ಕೆ ಬೇಡಿಕೆ- ಟಿಕೆಟ್ ರೇಟ್ ಡಬಲ್



ಪ್ರಭಾಸ್, ದೀಪಿಕಾ ಪಡುಕೋಣೆ ನಟನೆಯ 'ಕಲ್ಕಿ 2898 ಎಡಿ' ಸಿನಿಮಾ ಇದೇ ಜೂನ್ 27ಕ್ಕೆ ರಿಲೀಸ್ ಆಗಲಿದೆ. ಕನ್ನಡ, ತೆಲುಗು ಸೇರಿದಂತೆ ಬಹುಭಾಷೆಗಳಲ್ಲಿ ಸಿನಿಮಾ ಮೂಡಿ ಬರಲಿದೆ. ಈಗಾಗಲೇ ಅಡ್ವಾನ್ಸ್ ಬುಕ್ಕಿಂಗ್ ಕೂಡ ಶುರುವಾಗಿದೆ.

ಮಲ್ಟಿಸ್ಟಾರ್ ಸಿನಿಮಾ ಆಗಿರುವ 'ಕಲ್ಕಿ' ಚಿತ್ರದ ಬಗ್ಗೆ ಫ್ಯಾನ್ಸ್ ಭಾರೀ ಕ್ರೇಜ್ ಇದೆ. ಇನ್ನೂ ಬೆಳ್ಳಂಬೆಳಗ್ಗೆ ಸಾಕಷ್ಟು ಕಡೆ ಸಿನಿಮಾದ ಮೊದಲ ಪ್ರದರ್ಶನ ಆರಂಭವಾಗಿದೆ. ಚಿತ್ರಕ್ಕೆ ಭಾರೀ ಕ್ರೇಜ್ ಇದೆ ಎಂಬ ಕಾರಣಕ್ಕೆ ಟಿಕೆಟ್ ದರ ಕೂಡ ಹೆಚ್ಚಿಸಲಾಗಿದೆ.

ಇದೀಗ ಟಿಕೆಟ್ ದರವನ್ನು 400 ರೂ.ಯಿಂದ 700 ರೂ.ವರೆಗೆ ಹೆಚ್ಚಿಸಲಾಗಿದೆ. ಇನ್ನೂ ಟಿಕೆಟ್ ದರ ಹೆಚ್ಚಿಸಲಿದ್ದಾರೆ ಎನ್ನಲಾಗಿದೆ. ಬಾಹುಬಲಿ ಸಿನಿಮಾ ಬಳಿಕ ಮತ್ತೆ ಅದೇ ರೀತಿ ಕಲ್ಕಿ ಚಿತ್ರದ ಬಗ್ಗೆ ಫ್ಯಾನ್ಸ್‌ಗೆ ನಿರೀಕ್ಷೆ ಹೆಚ್ಚಿಸಿದೆ.

ಇನ್ನೂ ಚಿತ್ರದಲ್ಲಿ ಭೂತ, ವರ್ತಮಾನ ಹಾಗೂ ಭವಿಷ್ಯದ ಕಥೆಯನ್ನು ಡೈರೆಕ್ಟರ್ ನಾಗ್ ಅಶ್ವಿನ್ ಕಟ್ಟಿಕೊಟ್ಟಿದ್ದಾರೆ. ಚಿತ್ರದ ಟ್ರೈಲರ್ ಝಲಕ್‌ನಲ್ಲೇ ಆ ಸುಳಿವು ಬಿಟ್ಟು ಕೊಟ್ಟಿದ್ದಾರೆ. ಜಗತ್ತಿನ ಮೊದಲ ಪ್ರದೇಶ ಮತ್ತು ಕೊನೆಯ ಪ್ರದೇಶ ಕಾಶಿ ಎನ್ನುವ ಮೂಲಕ ಕಲ್ಕಿ ಟ್ರೈಲರ್ ಶುರುವಾಗುತ್ತೆ. ಜಗತ್ತಿನಿಂದ ಎಲ್ಲವನ್ನೂ ಕಿತ್ತುಕೊಂಡರೆ ಎಲ್ಲವೂ ಇರುತ್ತದೆ ಎನ್ನುವ ಕುತೂಹಲಕರ ಸಂಭಾಷೆಯಣೆಯಿದೆ. 6000 ಹಿಂದಿನ ಶಕ್ತಿ ಮತ್ತೆ ಬಂದಿದೆ. ಅಳಿವು- ಉಳಿವಿಗಾಗಿ ಹೋರಾಡುವವರ ದೃಶ್ಯ ತೋರಿಸಲಾಗಿದೆ. ಭೈರವನಾಗಿ ಯುದ್ಧಕ್ಕೆ ಪ್ರಭಾಸ್ ಸಜ್ಜಾಗಿದ್ದಾರೆ. 2 ಜಗತ್ತಿನ ಹೋರಾಟವನ್ನು ಸೈನ್ಸ್ ಫಿಕ್ಷನ್ ಮೂಲಕ ಅದ್ಭುತವಾಗಿ ತೋರಿಸಿದ್ದಾರೆ.

ಯುದ್ಧದಲ್ಲಿ ಇದುವರೆಗೂ ನಾನು ಸೋತಿಲ್ಲ, ಇದನ್ನೂ ಸಹ ನಾನು ಸೋಲಲ್ಲ ಎಂದು ಖಡಕ್ ಆಗಿ ಡೈಲಾಗ್ ಹೊಡೆದಿದ್ದಾರೆ. ಪ್ರಭಾಸ್ ಜೊತೆ ದೀಪಿಕಾ, ದಿಶಾ ಪಟಾನಿ ಮಿಂಚಿದ್ದಾರೆ. ಅಮಿತಾಭ್, ಕಮಲ್ ಹಾಸನ್ ಕೂಡ ವಿಭಿನ್ನ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಟ್ರೈಲರ್ ವಿಎಫ್ ಎಕ್ಸ್ ದೃಶ್ಯಕ್ಕೆ ಫ್ಯಾನ್ಸ್ ಮನಸೋತಿದ್ದಾರೆ. ಸದ್ಯ ಜೂನ್ 27ಕ್ಕೆ ಕಲ್ಕಿ ಸಿನಿಮಾ ಥಿಯೇಟರ್‌ನಲ್ಲಿ ಅಬ್ಬರಿಸಲು ಸಿದ್ಧವಾಗಿದೆ.

# ರೇಣುಕಾಸ್ವಾಮಿ ನನಗೂ ಅಶ್ಲೀಲ ಮೆಸೇಜ್ ಕಳುಹಿಸಿದ್ದ



ಸ್ಯಾಂಡಲ್‌ವುಡ್ ನಟ ದರ್ಶನ್ ಇದೀಗ ರೇಣುಕಾಸ್ವಾಮಿ ಕೊಲೆ ಪ್ರಕರಣ ಸಂಬಂಧ ಜೈಲು ಸೇರಿದ್ದಾರೆ. ಇದೀಗ ಕಿರುತೆರೆ ನಟಿ ಚಿತ್ರಾಲ್ ರಂಗಸ್ವಾಮಿ ಗಂಭೀರ ಆರೋಪವೊಂದನ್ನು ಮಾಡಿದ್ದಾರೆ. ರೇಣುಕಾಸ್ವಾಮಿ ಕ್ರಿಯೆಟ್ ಮಾಡಿದ್ದ ಫೇಕ್ ಅಕೌಂಟ್‌ಗಳಿಂದ ನನಗೂ ಅಶ್ಲೀಲ ಮೆಸೇಜ್ ಬಂದಿತ್ತು ಎಂದು ಸೋಷಿಯಲ್ ಮೀಡಿಯಾದಲ್ಲಿ ತಿಳಿಸಿದ್ದಾರೆ.

ಪ್ರಸ್ತುತ ಏನು ನಡೆಯುತ್ತಿದೆ ಎಂಬುದು ಎಲ್ಲರಿಗೂ ಅರಿವಿದೆ. ನಾನು ಯಾರಿಗೂ ಸಪೋರ್ಟ್ ಮಾಡುವುದಕ್ಕೆ ಬಂದಿಲ್ಲ. ರೇಣುಕಾಸ್ವಾಮಿ ಫ್ಯಾಮಿಲಿಗೆ ದೇವರು ಆದಷ್ಟು ಶಕ್ತಿ ಕೊಡಲಿ. ಆದರೆ ಈ ರೇಣುಕಾಸ್ವಾಮಿ ಇನ್ನೂ ಒಂದಿಬ್ಬರಿಗೆ ಇದೇ ಮೆಸೇಜ್ ಕಳುಹಿಸಿದ್ದರು. ಅದಕ್ಕೆ ಸಂಬಂಧಿಸಿದಂತೆ ದೂರು ಕೂಡ ದಾಖಲಾಗಿತ್ತು.



ಇದರ ಬಗ್ಗೆ ಏನು ಹೇಳುವುದು ಗೊತ್ತಾಗುತ್ತಿಲ್ಲ. ಅಷ್ಟೊಂದು ಚೆನ್ನಾಗಿರುವ ಹೆಂಡತಿ ಇರುವಾಗ, ಬೇರೆಯವರಿಗೆ ಈ ರೀತಿ ಮೆಸೇಜ್ ಕಳುಹಿಸುವುದು ಯಾಕೆ ಬೇಕಿತ್ತು. ಸುಮಾರು ಜನರಿಗೆ ಇದೆಲ್ಲಾ ಕಾಮನ್ ಎಂದುಕೊಳ್ಳಬಹುದು. ಆದರೆ ಆ ರೀತಿ ಮೆಸೇಜ್‌ಗಳನ್ನು ನೋಡಿದಾಗ, ಏನಪ್ಪಾ ಇದು ಥೂ ಅಂತ ಅನ್ನಿಸುತ್ತದೆ. ನಾನು ಯಾರ ಪರವಾಗಿಯೂ ಮಾತನಾಡುತ್ತಿಲ್ಲ. ಆದರೆ ಇನ್ನೊಬ್ಬರ ಪರ್ಸನಲ್ ವಿಷಯಗಳ ಬಗ್ಗೆ ಕಾಮೆಂಟ್ ಸೆಕ್ಷನ್‌ನಲ್ಲಿ ಕಾಮೆಂಟ್ ಹಾಕಿ ಜಡ್ಜ್ ಮಾಡುವುದಕ್ಕೆ ಹೋಗಬೇಡಿ. ನಿಮ್ಮ ಜೀವನವನ್ನು ನೀವು ನೋಡಿಕೊಳ್ಳಿ ಎಂದು ನಟಿ ಮಾತನಾಡಿದ್ದಾರೆ. ನನ್ನ ಬ್ಲಾಕ್ ಲಿಸ್ಟ್ ಅಲ್ಲೂ ಆ ಅಕೌಂಟ್ ಇದೆ ಎಂದರೆ, ನನಗೆ ಅದರಿಂದ ಅಶ್ಲೀಲವಾದ ಮೆಸೇಜ್ ಅಥವಾ ಫೋಟೋ ಬಂದಿದೆ. ಅದಕ್ಕೆ ಅದನ್ನು ಬ್ಲಾಕ್ ಮಾಡಿರುತ್ತೇನೆ. ಆ ಅಕೌಂಟ್‌ನಿಂದ ಅಶ್ಲೀಲವಾದ ಮೆಸೇಜ್ ಬರದೇ ನಾನು ಅದನ್ನು ಬ್ಲಾಕ್ ಮಾಡುವುದಿಲ್ಲ ಎಂದು ಚಿತ್ರಾಲ್ ತಿಳಿಸಿದ್ದಾರೆ.

# ಸಮಂತಾ ಜೊತೆ ಶಾರುಖ್ ಖಾನ್ ರೊಮ್ಯಾನ್ಸ್



ಪಠಾಣ್, ಜವಾನ್ ಸಕ್ಸಸ್ ಬಳಿಕ ಬಾಲಿವುಡ್‌ನಲ್ಲಿ ಕಿಂಗ್ ಖಾನ್ ಶಾರುಖ್‌ಗೆ ಬೇಡಿಕೆ ಹೆಚ್ಚಾಗಿದೆ. ಇದೀಗ ನಯನತಾರಾ ಬಳಿಕ ಸಮಂತಾ ಜೊತೆ ಶಾರುಖ್ ಖಾನ್ ರೊಮ್ಯಾನ್ಸ್ ಮಾಡಲು ಸಜ್ಜಾಗಿದ್ದಾರೆ.

'ಡಂಕಿ' ನಂತರ ಮತ್ತೊಮ್ಮೆ ಖ್ಯಾತ ನಿರ್ದೇಶಕ ರಾಜ್‌ಕುಮಾರ್ ಹಿರಾನಿ ಜೊತೆ ಶಾರುಖ್ ಕೈಜೋಡಿಸಿದ್ದಾರೆ. ಈ ಸಿನಿಮಾದಲ್ಲೂ ಸೌತ್ ನಟಿಯನ್ನೇ ನಾಯಕಿಯನ್ನಾಗಿ ಮಾಡಲು ಚಿತ್ರತಂಡ ನಿರ್ಧರಿಸಿದೆ.

ನಯನತಾರಾ ಜೊತೆ 'ಜವಾನ್' ಸಿನಿಮಾ ಕ್ಲಿಕ್ ಆದಂತೆ ಹೊಸ ಸಿನಿಮಾ ಕೂಡ ಗೆಲ್ಲಲಿ ಎಂದು ಸಮಂತಾರನ್ನು ರಾಜ್‌ಕುಮಾರ್ ಹಿರಾನಿ ಟೀಮ್ ಸಂಪರ್ಕಿಸಿದೆ. ಸಮಂತಾ ಕೂಡ ಕಥೆ ಕೇಳಿದ್ದಾರಂತೆ. ಆದರೆ ಎರಡು ಕಡೆ ಒಪ್ಪಿಗೆ ಆಯ್ತಾ? ಎಂಬುದರ ಬಗ್ಗೆ ಖಾತ್ರಿಯಾಗಿಲ್ಲ. ಚಿತ್ರತಂಡ ಅಧಿಕೃತವಾಗಿ ಹೇಳುವವರೆಗೂ ಕಾಯಬೇಕಿದೆ.

ಬಾಲಿವುಡ್ ಸ್ಟಾರ್‌ಗೆ ಸಮಂತಾ ನಾಯಕಿಯಾಗ್ತಾರೆ ಎಂಬ ಸುದ್ದಿ ಕೇಳಿಯೇ ಫ್ಯಾನ್ಸ್ ಥ್ರಿಲ್ ಆಗಿದ್ದಾರೆ. 'ಖುಷಿ' ಸಿನಿಮಾದ ಬಳಿಕ ಯಾವುದೇ ಘೋಷಣೆ ಕೂಡ ಆಗಿಲ್ಲ. ಹಾಗಾಗಿ ನಟಿಯ ಕಡೆಯಿಂದ ಗುಡ್ ನ್ಯೂಸ್ ಸಿಗಲಿ ಎಂದು ಫ್ಯಾನ್ಸ್ ಕಾಯ್ತಿದ್ದಾರೆ.

### ವಿಶ್ವಕಪ್ ಫೈನಲ್ ಸೋಲಿಗೆ ಸೇಡು ತೀರಿಸಿದ ಭಾರತ

# 24 ರನ್‌ಗಳ ಗೆಲುವು, ಸೆಮಿಗೆ ಎಂಟ್ರಿ



ಟಿ20 ವಿಶ್ವಕಪ್ ಕ್ರಿಕೆಟ್ ಸೂಪರ್ 8 ಪಂದ್ಯದಲ್ಲಿ ಆಸ್ಟ್ರೇಲಿಯಾ ವಿರುದ್ಧ ಭಾರತ 24 ರನ್‌ಗಳ ಜಯ ಸಾಧಿಸಿ ಸೆಮಿಫೈನಲ್ ಪ್ರವೇಶಿಸಿದೆ. ಈ ಮೂಲಕ ಕಳೆದ ವರ್ಷದ ವಿಶ್ವಕಪ್ ಕ್ರಿಕೆಟ್ ಫೈನಲಿನಲ್ಲಿ ಸೋತಿದ್ದ ಭಾರತ ಈ ಪಂದ್ಯವನ್ನು ಗೆಲ್ಲುವ ಮೂಲಕ ಸೇಡು ತೀರಿಸಿದೆ.

ಗೆಲ್ಲಲು 205 ರನ್‌ಗಳ ಕಠಿಣ ಗುರಿಯನ್ನು ಪಡೆದ ಆಸ್ಟ್ರೇಲಿಯಾ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 181 ರನ್ ಹೊಡೆದು ಜಯಗಳಿಸಿತು. ಕೊನೆಯಲ್ಲಿ ಆಶ್‌ರ್ದೀಪ್ ಸಿಂಗ್, ಕುಲದೀಪ್ ಯಾದವ್, ಬುಮ್ರಾ ಉತ್ತಮ ಬೌಲಿಂಗ್ ದಾಳಿ ನಡೆಸಿದ ಪರಿಣಾಮ ಭಾರತ ಗೆಲುವು ಸಾಧಿಸಿತು.

ಡೇವಿಡ್ ವಾರ್ನರ್ 6 ರನ್‌ಗಳಿಸಿ ಬೇಗನೇ ಔಟಾದರೂ ಟ್ರಾವಿಸ್ ಹೆಡ್ ಮತ್ತು ಮಿಚೆಲ್ ಮಾರ್ಷ್ ಎರಡನೇ ವಿಕೆಟಿಗೆ 81 ರನ್ ಜೊತೆಯಾಟವಾಡಿ ಚೇತರಿಕೆ ನೀಡಿದರು.

ವಿಕೆಟ್ ಉರುಳುತ್ತಿದ್ದರೂ ಟ್ರಾವಿಸ್ ಹೆಡ್ ನಿಂತು ಆಡುತ್ತಿದ್ದರು. ಬೂಮ್ರಾ ಎಸೆದ ಇನ್ನಿಂಗ್ಸ್ 17ನೇ ಓವರ್‌ನಲ್ಲಿ ಟ್ರಾವಿಸ್ ಹೆಡ್ 76 ರನ್ (43 ಎಸೆತ, 9 ಬೌಂಡರಿ,4 ಸಿಕ್ಸ್) ಗಳಿಸಿದ್ದಾಗ ರೋಹಿತ್ ಶರ್ಮಾ ಕ್ಯಾಚ್ ನೀಡಿ ಔಟಾದ ಬಳಿಕ ಭಾರತದತ್ತ ಪಂದ್ಯ ವಾಲಿತು.

ಆರ್ಶ್‌ದೀಪ್ ಸಿಂಗ್ 3 ವಿಕೆಟ್, ಕುಲದೀಪ್ ಯಾದವ್ 2 , ಬುಮ್ರಾ ಮತ್ತು ಅಕ್ಷರ್ ಪಟೇಲ್ ತಲಾ ಒಂದೊಂದು ವಿಕೆಟ್ ಕಿತ್ತರು.

ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಭಾರತ ಪರ ವಿರಾಟ್ ಕೊಹ್ಲಿ ಶೂನ್ಯಕ್ಕೆ ಔಟಾದರು. ವಿಕೆಟ್ ಉರುಳಿದ್ದರೂ ರೋಹಿತ್ ಶರ್ಮಾ ಸ್ಫೋಟಕ ಬ್ಯಾಟಿಂಗ್ ಪ್ರದರ್ಶಿಸಿದರು. ಕೇವಲ 41 ಎಸೆತಗಳಲ್ಲಿ 91 ರನ್ ಹೊಡೆಯವ ಮೂಲಕ ಹಲವು ದಾಖಲೆ ನಿರ್ಮಿಸಿದರು. ಈ ಸುಂದರ ರೋಹಿತ್ ಶರ್ಮಾ ಸಿಕ್ಸ್ ಮತ್ತು ಬೌಂಡರಿ ಮೂಲಕವೇ 76 ರನ್ ಚಚ್ಚಿದ್ದರು. 19 ಎಸೆತಗಳಲ್ಲಿ ಅರ್ಧ ಶತಕ ಸಿಡಿಸಿದ ರೋಹಿತ್ ಮಿಚೆಲ್ ಸ್ಟಾರ್ಕ್ ಎಸೆತದಲ್ಲಿ ಬೌಲ್ಡ್ ಔಟ್ ಆದರು.

ರಿಷಭ್ ಪಂತ್ 15 ರನ್, ಸೂರ್ಯಕುಮಾರ್ ಯಾದವ್ 31 ರನ್(16 ಎಸೆತ, 3 ಬೌಂಡರಿ, 2 ಸಿಕ್ಸರ್), ಶಿವಂ ದುಬೆ 28 ರನ್ (22 ಎಸೆತ, 2 ಬೌಂಡರಿ, 1 ಸಿಕ್ಸ್), ಹಾರ್ದಿಕ್ ಪಾಂಡ್ಯ ಔಟಾಗದೇ 27 ರನ್ ( 17 ಎಸೆತ, 1 ಬೌಂಡರಿ, 2 ಸಿಕ್ಸ್), ಜಡೇಜಾ ಔಟಾಗದೇ 9 ರನ್ (5 ಎಸೆತ, 1 ಸಿಕ್ಸ್) ಹೊಡೆದ ಪರಿಣಾಮ ಭಾರತ ಅಂತಿಮವಾಗಿ 5 ವಿಕೆಟ್ ನಷ್ಟಕ್ಕೆ 205 ರನ್ ಹೊಡೆಯಿತು.

# ರಿಷಭ್ ಪಂತ್ ವಿರುದ್ಧ ಸಿಟ್ಟಿನಿಂದ ಕೂಗಿದ ರೋಹಿತ್ ಶರ್ಮಾ



ಟಿ20 ವಿಶ್ವಕಪ್‌ನ ಸೂಪರ್ 8 ಹಂತದ ಪಂದ್ಯದಲ್ಲಿ ಆಸ್ಟ್ರೇಲಿಯಾ ವಿರುದ್ಧ 24 ರನ್‌ಗಳ ಅಮೋಘ ಗೆಲುವು ಸಾಧಿಸಿರುವ ಟೀಂ ಇಂಡಿಯಾ ಸೆಮಿ ಫೈನಲ್ ಪ್ರವೇಶಿಸಿದೆ. ಆದಾಗ್ಯೂ, ಆರಂಭಿಕ ಹಂತದಲ್ಲಿ ಆಸ್ಟ್ರೇಲಿಯಾ ಬ್ಯಾಟರ್‌ಗಳು ಮೇಲುಗೈ ಸಾಧಿಸಿದ್ದು ಟೀಂ ಇಂಡಿಯಾಕ್ಕೆ ತುಸು ಆತಂಕ ಸೃಷ್ಟಿಸಿತ್ತು. ವಿಶ್ವಕಪ್‌ನಂಥ ಟೂರ್ನಿಯಲ್ಲಿ ಆಸ್ಟ್ರೇಲಿಯಾ ಎದುರಿದ್ದಾಗ ದೊಡ್ಡ ಮೊತ್ತವಾದರೂ ಡಿಫೆಂಡ್ ಮಾಡಲು ಶ್ರಮ ಬೇಕೇಬೇಕು. ಇಂಥ ಸಂದರ್ಭದಲ್ಲಿ ಎರಡನೇ ಓವರ್‌ನಲ್ಲಿ ಮಿಚೆಲ್ ಮಾರ್ಷ್ ಕ್ಯಾಚ್ ಪಡೆಯುವಲ್ಲಿ ವಿಕೆಟ್ ಕೀಪರ್ ರಿಷಭ್ ಪಂತ್ ಎಡವಿದಾಗ ಕ್ಯಾಪ್ಟರ್ ರೋಹಿತ್ ಶರ್ಮಾ ಒಂದು ಕ್ಷಣ ಅವರ ಮೇಲೆ ಸಿಟ್ಟಾದರು. ಹಿಟ್‌ಮ್ಯಾನ್ ಸಿಟ್ಟಿನಿಂದ ಕೂಗಿದ ವಿಡಿಯೋ ಈಗ ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆಗುತ್ತಿದೆ.

**ಬೂಮ್ರಾ ಓವರ್ ವೇಳೆ ನಡೆದಿದ್ದೇನು?:** ರೋಹಿತ್ ಸ್ಫೋಟಕ ಬ್ಯಾಟಿಂಗ್ (41 ಎಸೆತಗಳಲ್ಲಿ 92 ರನ್) ನೆರವಿನಿಂದ ಟೀಂ ಇಂಡಿಯಾ 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 205 ರನ್‌ಗಳ ದೊಡ್ಡ ಮೊತ್ತ ಕಲೆಹಾಕಿತು. ನಂತರ ಬೌಲಿಂಗ್ ವೇಳೆ ಮೊದಲ ಓವರ್‌ನಲ್ಲಿಯೇ ಡೇವಿಡ್ ವಾರ್ನರ್ ಅವರನ್ನು ಅರ್ಷದೀಪ್ ಸಿಂಗ್ ಔಟ್ ಮಾಡಿದರು. ಇಂತಹ ಪರಿಸ್ಥಿತಿಯಲ್ಲಿ ಆಸ್ಟ್ರೇಲಿಯಾ ಮೇಲೆ ಒತ್ತಡ ಹೇರಲು ಟೀಂ ಇಂಡಿಯಾಕ್ಕೆ ಒಳ್ಳೆಯ ಅವಕಾಶವಿತ್ತು. ಎರಡನೇ ಓವರ್‌ನಲ್ಲಿಯೇ ಅದರ ಅವಕಾಶವೂ ಒಲಿದು ಬಂದಿತ್ತು. ಜಸ್ಪ್ರೀತ್ ಬುಮ್ರಾ ಅವರ ನಾಲ್ಕನೇ ಎಸೆತವು ಶಾರ್ಟ್ ಪಿಚ್ ಆಗಿತ್ತು. ಮಿಚೆಲ್ ಮಾರ್ಷ್‌ಗೆ ಪುಲ್ ಶಾಟ್ ಅನ್ನು ಸರಿಯಾಗಿ ಆಡಲು ಸಾಧ್ಯವಾಗಲಿಲ್ಲ. ಚೆಂಡು ಅವರ ಬ್ಯಾಟ್‌ನ ಮೇಲ್ಭಾಗಕ್ಕೆ ಬಡಿದು ವಿಕೆಟ್‌ನ ಹಿಂದೆ ಲೆಗ್ ಸೈಡ್‌ನಲ್ಲಿ ಪುಟಿಯಿತು. ಇನ್ನೇನು ವಿಕೆಟ್ ಸಿಕ್ಕಿತುಬಿಟ್ಟಿತು ಎಂದು ಎಲ್ಲರೂ ಭಾವಿಸಿದರು. ಆದರೆ ವಿಕೆಟ್ ಕೀಪರ್ ರಿಷಭ್ ಪಂತ್ ಎಡವಿದ್ದರಿಂದ ಚೆಂಡಿನ ಬಳಿ ತಲುಪಲು ಹಾಗೂ ಅದನ್ನು ಹಿಡಿಯಲು ಸಾಧ್ಯವಾಗಲಿಲ್ಲ. ಇದರಿಂದ ರೋಹಿತ್ ಸಿಟ್ಟಾದರು. ಮಿಡ್-ಆಫ್‌ನಲ್ಲಿ ಫೀಲ್ಡಿಂಗ್ ಮಾಡುತ್ತಿದ್ದ ಅವರು ಅಲ್ಲಿಂದಲೇ ಪಂತ್ ಮೇಲೆ ಕೋಪವನ್ನು ಹೊರಹಾಕಿದರು ಮತ್ತು ಕೂಗಾಡಿದರು. ಈ ವಿಡಿಯೋ ಸದ್ಯ ವೈರಲ್ ಆಗುತ್ತಿದೆ.

ಈ ಜೀವದಾನದ ನಂತರ ಮಾರ್ಷ್ ಬೌಂಡರಿಗಳನ್ನು ಹೊಡೆಯಲು ಪ್ರಾರಂಭಿಸಿದ್ದಲ್ಲದೆ, ಒಂದು ಹಂತದಲ್ಲಿ ಟೀಮ್ ಇಂಡಿಯಾಕ್ಕೆ ಕಂಟಕವಾಗಿ ಪರಿಣಮಿಸಿದರು. ಮಾರ್ಷ್ ಟ್ರಾವಿಸ್ ಹೆಡ್ ಜೊತೆಗೆ 81 ರನ್‌ಗಳ ಅತ್ಯುತ್ತಮ ಜೊತೆಯಾಟ ಮಾಡಿದರು. ಆದರೆ, ಕುಲದೀಪ್ ಯಾದವ್ ಎಸೆತದಲ್ಲಿ ಅಕ್ಷರ್ ಪಟೇಲ್ ಅದ್ಭುತ ಕ್ಯಾಚ್ ಪಡೆಯುವ ಮೂಲಕ ಮಾರ್ಷ್ ಇನ್ನಿಂಗ್ಸ್ ಕೊನೆಗೊಳಿಸಿದರು.

ನಂತರ ಕ್ರಮೇಣ ಆಸ್ಟ್ರೇಲಿಯಾ ಇನ್ನಿಂಗ್ಸ್ ಕುಸಿಯಲು ಪ್ರಾರಂಭಿಸಿತು. ಅಂತಿಮವಾಗಿ ಆಸೀಸ್ 181 ರನ್ ಗಳಿಸಲಷ್ಟೇ ಶಕ್ತವಾಯಿತು. ಈ ಪಂದ್ಯವನ್ನು ಟೀಂ ಇಂಡಿಯಾ 24 ರನ್‌ಗಳಿಂದ ಗೆದ್ದು ಸೆಮಿಫೈನಲ್‌ಗೆ ಲಗ್ಗೆ ಇಟ್ಟಿದೆ.

### ಜೈಲಲ್ಲಿ ದರ್ಶನ್ ನನ್ನು ಭೇಟಿಯಾದ ಪುತ್ರ ವಿನೀಶ್

# ಭಾವುಕನಾಗಿ ಕಣ್ಣೀರಿಟ್ಟ ಕಾಟೇರ



**ಬೆಂಗಳೂರು:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ನಟ ದರ್ಶನ್‌ನನ್ನು ಅವರ ಪತ್ನಿ ವಿಜಯಲಕ್ಷ್ಮಿ ಹಾಗೂ ಮಗ ವಿನೀಶ್, ಪರಪ್ಪನ ಅಗ್ರಹಾರ ಜೈಲಿನಲ್ಲಿ ಭೇಟಿಯಾಗಿದ್ದಾರೆ.

ಜೈಲಿಗೆ ಪತ್ನಿ ಹಾಗೂ ಪುತ್ರ ಬರುತ್ತಿದ್ದಂತೆ ದರ್ಶನ್ ಭಾವುಕರಾಗಿದ್ದಾರೆ. ಈ ವೇಳೆ ಮಗನನ್ನು ತಬ್ಬಿಕೊಂಡು ಕೆಲ ಹೊತ್ತು ದರ್ಶನ್ ಕಣ್ಣೀರು ಹಾಕಿದ್ದಾರೆ. ಅಳುತ್ತಲೇ ನಡೆದ ಘಟನೆಯ ಬಗ್ಗೆ ಮಾತಾಡಿದ್ದಾರೆ. ಅರ್ಧ ಗಂಟೆಯಲ್ಲಿ ಪತ್ನಿ ವಿಜಯಲಕ್ಷ್ಮಿಗಿಂತ ಹೆಚ್ಚಿನ ಸಮಯ ಮಗನ ಜೊತೆಯೇ ದರ್ಶನ್ ಕಳೆದಿದ್ದಾರೆ ಎಂಬ ವಿಚಾರ ಮೂಲಗಳಿಂದ ತಿಳಿದು ಬಂದಿದೆ.

ದರ್ಶನ್ ಗ್ಯಾಂಗ್‌ನಿಂದ ನಡೆದಿದ್ದ ರೇಣುಕಾಸ್ವಾಮಿ ಕೊಲೆ ಪ್ರಕರಣ ರಾಜ್ಯದ ಜನರನ್ನ ಬೆಚ್ಚಿ ಬೀಳಿಸಿತ್ತು. ರೇಣುಕಾಸ್ವಾಮಿ ದರ್ಶನ್‌ನ ಗೆಳತಿ ನಟಿ ಪವಿತ್ರಾಗೌಡಗೆ ಅಶ್ಲೀಲ ಸಂದೇಶ ಕಳಿಸಿದ್ದ ಎಂಬ ಕಾರಣಕ್ಕೆ ಆತನನ್ನು ಅಪಹರಿಸಿ, ಬೆಂಗಳೂರಿನ ಆರ್ ಆರ್ ನಗರದ ಪಟ್ಟಣಗೆರೆ ಶೆಡ್‌ನಲ್ಲಿ ರೇಣುಕಾಸ್ವಾಮಿಯನ್ನ ಚಿತ್ರಹಿಂಸೆ ಕೊಟ್ಟು ಕೊಲೆ ಮಾಡಲಾಗಿದೆ ಎಂಬ ಸತ್ಯ ಪೊಲೀಸರ ತನಿಖೆಯಲ್ಲಿ ಬೆಳಕಿಗೆ ಬಂದಿತ್ತು.

ಕಬ್ಬಿಣದ ರಾಡ್, ರಿಪೀಸ್, ಲಾಠಿಯಿಂದ ಹಲ್ಲೆ ಮಾಡಿದ್ದ ದರ್ಶನ್ ಗ್ಯಾಂಗ್, ರೇಣುಕಾಸ್ವಾಮಿಯ ತಲೆಯನ್ನು ಲಾರಿಗೆ ಜಜ್ಜಿತ್ತು. ಇದರಿಂದ ರೇಣುಕಾಸ್ವಾಮಿ ಪ್ರಜ್ಞೆ ತಪ್ಪಿ ಬಿದ್ದಿದ್ದಾಗ ಕರೆಂಟ್ ಶಾಕ್ ಕೊಟ್ಟಿದ್ದರು ಎಂಬ ವಿಚಾರವು ಬೆಳಕಿಗೆ ಬಂದಿತ್ತು.

ಪೊಲೀಸರು ಪ್ರಕರಣದ ಎಲ್ಲಾ ಆರೋಪಿಗಳನ್ನು ಬಂಧಿಸಿ ವಿಚಾರಣೆ ನಡೆಸಿದ್ದಾರೆ. ಆರೋಪಿಗಳನ್ನು ಪೊಲೀಸ್ ಕಸ್ಟಡಿ ಮುಗಿದ ಹಿನ್ನೆಲೆ ಜೈಲಿಗೆ ಶಿಫ್ಟ್ ಮಾಡಲಾಗಿದೆ.

# ತುರ್ತುಪರಿಸ್ಥಿತಿ ಕರಾಳ ದಿನಗಳನ್ನು ನೆನೆದ ಅಶೋಕ್




**ಬೆಂಗಳೂರು:** ''ನಾನೂ ತುರ್ತು ಪರಿಸ್ಥಿತಿ ವೇಳೆ ಜೈಲಿಗೆ ಹೋಗಿದ್ದೆ. ನನ್ನ ಜೊತೆ ಸುರೇಶ್ ಕುಮಾರ್‌ರನ್ನೂ ಬಂಧಿಸಲಾಗಿತ್ತು. ಒಂದು ತಿಂಗಳು ಜೈಲಿನಲ್ಲಿಟ್ಟು ಚಿತ್ರಹಿಂಸೆ ಕೊಟ್ಟಿದ್ದರು. ಮಲಗೋಕೆ ಸಿಮೆಂಟ್ ಕಟ್ಟೆ ಕೆಳಗೆ ನನಗೆ ಜಾಗ ಸಿಕ್ಕಿತ್ತು, ಸರಿಯಾಗಿ ಊಟವೂ ಕೊಡ್ತಿರಲಿಲ್ಲ ನಮಗೆ, ಇಷ್ಟು ಕಿರುಕುಳ ಕೊಟ್ಟ ಕಾಂಗ್ರೆಸ್ ಇವತ್ತು ರಾಜ್ಯದಲ್ಲಿ ಅಧಿಕಾರದಲ್ಲಿದೆ. ಸಂವಿಧಾನಕ್ಕೆ ಅಪಚಾರ ಮಾಡಿದ ಕಾಂಗ್ರೆಸ್ ನಮ್ಮ ಮೇಲೆ ಆರೋಪ ಮಾಡ್ತಿದೆ'' 1975ರ ತುರ್ತು ಪರಿಸ್ಥಿತಿಯ ಕರಾಳತೆ ನೆನೆದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಆಡಿದ ಆಕ್ರೋಶದ ನುಡಿಗಳಿವು.

ದೇಶದಲ್ಲಿ ತುರ್ತು ಪರಿಸ್ಥಿತಿ ಹೇರಿ 50 ವರ್ಷ ತುಂಬಿದ ಹಿನ್ನೆಲೆಯಲ್ಲಿ ರಾಜ್ಯ ಬಿಜೆಪಿ ವತಿಯಿಂದ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿರುವ ಹಳೇ ಸೆಂಟ್ರಲ್ ಜೈಲಿನಲ್ಲಿ ಪ್ರತಿಭಟನೆ ನಡೆಸಲಾಯಿತು. ಜೈಲಿನ ಬ್ಯಾರಕ್‌ನೊಳಗೆ ನಿಂತು ಕಾಂಗ್ರೆಸ್ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ಹೊರಹಾಕಿದರು. ಪ್ರತಿಪಕ್ಷ ನಾಯಕ ಆರ್.ಅಶೋಕ್, ಮಾಜಿ ಡಿಸಿಎಂ ಅಶ್ವಥ್ ನಾರಾಯಣ್, ಪರಿಷತ್ ಸದಸ್ಯರಾದ ರವಿಕುಮಾರ್, ಚಲವಾದಿ ನಾರಾಯಣ ಸ್ವಾಮಿ, ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರತಿಪಕ್ಷ ನಾಯಕ ಆರ್. ಅಶೋಕ್, ಸಂವಿಧಾನವನ್ನ ಮೂಲೆಗೆ ತಳ್ಳಿ ಸರ್ವಾಧಿಕಾರಿ ಪ್ರವೃತ್ತಿ ತೋರಿದವರು ಇಂದಿರಾಗಾಂಧಿ. ತುರ್ತುಪರಿಸ್ಥಿತಿ ಹೇರಿ ನ್ಯಾಯಾಂಗ, ಪತ್ರಿಕಾಂಗವನ್ನ ಹತ್ತಿಕ್ಕಿದ್ದರು. ಘಟಾನುಘಟಿ ನಾಯಕರನ್ನು ಜೈಲಿಗೆ ಹಾಕಲಾಯಿತು ಎಂದು ಆಕ್ರೋಶ ಹೊರಹಾಕಿದರು.

ನಾನೂ ತುರ್ತು ಪರಿಸ್ಥಿತಿ ವೇಳೆ ಜೈಲಿಗೆ ಹೋಗಿದ್ದೆ. ನನ್ನ ಜೊತೆ ಸುರೇಶ್ ಕುಮಾರ್‌ರನ್ನೂ ಬಂಧಿಸಲಾಗಿತ್ತು. ಒಂದು ತಿಂಗಳು ಜೈಲಿನಲ್ಲಿಟ್ಟು ಚಿತ್ರಹಿಂಸೆ ಕೊಟ್ಟಿದ್ದರು. ಮಲಗೋಕ್ಕೆ ಸಿಮೆಂಟ್ ಕಟ್ಟೆ ಕೆಳಗೆ ನನಗೆ ಜಾಗ ಸಿಕ್ಕಿತ್ತು, ಸರಿಯಾಗಿ ಊಟವೂ ಕೊಡ್ತಿರಲಿಲ್ಲ ನಮಗೆ, ಇಷ್ಟು ಕಿರುಕುಳ ಕೊಟ್ಟ ಕಾಂಗ್ರೆಸ್ ಇವತ್ತು ರಾಜ್ಯದಲ್ಲಿ ಅಧಿಕಾರದಲ್ಲಿದೆ. ಸಂವಿಧನಾಕ್ಕೆ ಅಪಚಾರ ಮಾಡಿದ ಕಾಂಗ್ರೆಸ್ ನಮ್ಮ ಮೇಲೆ ಆರೋಪ ಮಾಡ್ತಿದೆ ಎಂದು ಕರಾಳ ದಿನವನ್ನು ನೆನೆದರು. ಯಾವ ಮುಖ ಇಟ್ಕೊಂಡು ಕಾಂಗ್ರೆಸ್‌ನವರು ಮತ ಕೇಳ್ತಾರೆ? ಅಂಬೇಡ್ಕರ್, ಸಂವಿಧಾನ, ದೇಶದ ಜನಕ್ಕೆ ಮೋಸ ಮಾಡಿದ ಕಾಂಗ್ರೆಸ್ ಈ ದೇಶದ ಜನರ ಕ್ಷಮೆ ಕೇಳಬೇಕು. ಮಾನಮರ್ಯಾದೆ ಇದ್ದರೇ ರಾಹುಲ್ ಗಾಂದಿ ಇದರ ಬಗ್ಗೆ ಮಾತಾಡಬೇಕು. ತುರ್ತುಪರಿಸ್ಥಿತಿ ಹೇರಿದ್ದು ತಪ್ಪಾ, ಸರಿನಾ ಅಂತ ಹೇಳಲಿ? ಎಂದು ಪ್ರಶ್ನಿಸಿದರು.

ಇದೇ ವೇಳೆ ಸಂವಿಧಾನ ಬದಲಾವಣೆ ಹೇಳಿಕೆ ವಿಚಾರ ಕುರಿತು ಮಾತನಾಡಿ, ಬಿಜೆಪಿಯಿಂದ ಸಂವಿಧಾನ ಮಾಡುವ ಪ್ರಶ್ನೆಯೇ ಇಲ್ಲ. ಸಂವಿಧಾನ ನಮಗೆ ಭಗವದ್ಗೀತೆ ಅಂತ ಮೋದಿಯೇ ಹೇಳಿದ್ದಾರೆ. ಸಂವಿಧಾನಕ್ಕೆ ಅಪಚಾರ ಎಸಗಿದ ಪಾಪಿಗಳು ಕಾಂಗ್ರೆಸ್‌ನವರು ಎಂದು ಕಿಡಿ ಕಾರಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com